ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೫

# ಪಟ್ಟಿ – ೧೪

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ**

**ಮಂಗಳವಾರ, ದಿನಾಂಕ : ೨೪ನೇ ಮಾರ್ಚ್, ೨೦೨೬**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

# ಅಕ್ರಮವಾಗಿ ನಿರ್ಮಾಣಗೊಂಡ ಕಟ್ಟಡಗಳಿಗೆ 'ಎ' ಖಾತಾ ನೀಡುತ್ತಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೮ (೧೯೬೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಾಣಗೊಂಡ ಕಟ್ಟಡಗಳು ಹಾಗೂ ಬಿ–ಖಾತಾ ಆಸ್ತಿಗಳಿಗೆ ಎ–ಖಾತಾ ನೀಡುವ ಕುರಿತು ಸರ್ಕಾರ ರೂಪಿಸಿರುವ ನೀತಿ ಏನು ;

(ಆ) ಅಕ್ರಮ ಕಟ್ಟಡಗಳಿಗೆ ಎ–ಖಾತಾ ನೀಡುವುದರಿಂದ ನಗರ ಯೋಜನೆ, ರಸ್ತೆ, ಒಳಚರಂಡಿ, ಕುಡಿಯುವ ನೀರು ಮತ್ತು ಇತರೆ ಮೂಲಸೌಕರ್ಯಗಳ ಮೇಲೆ ಹೆಚ್ಚುವರಿ ಒತ್ತಡ ಉಂಟಾಗುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ನಿರ್ವಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಅಕ್ರಮ ಕಟ್ಟಡಗಳ ನಿಯಂತ್ರಣದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ವಿಫಲವಾದ ಹಿನ್ನೆಲೆಯಲ್ಲಿ ಹೊಣೆಗಾರ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡಿರುವುದೇ ; ಭವಿಷ್ಯದಲ್ಲಿ ಹೊಸ ಅನಧಿಕೃತ ಕಟ್ಟಡ ನಿರ್ಮಾಣ ತಡೆಯಲು ಸರ್ಕಾರ ರೂಪಿಸಿರುವ ವ್ಯವಸ್ಥೆಯೇನು ;

(ಈ) ಎ–ಖಾತಾ ನಿಯಮೀಕರಣ ಪ್ರಕ್ರಿಯೆಯಲ್ಲಿ ನಾಗರೀಕರಿಂದ ಹೆಚ್ಚುವರಿ ಶುಲ್ಕ ಅಥವಾ ದಂಡ ಸಂಗ್ರಹಿಸುವ ಕುರಿತು ಸರ್ಕಾರದ ನೀತಿ ಏನು ; ಈ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ಆನ್‌ಲೈನ್ ಮೂಲಕ ಜಾರಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ?

# ಸಿ.ಎ. ನಿವೇಶನಗಳನ್ನು ರಾಜಕೀಯ ಪಕ್ಷಗಳ ಕಛೇರಿಗಳಿಗೆ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೯ (೧೯೬೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಸಿವಿಕ್ ಅಮೆನಿಟಿ (ಸಿ.ಎ) ನಿವೇಶನಗಳನ್ನು ರಾಜಕೀಯ ಪಕ್ಷಗಳ ಕಛೇರಿಗಳಿಗೆ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಯಾವ ಯಾವ ನಗರಗಳಲ್ಲಿ ಸಿ.ಎ ನಿವೇಶನಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಮಂಜೂರಾತಿಗೆ ಅನುಸರಿಸಿದ ಮಾನದಂಡಗಳೇನು ;

(ಆ) ಸಾರ್ವಜನಿಕ ಉಪಯೋಗಕ್ಕಾಗಿ ಮೀಸಲಾದ ಸಿ.ಎ ನಿವೇಶನಗಳನ್ನು ರಾಜಕೀಯ ಪಕ್ಷಗಳಿಗೆ ನೀಡುವುದು ಪೌರಾಡಳಿತ ನಿಯಮಗಳಿಗೆ ವಿರುದ್ಧವಲ್ಲವೇ ; ಇಂತಹ ಮಂಜೂರಾತಿಗಳಿಗೆ ಕಾನೂನುಬದ್ಧ ಆಧಾರವೇನು ;

(ಇ) ಸಿ.ಎ ನಿವೇಶನಗಳನ್ನು ರಾಜಕೀಯ ಉದ್ದೇಶಗಳಿಗೆ ಬಳಸಿದಲ್ಲಿ ಸ್ಥಳೀಯ ನಾಗರೀಕರಿಗೆ ದೊರೆಯಬೇಕಾದ ಸಾರ್ವಜನಿಕ ಸೌಲಭ್ಯಗಳು ಕುಂಠಿತವಾಗುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಪರಿಶೀಲಿಸಲು ಸರ್ಕಾರ ಯಾವುದೇ ತನಿಖೆ ಅಥವಾ ಸಮಿತಿ ರಚಿಸಿರುವುದೇ ;

(ಈ) ರಾಜಕೀಯ ಪಕ್ಷಗಳಿಗೆ ಮಂಜೂರಾದ ಸಿ.ಎ ನಿವೇಶನಗಳ ಹಂಚಿಕೆ ಪ್ರಕ್ರಿಯೆ ಪಾರದರ್ಶಕವಾಗಿರುವುದೇ ; ಎಲ್ಲಾ ರಾಜಕೀಯ ಪಕ್ಷಗಳಿಗೆ ಸಮಾನ ಅವಕಾಶ ನೀಡಲಾಗಿದೆಯೇ ; ಇಲ್ಲವಾದಲ್ಲಿ ಸರ್ಕಾರ ಈ ಕುರಿತು ಸ್ಪಷ್ಟನೆ ನೀಡುವುದು ?

## ಕೋಲಾರ ಎಪಿಎಂಸಿ ಮಾರುಕಟ್ಟೆಯ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೦ (೧೯೮೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಎಪಿಎಂಸಿ ಮಾರುಕಟ್ಟೆಗೆ ಜಾಗದ ಕೊರತೆ ಉಂಟಾಗಿ ವರ್ಷದಿಂದ ವರ್ಷಕ್ಕೆ ಸಮಸ್ಯೆಗಳ ಪಟ್ಟಿ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು ಹಾಗೂ ಸದರಿ ಮಾರುಕಟ್ಟೆಗೆ ಯಾವ ಕಾಲಮಿತಿಯೊಳಗೆ ಜಾಗವನ್ನು ಗುರುತಿಸಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಈ ಜಿಲ್ಲೆಗೆ ಸಂಸ್ಕರಣಾ ಘಟಕ ಮತ್ತು ಶಿಥಲೀಕರಣ ಘಟಕ ಅವಶ್ಯಕವಾಗಿ ಬೇಕಾಗಿದ್ದು, ಈ ಘಟಕಗಳನ್ನು ನೀಡಲು ಸರ್ಕಾರ ಚಿಂತಿಸಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಘಟಕಗಳನ್ನು ಪೂರೈಸಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಕೋಲಾರ ಎಪಿಎಂಸಿ ಮಾರುಕಟ್ಟೆಯಲ್ಲಿ ಮೂಲಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಮೂಲಸೌಕರ್ಯಗಳ ಕೊರತೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ನಿರುದ್ಯೋಗಿ ಪದವೀಧರರು ಹಾಗೂ ಸ್ಥಳೀಯರಿಗೆ ಉದ್ಯೋಗ ನೀಡುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೧ (೧೯೪೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ, ಚಿಕ್ಕಮಗಳೂರು, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸ್ವಾಮ್ಯದ ಕೈಗಾರಿಕೆಗಳು ಹಾಗೂ ಖಾಸಗಿ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಸ್ವಾಮ್ಯದ ಕೈಗಾರಿಕೆಗಳು ಹಾಗೂ ಖಾಸಗಿ ಕೈಗಾರಿಕೆಗಳಲ್ಲಿ ನೇಮಕಾತಿ ಸಂದರ್ಭದಲ್ಲಿ ಅನುಸರಿಸುವ ಮಾನದಂಡಗಳೇನು ;

(ಈ) ಸ್ಥಳೀಯ ನಿರುದ್ಯೋಗಿ ಪದವೀಧರರು ಸೇರಿದಂತೆ ಸ್ಥಳೀಯರಿಗೆ ನೇಮಕಾತಿ ಸಂದರ್ಭದಲ್ಲಿ ಉದ್ಯೋಗ ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆಯೇ ; ಎಷ್ಟು ಮಂದಿಗೆ ಉದ್ಯೋಗ ನೀಡಲಾಗಿದೆ ?

## ಅಡಿಕೆ ಬೆಳಗಾರರಿಗೆ ದೊರೆಯುವ ಸೌಲಭ್ಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೨ (೧೯೪೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಡಿಕೆ ಬೆಳೆಯುವ ಭೂಮಿಯ ಒಟ್ಟು ವಿಸ್ತೀರ್ಣ ಎಷ್ಟು ; (ಬೆಳೆ ವಿಸ್ತೀರ್ಣ ಹಾಗೂ ವಾರ್ಷಿಕ ಉತ್ಪನ್ನದ ಸಂಪೂರ್ಣ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

(ಆ) ರಾಜ್ಯದಲ್ಲಿ ಅಡಿಕೆ ಬೆಳೆಗಾರರಿಗೆ ಸರ್ಕಾರದಿಂದ ದೊರೆಯುತ್ತಿರುವ ವಿವಿಧ ರೀತಿಯ ಸಹಾಯಧನ, ನೆರವು ಮತ್ತು ಸೌಲಭ್ಯಗಳು ಯಾವುವು ;

(ಇ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಎಷ್ಟು ಜನ ಅಡಿಕೆ ಬೆಳೆಗಾರರು ಸರ್ಕಾರದಿಂದ ದೊರೆಯುತ್ತಿರುವ ವಿವಿಧ ರೀತಿಯ ಸಹಾಯಧನ, ನೆರವು ಮತ್ತು ಸೌಲಭ್ಯಗಳನ್ನು ಪಡೆದಿದ್ದಾರೆ ಮತ್ತು ಅದಕ್ಕೆ ವಿನಿಯೋಗಿಸಿರುವ ಅನುದಾನದ ಒಟ್ಟು ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬೭೩ (೧೮೯೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ಎಷ್ಟು ; ರಾಜ್ಯದ ಆದಾಯದಲ್ಲಿ ಇವುಗಳ ಪ್ರಮಾಣ ಎಷ್ಟು ;

(ಆ) ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ನೋಂದಣಿಯಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ಎಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಈ) ವಿದ್ಯುತ್ ಸಂಪರ್ಕಕ್ಕೆ ಒ.ಸಿ ಮತ್ತು ಸಿ.ಸಿ ಕಡ್ಡಾಯ ಮಾಡಿದ ನಂತರ ಹೊಸದಾಗಿ ಪ್ರಾರಂಭ ಮಾಡುವ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ವಿದ್ಯುತ್ ಸಂಪರ್ಕವಿಲ್ಲದೆ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ೧೨೦೦ ಚದರ ಅಡಿಯ ಮನೆಗಳಿಗೆ ಒ.ಸಿ ಮತ್ತು ಸಿ.ಸಿ ಯಿಂದ ವಿನಾಯಿತಿ ನೀಡಿದಂತೆ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿಗೆ ವಿನಾಯಿತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ಆಸ್ತಿ ಇಂಡೀಕರಣದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬೭೪ (೧೮೯೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯಿಂದ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗೆ ಉನ್ನತೀಕರಣಗೊಂಡ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಗ್ರಾಮ ಪಂಚಾಯಿತಿಯ ಇ–ಸ್ವತ್ತುವಿನಿಂದ ಪುರಸಭೆಯ ಇ–ಆಸ್ತಿಗೆ ಎಷ್ಟು ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗೆ ಎಷ್ಟು

ಆಸ್ತಿಗಳನ್ನು ಇಂಡೀಕರಣ ಮಾಡಲಾಗಿದೆ ; ಮಾಡದೆ ಇದ್ದರೆ, ಇದಕ್ಕೆ ಕಾರಣಗಳೇನು ; ಇಂಡೀಕರಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಗ್ರಾಮ ಪಂಚಾಯಿತಿಯು ಉನ್ನತೀಕರಣಗೊಂಡಾಗ ಆಸ್ತಿಗಳನ್ನು ಪೌರಾಡಳಿತ ಇಲಾಖೆಯ ಸ್ಥಳೀಯ ಸಂಸ್ಥೆಗೆ ಇಂಡೀಕರಣ ಮಾಡಬೇಕು ಎನ್ನುವುದು ಪೌರಾಡಳಿತ ಇಲಾಖೆಯ ಕಾಯ್ದೆ ಮತ್ತು ಸುತ್ತೋಲೆಯಲ್ಲಿ ಇದೆಯೇ ; ಇದ್ದರೆ, ಅದರ ಪ್ರತಿಯನ್ನು ನೀಡುವುದು ;

(ಈ) ಪುರಸಭೆ ಮತ್ತು ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೂ ಸಹ ನೋಂದಾಯಿತ ದಾಖಲೆಗಳನ್ನು ನೀಡುವಂತೆ ಕೇಳಿ ಇ–ಆಸ್ತಿ ನೀಡದೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಗ್ರಾಮಠಾಣಾ ವ್ಯಾಪ್ತಿಯ ಆಸ್ತಿ. ಮಾಲೀಕರು ಇ–ಆಸ್ತಿ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು ಯಾವುವು ? (ಇದಕ್ಕೆ ಸಂಬಂಧಿಸಿದ ಕಾಯ್ದೆ/ ಸುತ್ತೋಲೆಯ ಪ್ರತಿಯನ್ನು ನೀಡುವುದು)

## "ಪ್ರತ್ಯೇಕ ಹೈಟೆಕ್ ಹೂವಿನ ಮಾರುಕಟ್ಟೆ" ಸ್ಥಾಪನೆ ಮಾಡದೆಯಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೫ (೧೯೩೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಮುಖ ಹೂವು ಬೆಳೆಯುವ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ನಗರ ಮತ್ತು ಬೆಂಗಳೂರು

ಗ್ರಾಮಾಂತರ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಹೂವಿನ ಬೆಳೆಗಳನ್ನು ಬೆಳೆಯಲಾಗುತ್ತಿದೆ ; (ಜಿಲ್ಲಾವಾರು ಮತ್ತು ಬೆಳೆವಾರು ವಿವರ ನೀಡುವುದು)

(ಆ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಹೂವು ಬೆಳೆಗಾರರ ದಶಕಗಳ ಬೇಡಿಕೆಯಾದ 'ಪ್ರತ್ಯೇಕ ಹೈಟೆಕ್ ಹೂವಿನ ಮಾರುಕಟ್ಟೆ' ಸ್ಥಾಪನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಕ್ರಾಸ್ ಬಳಿ ಸುಮಾರು ೪೬ ಎಕರೆ ಪ್ರದೇಶದಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆ ನಿರ್ಮಾಣಕ್ಕೆ ನೀಲನಕ್ಷೆ (Blue Print) ಸಿದ್ಧವಾಗಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ಮತ್ತು ಕಾಮಗಾರಿ ಯಾವಾಗ ಪ್ರಾರಂಭವಾಗಲಿದೆ ;

(ಈ) ಬೆಂಗಳೂರಿನ GKVK(ಗಾಂಧಿ ಕೃಷಿ ವಿಜ್ಞಾನ ಕೇಂದ್ರ) ಅವರಣದಲ್ಲಿ ಅಂತರಾಷ್ಟ್ರೀಯ ಪ್ರಸ್ತುತ ಕತ್ತರಿಸಿದ ಹೂವಿನ ಮಾರುಕಟ್ಟೆ (International Cut Flower Market) ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ಮತ್ತು ಪರಿಸರವಾದಿಗಳ ವಿರೋಧದ ನಡುವೆಯೂ ಈ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಪರ್ಯಾಯ ಕ್ರಮಗಳನ್ನು ಕೈಗೊಂಡಿದೆಯೇ ;

(ಉ) ಹೂವು ಬೇಗನೆ ಬಾಡಿ ಹೋಗುವುದರಿಂದ ರೈತರಿಗಾಗುವ ನಷ್ಟ ತಪ್ಪಿಸಲು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ 'ಪುಷ್ಪ ಸಂಸ್ಕರಣಾ ಘಟಕ' (Flower Processing Centre) ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

# ಕೋಲಾರ ನಗರದಲ್ಲಿ KUDA ದಿಂದ ಹೊಸ ಬಡಾವಣೆ ನಿರ್ಮಾಣ ಮಾಡದೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೬ (೧೯೩೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೋಲಾರ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಎಷ್ಟು ಖಾಸಗಿ ವಸತಿ ಬಡಾವಣೆಗಳಿಗೆ ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರವು (KUDA) ಅನುಮೋದನೆ ನೀಡಿದೆ ; (ವರ್ಷವಾರು ಮಾಹಿತಿ ನೀಡುವುದು)

(ಆ) ಖಾಸಗಿ ಬಿಲ್ಡರ್‌ಗಳು ಬೃಹತ್ ಪ್ರಮಾಣದಲ್ಲಿ ಬಡಾವಣೆಗಳನ್ನು ನಿರ್ಮಿಸುತ್ತಿದ್ದರೂ KUDA ಸ್ವತಃ ಭೂಸ್ವಾಧೀನ ಮಾಡಿಕೊಂಡು ಹೊಸ ಬಡಾವಣೆಗಳನ್ನು ನಿರ್ಮಿಸುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) KUDA ವತಿಯಿಂದ ಕಳೆದ ೩ ವರ್ಷಗಳಲ್ಲಿ ಎಷ್ಟು ಸ್ವಂತ ಬಡಾವಣೆಗಳನ್ನು (Own Layouts) ಅಭಿವೃದ್ಧಿಪಡಿಸಲಾಗಿದೆ ; ಇವುಗಳಲ್ಲಿ ನಿವೇಶನ ಹಂಚಿಕೆಯ ಸ್ಥಿತಿಗತಿ ಏನು ;

(ಈ) ರೈತರೊಂದಿಗೆ ೫೦:೫೦ ಅನುಪಾತದಲ್ಲಿ ಅಥವಾ ಜಂಟಿ ಪಾಲುದಾರಿಕೆಯಲ್ಲಿ ಬಡಾವಣೆಗಳನ್ನು ನಿರ್ಮಿಸುವ ಯೋಜನೆಯನ್ನು ಕೋಲಾರದಲ್ಲಿ ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ, ೨೦೨೬–೨೭ನೇ ಸಾಲಿನಲ್ಲಿ ಘೋಷಿಸಲಾಗುವ ಹೊಸ ಬಡಾವಣೆಗಳು ಯಾವುವು ;

(ಉ) ಖಾಸಗಿ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಮತ್ತು ದಾಖಲೆಗಳ ಗೊಂದಲದಿಂದ ಸಾರ್ವಜನಿಕರು ವಂಚನೆಗೊಳಗಾಗುತ್ತಿರುವುದನ್ನು ತಡೆಯಲು ಮತ್ತು "Housing for All" ಯೋಜನೆಯಡಿ ಕೈಗೆಟುಕುವ ದರದ ನಿವೇಶನಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು ?

## ಹಾಪ್‌ಕಾಮ್ಸ್ ಮಳಿಗೆಗಳು ಮುಚ್ಚುತ್ತಿರುವುದರಿಂದ ರೈತರಿಗೆ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೭ (೧೯೩೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಹಾಪ್‌ಕಾಮ್ಸ್ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮಳಿಗೆಗಳು ಮುಚ್ಚಲ್ಪಟ್ಟಿವೆ ; (ಜಿಲ್ಲಾವಾರು ಮತ್ತು ಬೆಂಗಳೂರು ನಗರದ ಸಂಪೂರ್ಣ ವಿವರ ನೀಡುವುದು)

(ಆ) ಹಾಪ್‌ಕಾಮ್ಸ್ ಕೇಂದ್ರಗಳು ಮುಚ್ಚಲು ಕಾರಣಗಳೇನು ; ಸಿಬ್ಬಂದಿ ಕೊರತೆ, ಮೂಲಸೌಕರ್ಯದ ಕೊರತೆ ಅಥವಾ ಖಾಸಗಿ ಆನ್‌ಲೈನ್ ಮಾರುಕಟ್ಟೆಗಳ ಪೈಪೋಟಿ ಇದಕ್ಕೆ ಕಾರಣವೇ ;

(ಇ) ಹಾಪ್‌ಕಾಮ್ಸ್ ನಂಬಿದ್ದ ರೈತರು ಮತ್ತು ಸಾರ್ವಜನಿಕರು ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮುಚ್ಚಲ್ಪಟ್ಟಿರುವ ಹಾಪ್‌ಕಾಮ್ಸ್ ಕೇಂದ್ರಗಳನ್ನು ಪುನರಾರಂಭಿಸಲು ಮತ್ತು ಈ ಸಂಸ್ಥೆಯನ್ನು ಆರ್ಥಿಕವಾಗಿ ಬಲಪಡಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಉ) ಹಾಪ್‌ಕಾಮ್ಸ್ ಮೂಲಕ ಮನೆಬಾಗಿಲಿಗೆ ತರಕಾರಿ ತಲುಪಿಸುವ ಯೋಜನೆ ಅಥವಾ ಮೊಬೈಲ್ ವ್ಯಾನ್ ಸೌಲಭ್ಯಗಳನ್ನು ರಾಜ್ಯಾದ್ಯಂತ ವಿಸ್ತರಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಸ್ಥಳೀಯ ಸಂಸ್ಥೆಗಳಲ್ಲಿ ಸಂಗ್ರಹಿಸಿರುವ ಸೆಸ್‌ನ್ನು ವರ್ಗಾಯಿಸದೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೮ (೧೯೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭಿಕ್ಷಾಟನಾ ಉಪಕರಗಳ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸಂಗ್ರಹಿಸಲಾಗಿರುವ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಯಿಸಲಾಗಿದೆಯೇ ; (ಇದರ ಪೂರ್ಣ ವಿವರ ಒದಗಿಸುವುದು)

(ಇ) ಈ ರೀತಿ ಸಂಗ್ರಹಿಸಲಾದ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟೆಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ಮೂರು ವರ್ಷದಿಂದ ಸ್ಥಳೀಯ ಸಂಸ್ಥೆಗಳು ರೂ.೫೦೪.೦೦ ಕೋಟಿ ಆರೋಗ್ಯ ಸೆಸ್, ರೂ.೫೪.೦೦ ಕೋಟಿ ಗ್ರಂಥಾಲಯ ಉಪಕರ ಮತ್ತು ರೂ.೩೦.೦೦ ಕೋಟಿ ಭಿಕ್ಷಾಟನಾ ಸೆಸ್ ಹಣವನ್ನು ಇದುವರೆಗೂ ಸಂಬಂಧಪಟ್ಟ ಇಲಾಖೆಗಳ ಖಾತೆಗೆ ವರ್ಗಾಯಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಇದು ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುವುದಿಲ್ಲವೇ ?

## ಕೋಲಾರ ನಗರದಲ್ಲಿ ಅವೈಜ್ಞಾನಿಕ ಒಳಚರಂಡಿ ಕಾಮಗಾರಿ ಮಾಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೭ (೧೯೩೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು, ಇವುಗಳನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ; ಸದರಿ ಕಾಮಗಾರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಈ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳಚರಂಡಿಗಳು ತುಂಬಿ, ಕೊಳಚೆ ನೀರು ರಸ್ತೆ ಮೇಲೆ ಹರಿಯುತ್ತಿದ್ದು ಇದರಿಂದ ಪಟ್ಟಣದ ರಸ್ತೆಗಳಲ್ಲಿ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ನಗರಸಭೆ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ನಗರದಲ್ಲಿ ಒಳಚರಂಡಿಯಿಂದ ಕೊಳಚೆ ನೀರು ತುಂಬಿ ರಸ್ತೆ ಮೇಲೆ ಹರಿಯುತ್ತಿರುವ ಮಾರ್ಗಗಳ ದುರಸ್ಥಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿದೇಶಿ ನೇರ ಹೂಡಿಕೆ ಕುರಿತು

**ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೦ (೯೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ರಾಜ್ಯಕ್ಕೆ ಹರಿದು ಬಂದ ವಿದೇಶಿ ನೇರ ಹೂಡಿಕೆ ಪ್ರಮಾಣವೆಷ್ಟು ; (ವಿವರ ನೀಡುವುದು)

(ಆ) ಜಾಗತಿಕ ಆರ್ಥಿಕ ಬೆಳವಣಿಗೆಗಳ ಕಾರಣದಿಂದ ಈ ಹೂಡಿಕೆ ಪ್ರಮಾಣದಲ್ಲಿ ಕೊರತೆ ಆಗಿದೆಯೇ ;

(ಇ) ಕಳೆದ ೩ ವರ್ಷಗಳಲ್ಲಿ ನೇರ ಹೂಡಿಕೆ ಪ್ರಮಾಣ ಹಾಗೂ ಹಿಂದಿನ ೫ ವರ್ಷಗಳ ಹೂಡಿಕೆಗೆ ಹೋಲಿಸಿದರೆ ರಾಜ್ಯಕ್ಕೆ ಕೊರತೆ ಆಗಿದೆಯೇ ; ಹಾಗಿದ್ದಲ್ಲಿ, ಈ ನಷ್ಟ ಭರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ನಷ್ಟದಲ್ಲಿರುವ ಹಾಪ್‌ಕಾಮ್ಸ್‌ಗಳನ್ನು ಲಾಭದ ಹಳಿಗೆ ತರುವ ಬಗ್ಗೆ

**ಡಾ॥ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೧ (೧೯೯೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಹಾಪ್‌ಕಾಮ್ಸ್ (ತೋಟದ ಬೆಳೆಗಾರರ ಸಹಕಾರಿ ಮಾರಾಟ ಮತ್ತು ಸಂಸ್ಕರಣ ಸಂಘ) ಮಳಿಗೆಗಳಿವೆ ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಎಷ್ಟು ಮಳಿಗೆಗಳು ಬಂದ್ ಆಗಿವೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಇ) ಉಳಿದ ಹಾಪ್‌ಕಾಮ್ಸ್‌ಗಳಲ್ಲಿ ಎಷ್ಟು ಹಾಪ್‌ಕಾಮ್ಸ್‌ಗಳು ಲಾಭ ಮಾಡುತ್ತಿವೆ ; ಎಷ್ಟು ಹಾಪ್‌ಕಾಮ್ಸ್‌ಗಳು ನಷ್ಟದಲ್ಲಿವೆ ; ನಷ್ಟಕ್ಕೆ ಕಾರಣಗಳೇನು ;

(ಈ) ಹಾಪ್‌ಕಾಮ್ಸ್‌ಗಳಲ್ಲಿ ಎಷ್ಟು ಹುದ್ದೆಗಳು ಮಂಜೂರಾಗಿವೆ ; ಈ ಪೈಕಿ ಎಷ್ಟು ಹುದ್ದೆಗಳು ಖಾಲಿ ಇವೆ ;

(ಉ) ಕಳೆದ ೩ ವರ್ಷಗಳಲ್ಲಿ ಹಾಪ್‌ಕಾಮ್ಸ್ ಅನುಭವಿಸಿದ ನಷ್ಟ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಊ) ಹಾಪ್‌ಕಾಮ್ಸ್ ಅನ್ನು ಲಾಭದ ಹಳಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರಗಳನ್ನು ನೀಡುವುದು)

# ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಒಳಚರಂಡಿಯ ಕಲುಷಿತಗೊಂಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೨ (೧೯೩೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ಒಳಚರಂಡಿಯ ಕಲುಷಿತ ನೀರಿನಿಂದ ಇಡಿ ನಗರಪಾಲಿಕೆ ಹಾಳಾಗಿದ್ದು, ಇದರ ಬಗ್ಗೆ ಇಲಾಖೆ ಯಾವ ಕ್ರಮಕೈಗೊಂಡಿದೆ ; ಈ ಬಗ್ಗೆ ವರದಿಯನ್ನು ಸಂಗ್ರಹಿಸಿದೆಯೇ ; (ವಿವರ ನೀಡುವುದು)

(ಆ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪೈಪ್‌ಗಳು ಸ್ಟೋನ್ ವೈರ್ ಪೈಪ್ ಮತ್ತು ಕಲ್ಲಿನಲ್ಲಿ ಕಟ್ಟಿದ ಚೇಂಬರ್ ಎಲ್ಲಾ ಕರಗಿಹೋಗಿ ನಗರಪಾಲಿಕೆಯ ಒಳಚರಂಡಿಯ ನೀರು ಬಾವಿಗಳಿಗೆ ಹರಿದು, ಬಾವಿಗಳ ನೀರು ಮತ್ತು ಯಾವುದೇ ನೀರು ಕುಡಿಯಲು ಅಸಾಧ್ಯ ಪರಿಸ್ಥಿತಿ ಉಂಟಾಗಿದ್ದು ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಸ್ಮಾರ್ಟ್ ಸಿಟಿಯ ಹಣವನ್ನು ನಗರದ ಕುಡಿಯುವ ನೀರು ಮತ್ತು ಮೀನುಗಾರಿಕೆಯ ಬಂದರುಗಳ ಅಭಿವೃದ್ಧಿ ಮಾಡದೇ ಮೂಲಭೂತ ಸಮಸ್ಯೆಗಳು ಹಾಗೇ ಉಳಿದಿದ್ದು, ಇದನ್ನು ಸರಿಪಡಿಸಲು ಇಲಾಖೆಯ ಯೋಜನೆಗಳಾವುವು ;

(ಈ) ನಗರಪಾಲಿಕೆ ನೀರು ನೇತ್ರಾವತಿ ನದಿಯಿಂದ ಸರಬರಾಜು ಮಾಡಲಾಗುತ್ತಿದ್ದು ಈ ನದಿಗೆ ಪ್ಲಾಸ್ಟಿಕ್ ವಸ್ತುಗಳು ಎಸದಿರುವುದರಿಂದ ನದಿಯ ನೀರು ಕಲುಷಿತಗೊಂಡಿದೆ ಎಂಬ

ವರದಿಗಳು ಬಂದಿದ್ದು, ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಮಾನ್ಯ ಸಚಿವರು ಮಂಗಳೂರು ನಗರಕ್ಕೆ ಭೇಟಿ ನೀಡಿದಾಗ ಕೆರೆಯ ನೀರುಗಳು ಘನತ್ಯಾಜ್ಯ ಒಳಚರಂಡಿ ನೀರು, ಅಭಿವೃದ್ಧಿ ಆಗದೆ ಎಲ್ಲಾ ಕೆರೆಗಳ ನೀರು ಒಳಚರಂಡಿ ವಾಸನೆ ಬರುತ್ತಿರುವುದು ಗಮನಿಸಿ ಈ ಬಗ್ಗೆ ಕೂಡಲೇ ವರದಿಗಳನ್ನು ಸಂಗ್ರಹಿಸಲು ಅಧಿಕಾರಿಗಳಿಗೆ ನಿರ್ದೇಶಿಸಿದ್ದರೂ ಇದುವರೆಗೂ ಕ್ರಮಕೈಗೊಳ್ಳುವುದೇ ಈ ಬಗ್ಗೆ ನಿರ್ಲಕ್ಷ್ಯ ತೋರಿಸಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಕೈಗಾರಿಕಾ ಚಟುವಟಿಕೆಗೆ ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೩ (೧೯೩೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೈಗಾರಿಕಾ ಚಟುವಟಿಕೆಗೆ ಸ್ವಾಧೀನಪಡಿಸಿಕೊಂಡಿರುವ ಮತ್ತು ಸ್ವಾಧೀನ ಪ್ರಕ್ರಿಯೆ ಹಂತದಲ್ಲಿರುವ ಭೂಮಿ ಎಷ್ಟು ; ಇನ್ನೂ ಭೂ ಸ್ವಾಧೀನ ಪಡಿಸಿಕೊಳ್ಳದೇ ಇರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಅಭಿವೃದ್ಧಿಪಡಿಸಿರುವ ಮತ್ತು ಅಭಿವೃದ್ಧಿ ಪಡಿಸುತ್ತಿರುವ ಜಮೀನು ಎಷ್ಟು : (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಎಲ್ಲಾ ಮಾಲೀಕರಿಗೆ ಭೂ ಪರಿಹಾರ ನೀಡಲಾಗಿದೆಯೇ ಭೂ ಪರಿಹಾರ ನೀಡದೇ ಇರುವ ಪ್ರಕರಣಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಕಳೆದ ೩ ವರ್ಷಗಳಲ್ಲಿ ಅನುಮೋದನೆಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೪ (೧೯೩೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಅನುಮೋದನೆಗೊಂಡ ಕಾಮಗಾರಿಗಳು ಯಾವುವು ; ಪೂರ್ಣಗೊಂಡ ಕಾಮಗಾರಿಗಳು ಹಾಗೂ ಬಾಕಿ ಇರುವ ಕಾಮಗಾರಿಗಳೆಷ್ಟು ; (ವಿವರ ನೀಡುವುದು)

(ಆ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ ವತಿಯಿಂದ ಕೈಗೊಂಡಿರುವ ಕಾಮಗಾರಿಗಳಾವುವು; ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಆಗಿದೆ ; ಖರ್ಚಾಗಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ವಾಣಿಜ್ಯ ಕಟ್ಟಡಗಳಿಗೆ ಕಟ್ಟಡ ನಿರ್ಮಾಣದ ಅನುಮತಿ ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರೈತರ ಬೆಳೆ ವಿಮೆ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೫ (೧೯೩೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಬೆಳೆ ವಿಮೆ ಯೋಜನೆ ಜಾರಿಯಲ್ಲಿದೆಯೇ : ೨೦೨೫–೨೬ನೇ ಸಾಲಿನಲ್ಲಿ ಎಷ್ಟು ರೈತರು ಬೆಳೆ ವಿಮೆ ಮಾಡಿಸಿಕೊಂಡಿದ್ದಾರೆ ; (ವಿವರ ನೀಡುವುದು)

(ಆ) ಯಾವ ಯಾವ ಬೆಳೆಗೆ ಎಷ್ಟು ವಿಮೆ ಹಣ ನಿಗದಿಪಡಿಸಲಾಗಿದೆ ; ಎಕರೆಗೆ ಯಾವ ರೀತಿ ಪರಿಹಾರ ನೀಡಲಾಗುತ್ತದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ರೈತರಿಗೆ ಬೆಳೆ ವಿಮೆಯ ಹಣವನ್ನು ನೀಡಲಾಗಿದೆ ; (ವಿವರ ನೀಡುವುದು)

(ಈ) ಬೆಳೆ ವಿಮೆ ಯಾವಾಗ ಮಾಡಿಕೊಳ್ಳಬೇಕೆಂಬ ಮಾರ್ಗಸೂಚಿಗಳಿವೆಯೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೬ (೧೯೩೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ಎಷ್ಟು ಹುದ್ದೆಗಳು ಖಾಲಿ ಇದೆ ; ಯಾವಾಗ ಭರ್ತಿ ಮಾಡಿಕೊಳ್ಳಲಾಗುವುದು ; (ವಿವರ ನೀಡುವುದು)

(ಇ) ಮಂಗಳೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು: ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಹುಬ್ಬಳಿ–ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ನವೀನ್ ಹೋಟೆಲ್ ಗಾಲ್ಫ್ ಕ್ಲಬ್‌ಗೆ KIADB ವತಿಯಿಂದ ಮಂಜೂರಾದ ಜಮೀನಿನ ಕುರಿತು

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೧೬೮೭ (೧೯೮೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡದ ನವೀನ್ ಹೋಟೆಲ್ ಗಾಲ್ಫ್ ಕ್ಲಬ್‌ಗೆ ಮಂಜೂರಾದ ಜಮೀನು "ಹಸಿರು ವಲಯ" (Green Zone) ಎಂದು ಸರ್ಕಾರ ತಿಳಿಸಿದ್ದು, ಆದರೆ ದಿನಾಂಕ :08.08.2024 ರ ಮೂಲ ಖರೀದಿ ಪತ್ರದಲ್ಲಿ ಇಂತಹ ಯಾವುದೇ ಷರತ್ತಿನ ಉಲ್ಲೇಖವಿಲ್ಲದಿರಲು ಕಾರಣವೇನು ;

(ಆ) ಸರ್ಕಾರದ ಉತ್ತರಕ್ಕೂ ಮತ್ತು ಸಬ್–ರಿಜಿಸ್ಟಾರ್ ಕಛೇರಿಯ ಖರೀದಿ ದಾಖಲೆಗಳಿಗೂ ಇರುವ ಈ ಗಂಭೀರ ವ್ಯತ್ಯಾಸಕ್ಕೆ

ಹೊಣೆಗಾರರು ಯಾರು ; ಇಲಾಖೆಯು ತಪ್ಪು ಮಾಹಿತಿ ನೀಡಿದೆಯೇ ;

(ಇ) ೧೧೪ ಎಕರೆ ೧೭ ಗುಂಟೆ ಜಮೀನನ್ನು ಅಂದಿನ ಮಾರುಕಟ್ಟೆ ಮೌಲ್ಯಕ್ಕೆ ನೋಂದಾಯಿಸದೆ ಕೇವಲ ರೂ.೯೭,೬೧,೪೪೩ಕ್ಕೆ ನೋಂದಣಿ ಮಾಡಿದ್ದರಿಂದ, ಸರ್ಕಾರಕ್ಕೆ ಬರಬೇಕಿದ್ದ ಸುಮಾರು ರೂ.೧೫೦ ಕೋಟಿ ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಂಚನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮೂರು ದಶಗಳಿಂದಲೂ ಉದ್ದೇಶಿತದ ಬಳಕೆಗೆ ಬಳಕೆಯಾಗದೆ ಉಳಿದಿರುವ ಈ ಜಮೀನನ್ನು ಸರ್ಕಾರ ಕೂಡಲೇ ವಾಪಸ್ ಪಡೆಯಲು ಕ್ರಮ ಕೈಗೊಳ್ಳುವುದೇ ಮತ್ತು ಈ ಜಮೀನು ದುರ್ಬಳಕೆ ಮತ್ತು ಇಡೀ ಹಗರಣದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಲು ಸರ್ಕಾರ ಸಿದ್ಧವಿದೆಯೇ ?

## ಏಕ ನಿವೇಶನ ಹಾಗೂ ಬಹು ನಿವೇಶನಗಳ ಅನುಮೋದನೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೮ (೧೯೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಏಕ ನಿವೇಶನ (Single Site) ಬಹು ನಿವೇಶನ (Multiple Site) ಹಾಗೂ ಕಟ್ಟಡ ನಕ್ಷೆಗಳ ತಾಂತ್ರಿಕ ಅನುಮೋದನೆ, ಕದ ನಂಬರ್, ದೃಢಪತ್ರ ಪಡೆಯಲು ಜನರು ಸಂಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಭಾಗದಲ್ಲಿ ದೃಢಪತ್ರ ವಿತರಣೆ ಅಧಿಕಾರವನ್ನು ಸ್ಥಳೀಯ ಯೋಜನಾ ಪ್ರಾಧಿಕಾರಗಳಿಗೆ ನೀಡಿದ ನಂತರ ಇಲ್ಲಿಯವರೆಗೆ ಸ್ವೀಕರಿಸಲಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ಮಂಜೂರಾದ, ತಿರಸ್ಕೃತ ಮತ್ತು ಪ್ರಸ್ತುತ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರ ನಿಡುವುದು)

(ಇ) ಅರ್ಜಿಗಳ ವಿಲೇವಾರಿಗೆ ಸರ್ಕಾರ ನಿಗದಿಪಡಿಸಿರುವ ಗರಿಷ್ಠ ಕಾಲಮಿತಿ (Time Limit) ಎಷ್ಟು, ಸದರಿ ಕಾಲಮಿತಿಯನ್ನು ಮೀರಿದ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ನಗರ ಯೋಜನಾ ಪ್ರಾಧಿಕಾರಗಳಲ್ಲಿ ತಾಂತ್ರಿಕ ಸಿಬ್ಬಂದಿಗಳ ಮಂಜೂರಾತಿ ಹುದ್ದೆ ಹಾಗೂ ಖಾಲಿ ಹುದ್ದೆಗಳ ವಿವರ ಹಾಗೂ ಅವುಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಉ) ಗ್ರಾಮೀಣ ಭಾಗಗಲ್ಲಿ ೫/೧೦ ಸೆಟ್ಸ್‌ವರೆಗಿನ ಸಣ್ಣ ನಿವೇಶನಗಳಿಗೆ ಸರಳೀಕೃತ ಅನುಮೋದನಾ ವಿಧಾನ ಜಾರಿಗೆ ತರುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; ಗ್ರಾಮ ಪಂಚಾಯಿತಿ ಮಟ್ಟದಲ್ಲೇ ದೃಢಪತ್ರ ನೀಡುವ ಅಧಿಕಾರ ವಹಿಸುವ ಕುರಿತು ಸರ್ಕಾರದ ಅಭಿಪ್ರಾಯವೇನು ;

(ಊ) ಇ–ಗವರ್ನೆನ್ಸ್ ವ್ಯವಸ್ಥೆಯನ್ನು ಸಂಪೂರ್ಣ ಪಾರದರ್ಶಕಗೊಳಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಋ) ಗ್ರಾಮೀಣ ಭಾಗಗಳಿಗೆ ಪ್ರತ್ಯೇಕ ಮಾರ್ಗಸೂಚಿ (Separate Rural Single Layout, Building Bye-law) ರೂಪಿಸಿ ನಗರ ನಿಯಮಗಳಿಂದ ವಿನಾಯತಿ ನೀಡುವ ಕುರಿತು ಸರ್ಕಾರದ ನಿಲುವೇನು ?

## ವಿವಿಧ ಇಲಾಖೆಗಳಲ್ಲಿನ ವೇತನ ಶ್ರೇಣಿಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೯ (೧೯೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುರಸಭೆಯ ಮುಖ್ಯಾಧಿಕಾರಿ ಶ್ರೇಣಿ ೧ ರ ಮತ್ತು ಇವರ ಅಧೀನದ ಸಿಬ್ಬಂದಿ ಪರಿಸರ ಅಭಿಯಂತರರ ಹಾಗೂ ನಗರಸಭೆ ಗ್ರೇಡ್–೨ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಾಯುಕ್ತರು ಶ್ರೇಣಿ–೨ರ ವೇತನ ಶ್ರೇಣಿ ಮತ್ತು ಇವರ ಅಧೀನದ ಸಿಬ್ಬಂದಿಗಳಾದ ಸಹಾಯಕ ಕಾರ್ಯಪಾಲಕ ಅಭಿಯಂತರರು (ಸಿವಿಲ್) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ಇವರ ವೇತನ ಶ್ರೇಣಿ ಎಷ್ಟು ;

(ಆ) ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿಯಿಂದ ಮೇಲ್ದರ್ಜೆಗೇರಿದ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಯ ವೇತನ ಶ್ರೇಣಿ ಎಷ್ಟು; ವ್ಯತ್ಯಾಸಗಳಿದ್ದಲ್ಲಿ ಸರ್ಕಾರದ ಗಮನಕ್ಕೆ ಇದೆಯೇ ; ಈ ಬಗ್ಗೆ ಸರ್ಕಾರದ ಮುಂದಿನ ಕ್ರಮ ಏನು ;

(ಇ) ಪಟ್ಟಣ ಪಂಚಾಯಿತಿಯಲ್ಲಿ ಮುಖ್ಯಾಧಿಕಾರಿ ಶ್ರೇಣಿ–೨ರ ಮತ್ತು ಅವರ ಅಧೀನ ಅಧಿಕಾರಿಗಳಾದ ಸಮುದಾಯ ಸಂಘಟನಾಧಿಕಾರಿ ಮತ್ತು ಕಿರಿಯ ಅಭಿಯಂತರರ ವೇತನ ಶ್ರೇಣಿ ಎಷ್ಟು; ಮುಖ್ಯಾಧಿಕಾರಿಗಿಂತ ಅವರ ಅಧೀನದಲ್ಲಿರುವ ಅಧಿಕಾರಿಗಳಿಗೆ ವೇತನ ಶ್ರೇಣಿ ಜಾಸ್ತಿ ಇದ್ದರೆ ಇದರಿಂದಾಗುವ ಪರಿಣಾಮವು ಸರ್ಕಾರದ ಗಮನಕ್ಕೆ ಇದೆಯೇ ;

(ಈ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳಿಗೆ ಹುದ್ದೆ ತೋರಿಸದೆ ವರ್ಗಾವಣೆ ಮಾಡಿ (waiting period) ಅಧಿಕಾರಿಗಳನ್ನು ಎಷ್ಟು ಅವಧಿಗಳಿಂದ ಸೂಕ್ತ ಹುದ್ದೆಗಾಗಿ ಕಾಯುತ್ತಿದ್ದಾರೆ ; (ಸಂಪೂರ್ಣವಿವರ ನೀಡುವುದು) ಇಂತಹ ಅಧಿಕಾರಿಗಳಿಗೆ ವೇತನ ಇಲ್ಲದೆ ಅವರ ಕುಟುಂಬ ನಿರ್ವಹಣೆಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ, ಸದರಿ ಅಧಿಕಾರಿಗಳ ಬಗ್ಗೆ ತೆಗೆದುಕೊಂಡ ಸರ್ಕಾರದ ನಿಲುವು ಏನು ;

(ಉ) ರಾಜ್ಯಾದಂತ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇತರ ಇಲಾಖೆಯ ಅಧಿಕಾರಿಗಳು ಎಷ್ಟು ? (ಇಲಾಖಾವಾರು ಜಿಲ್ಲಾವಾರು ಮಾಹಿತಿ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಬಡಾವಣೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೦ (೨೦೦೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಏಕ ನಿವೇಶನ ಮತ್ತು ಬಹು ನಿವೇಶನ ಬಡಾವಣೆಗಳ ಅಭಿವೃದ್ಧಿಗಿರುವ ಮಾನದಂಡ ಮತ್ತು ವ್ಯತ್ಯಾಸಗಳೇನು ; ಬಡಾವಣೆ ಅಭಿವೃದ್ಧಿ ಶುಲ್ಕವನ್ನು ಯಾವ ಮಾನದಂಡದ ಆಧಾರದ ಮೇಲೆ ವಸೂಲಿ ಮಾಡಲಾಗುವುದು ; ಯಾವೆಲ್ಲ ಶುಲ್ಕವನ್ನು ವಿಧಿಸಲಾಗುತ್ತದೆ ; ವಸೂಲಿ ಮಾಡುವ ಪ್ರಾಧಿಕಾರ ಯಾವುದು ;

(ಆ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಏಕನಿವೇಶನ ಬಡಾವಣೆ ಅನುಮೋದನೆಯಾದ ನಂತರ ಸದರಿ ನಿವೇಶನವನ್ನು ಅಭಿವೃದ್ಧಿ ಪಡಿಸುವವರು ಯಾರು ;

(ಇ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಏಕ ನಿವೇಶನ ಖಾಸಗಿ ಬಡಾವಣೆಯಲ್ಲಿ ರಸ್ತೆ ಅಭಿವೃದ್ಧಿ ಪಡಿಸುವವರು ಯಾರು ; ನಿವೇಶನದ ಮಾಲೀಕರು ರಸ್ತೆ ಅಭಿವೃದ್ಧಿ ಪಡಿಸದಿದ್ದಲ್ಲಿ ಅಭಿವೃದ್ಧಿ ಶುಲ್ಕ ವಸೂಲಿ ಮಾಡುವ ಪ್ರಾಧಿಕಾರ ಯಾವುದು ಮತ್ತು ಮಾನದಂಡಗಳೇನು ;

(ಈ) ರಾಜ್ಯದ ಎಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ ವ್ಯಾಪಾರ ಲೈಸೆನ್ಸ್ ದೃಢಪತ್ರ, ನೀರಾಕ್ಷೇಪಾಣಾ ಪತ್ರ, ಭೂ ಅಭಿವೃದ್ಧಿ ಶುಲ್ಕ, ಕಟ್ಟಡ ಲೈಸೆನ್ಸ್ ಶುಲ್ಕ, ಹಾಗೂ ಇತರ ಸೇವೆಗಳಿಗೆ ವಿಧಿಸುವ ಶುಲ್ಕಗಳ ಬಗ್ಗೆ ಉಪ ನಿಯಮವನ್ನು (Bylaw) ರಚಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) ಸದರಿ ಉಪ ನಿಯಮವನ್ನು ಇದುವರೆಗೂ ರಚಿಸಲಾಗದಿದ್ದಲ್ಲಿ ಕಾರಣವೇನು ; ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಹೋಂ ಸ್ಟೇ, ಪಿಜಿ, ಸರ್ವೀಸ್ ಅಪಾರ್ಟ್‌ಮೆಂಟ್, ರೆಸಾರ್ಟ್ ಹಾಗೂ ಇತರ ವಾಣಿಜ್ಯ/ಪ್ರವಾಸಿ ಕಟ್ಟಡ ಮತ್ತು ಪರವಾನಿಗೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೧ (೧೮೯೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಸತಿ ಗೃಹಗಳನ್ನು ಹೋಂ ಸ್ಟೇ, ಪಿಜಿ. ಸರ್ವೀಸ್ ಅಪಾರ್ಟ್‌ಮೆಂಟ್, ರೆಸಾರ್ಟ್ ಹಾಗೂ ಇತರ ವಾಣಿಜ್ಯ/ಪ್ರವಾಸಿ ವಸತಿ ಉದ್ದೇಶಗಳಿಗೆ ಬಳಸಲು ಅನುಸರಿಸಲಾಗುತ್ತಿರುವ ಪ್ರಸ್ತುತ ನಿಯಮಗಳು ಮತ್ತು

ಮಾರ್ಗಸೂಚಿಗಳು ಯಾವುವು ; ವಸತಿ ಬಳಕೆಯನ್ನು ವಾಣಿಜ್ಯ ಬಳಕೆಗೆ ಪರಿವರ್ತಿಸಲು ಅಗತ್ಯವಿರುವ ಪರವಾನಗಿ ಮತ್ತು ಅನುಮತಿ ಪಡೆಯುವ ಪ್ರಮಾಣೀಕೃತ ಮಾರ್ಗಸೂಚಿಗಳೇನು ;

(ಆ) ಮಂಗಳೂರು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ನೋಂದಾಯಿಸಲಾದ ಹೋಂ ಸ್ಟೇ, ಪಿಜಿ, ಸರ್ವೀಸ್ ಅಪಾರ್ಟ್‌ಮೆಂಟ್, ರೆಸಾರ್ಟ್ ಸಂಸ್ಥೆಗಳ ಸಂಖ್ಯೆ ಅವುಗಳಿಂದ ಸಂಗ್ರಹಿಸಲಾದ ಪರವಾನಗಿ ಶುಲ್ಕ ಮತ್ತು ತೆರಿಗೆಗಳು ಮತ್ತು ಇತರ ವಿವರಗಳೇನು ;

(ಇ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಿಜಿ ವಸತಿಗಳಿಗೆ ಸಂಬಂಧಿಸಿದಂತೆ ಕಟ್ಟಡ ಸುರಕ್ಷತೆ, ಅಗ್ನಿಶಾಮಕ ಪ್ರಮಾಣಪತ್ರ, ಪಾರ್ಕಿಂಗ್ ವ್ಯವಸ್ಥೆ, ಕೊಠಡಿಗಳ ಗರಿಷ್ಠ ಸಾಮರ್ಥ್ಯ. ಆರೋಗ್ಯ ಮತ್ತು ಸ್ವಚ್ಛತಾ ಮಾನದಂಡಗಳು ಹಾಗೂ ಸ್ಥಳೀಯ ಪೊಲೀಸ್ ಪರಿಶೀಲನೆ ಸಂಬಂಧಿಸಿದ ನಿಯಮಗಳು ಯಾವುವು ;

(ಈ) ಕಳೆದ ಮೂರು ವರ್ಷಗಳಲ್ಲಿ ಮಂಗಳೂರು ಮಹಾನಗರ ಪಾಲಿಕೆವಾರು ಎಷ್ಟು ಹೋಂ ಸ್ಟೇ, ಪಿಜಿ, ಸರ್ವೀಸ್ ಅಪಾರ್ಟ್‌ಮೆಂಟ್ ಹಾಗೂ ರೆಸಾರ್ಟ್‌ಗಳು ನೋಂದಾಯಿಸಲ್ಪಟ್ಟಿವೆ ; ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಪಿಜಿ/ಹೋಂ ಸ್ಟೇ/ವಸತಿ ವಾಣಿಜ್ಯ ಕಟ್ಟಡಗಳ ಸಂಖ್ಯೆ ಎಷ್ಟು : ಅವುಗಳ ವಿರುದ್ಧ ಕೈಗೊಂಡಿರುವ ಕ್ರಮಗಳ ವಿವರವೇನು ;

(ಉ) ವಸತಿ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಪಿಜಿ ಮತ್ತು ಹೋಂ ಸ್ಟೇಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಅವುಗಳ ನಿಯಂತ್ರಣಕ್ಕೆ ರಾಜ್ಯವ್ಯಾಪಿ ಏಕೀಕೃತ ಮಾರ್ಗಸೂಚಿ ರೂಪಿಸುವ ಬಗ್ಗೆ ಸರ್ಕಾರದ ನಿಲುವೇನು: ಈ ಕುರಿತು ಯಾವ ಕಾಲಮಿತಿಯೊಳಗೆ ಕ್ರಮವಹಿಸಲಾಗುವುದು ?

# ರಾಜ್ಯದಲ್ಲಿ ಸ್ಮಾರ್ಟ್ ಸಿಟಿ ಯೋಜನೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೭೨ (೧೮೯೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸ್ಮಾರ್ಟ್ ಸಿಟೀಸ್ ಮಿಷನ್ ಅಡಿಯಲ್ಲಿ ಜಾರಿಗೊಂಡ ಸ್ಮಾರ್ಟ್ ಸಿಟಿ ಯೋಜನೆಗಳು ಪ್ರಸ್ತುತ ಸಂಪೂರ್ಣವಾಗಿ ಮುಕ್ತಾಯಗೊಂಡಿವೆಯೇ ; ಮುಕ್ತಾಯಗೊಂಡಿದ್ದರೆ. ನಗರವಾರು ವಿವರ ನೀಡುವುದು ;

(ಆ) ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ ರಾಜ್ಯದ ವಿವಿಧ ನಗರಗಳಲ್ಲಿ ನಿರ್ಮಿಸಲಾದ ಮೂಲಸೌಕರ್ಯ ಹಾಗೂ ಇತರ ಆಸ್ತಿಗಳನ್ನು ಸಂಬಂಧಿತ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧಿಕೃತವಾಗಿ ಹಸ್ತಾಂತರಿಸಲಾಗಿದೆಯೇ ; ಹಸ್ತಾಂತರ ಪ್ರಕ್ರಿಯೆ ಪೂರ್ಣಗೊಂಡಿರುವ ನಗರಗಳ ಪಟ್ಟಿ ಹಾಗೂ ಬಾಕಿ ಇರುವ ನಗರಗಳ ವಿವರವೇನು ;

(ಇ) ಮಂಗಳೂರು ಸ್ಮಾರ್ಟ್ ಸಿಟಿ ಯೋಜನೆ ಮೂಲಕ ನಗರದಲ್ಲಿ ಕೈಗೊಳ್ಳಲಾದ ಕಾಮಗಾರಿಗಳು ಸಂಪೂರ್ಣವಾಗಿ ಮುಕ್ತಾಯಗೊಂಡಿವೆಯೇ ; ಅವುಗಳಿಂದ ನಿರ್ಮಿತವಾದ ರಸ್ತೆ. ಪಾರ್ಕಿಂಗ್ ಸಂಕೀರ್ಣ. ಕೆರೆ ಅಭಿವೃದ್ಧಿ, ಐಟಿ ವ್ಯವಸ್ಥೆಗಳು, ಕ್ಯಾಮೆರಾ ಜಾಲ, ಸಾರ್ವಜನಿಕ ಸೌಕರ್ಯಗಳು ಸೇರಿದಂತೆ ಎಲ್ಲಾ ಆಸ್ತಿಗಳನ್ನು ಮಂಗಳೂರು ಮಹಾನಗರ ಪಾಲಿಕೆಗೆ ಯಾವಾಗ ಹಸ್ತಾಂತರಿಸಲಾಗಿದೆ ;

(ಈ) ಸ್ಮಾರ್ಟ್ ಸಿಟಿ ಯೋಜನೆಯಡಿ ಸೃಜಿಸಿದ ಆಸ್ತಿ/ಕಾಮಗಾರಿಗಳ ಪೈಕಿ ಫುಟ್ಬಾತ್ ಸ್ಲ್ಯಾಬ್, ಬಸ್ ನಿಲ್ದಾಣ ಕಳಪೆಯಾಗಿರುವುದು ಅಥವಾ ದುರಸ್ತಿ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಯಾವ ಕಾಮಗಾರಿಗಳನ್ನು ಸರಿಪಡಿಸಿ ನಿರ್ವಹಿಸಿದೆ ; ಅದರ ಮೊತ್ತವನ್ನು ಯಾರು ಭರಿಸಿರುತ್ತಾರೆ ;

(ಉ) ಸ್ಮಾರ್ಟ್ ಸಿಟಿ ಅಡಿಯಲ್ಲಿ ನಿರ್ಮಿಸಲಾದ ಆಸ್ತಿಗಳ ಮುಂದಿನ ನಿರ್ವಹಣೆ, ದುರಸ್ತಿ ಜವಾಬ್ದಾರಿ ಯಾರದು ; ಇದಕ್ಕಾಗಿ ಸರ್ಕಾರ ಅಥವಾ ಮಂಗಳೂರು ಸ್ಮಾರ್ಟ್ ಸಿಟಿ SPV ಮತ್ತು ಮಹಾನಗರ ಪಾಲಿಕೆ ನಡುವಿನ ಒಪ್ಪಂದದ ಮಾರ್ಗಸೂಚಿ ನಿಯಮಗಳು ಯಾವುವು; ಸ್ಮಾರ್ಟ್ ಸಿಟಿ ಯೋಜನೆ ಮುಕ್ತಾಯವಾದ ನಂತರ SPV ಸಂಸ್ಥೆಯನ್ನು ವಿಲೀನಗೊಳಿಸುವ ಅಥವಾ ಮುಂದುವರೆಸುವ ಕುರಿತು ಸರ್ಕಾರದ ನಿಲುವೇನು ?

## ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಟೋ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೩ (೧೮೯೭) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಟೋ ರಿಕ್ಷಾ ಹಾಗೂ ಟ್ಯಾಕ್ಸಿ ಹಾಗೂ ಇತರ ಯಾವುದೇ ವಾಹನಗಳ ಅಧಿಕೃತ ನಿಲ್ದಾಣಗಳನ್ನು ಸ್ಥಾಪಿಸಲು ಸರ್ಕಾರ ರೂಪಿಸಿರುವ ಮಾರ್ಗಸೂಚಿಗಳಾವುವು ; ಅವುಗಳನ್ನು ಯಾವಾಗ ರಚಿಸಲಾಗಿತ್ತು ;

(ಆ) ಪೌರಾಡಳಿತಗಳ ವ್ಯಾಪ್ತಿಯಲ್ಲಿ ಹೊಸದಾಗಿ ಆಟೋ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳನ್ನು ಖರೀದಿಸಲು ನಿಲ್ದಾಣ ಲಭ್ಯತಾ ಪ್ರಮಾಣ ಪತ್ರ (Stand Availability Certificate) ನೀಡುವ ವಿಧಾನ ಯಾವುದು ; ಈ ಪ್ರಮಾಣ ಪತ್ರ ನೀಡುವಾಗ ಅನುಸರಿಸಲಾಗುತ್ತಿರುವ ಸ್ಥಳದ ಸಾಮರ್ಥ್ಯ, ಸಂಚಾರ ದಟ್ಟಣೆ, ಸಾರ್ವಜನಿಕ ಬೇಡಿಕೆ. ದೂರಮಾನ ಇತ್ಯಾದಿಗಳ ಪೈಕಿ ಯಾವ ಅಂಶಗಳಿಗೆ ಎಷ್ಟು ಆದ್ಯತೆ ನೀಡಲಾಗುತ್ತಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಆಟೋ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಳೆದ ಮೂರು ವರ್ಷಗಳಲ್ಲಿ ಸಂಸ್ಥೆವಾರು ಪತ್ತೆಯಾದ ಅನಧಿಕೃತ ನಿಲ್ದಾಣಗಳೆಷ್ಟು ಅವುಗಳನ್ನು ಸೂಕ್ತ ಕ್ರಮಗಳ ಮೂಲಕ ಅಧೀಕೃತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರವೇನು ;

(ಈ) ಅನಧಿಕೃತ ವಾಹನ ನಿಲ್ದಾಣಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ಸಂಚಾರ ದಟ್ಟಣೆ, ಪಾರ್ಕಿಂಗ್ ಸಮಸ್ಯೆಗಳ ನಿವಾರಣೆಗೆ ಪೌರಾಡಳಿತ ಸಂಸ್ಥೆಗಳು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯದ ಮೂಲಕ ಕೈಗೊಂಡಿರುವ ಕ್ರಮಗಳೇನು ;

(ಉ) ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯವ್ಯಾಪಿ ಏಕೀಕೃತ ವಾಹನ ನಿಲುಗಡೆ ಮಾರ್ಗಸೂಚಿ ರೂಪಿಸಿ, ಅಧಿಕೃತ ನಿಲ್ದಾಣಗಳ ಗುರುತುಪಡಿಸುವಿಕೆ, ಸೂಚನಾ ಫಲಕ ಅಳವಡಿಕೆ. GPS ಆಧಾರಿತ ನಿಯಂತ್ರಣ ಹಾಗೂ ನಿಯಮ ಉಲ್ಲಂಘನೆಗೆ ದಂಡ ವಿಧಿಸುವ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಉದ್ದೇಶಿಸಿರುವುದೇ ; ಅದನ್ನು ಯಾವ ಕಾಲಮಿತಿಯಲ್ಲಿ ಅನುಷ್ಠಾನಿಸಲಾಗುವುದು ?

## ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಗೆ ಸಹಾಯಧನ ಬಿಡುಗಡೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೪ (೧೮೮೮) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಗೆ ಮಂಜೂರಾದ ಸಬ್ಸಿಡಿ ಮೊತ್ತ ಎಷ್ಟು ; ಇದರಲ್ಲಿ ವಾಸ್ತವವಾಗಿ ಬಿಡುಗಡೆಯಾದ ಮೊತ್ತ ಎಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ವರ್ಷವಾರು ಹಾಗೂ ಜಿಲ್ಲಾವಾರು ಮಂಜೂರಾದ ಮತ್ತು ಬಿಡುಗಡೆಯಾದ ಸಬ್ಸಿಡಿ ಮೊತ್ತವೆಷ್ಟು ;

(ಇ) ಕಳೆದ ಮೂರು ವರ್ಷಗಳಿಂದ ಅರ್ಹ ಸಣ್ಣ ಕೈಗಾರಿಕೆಗಳಿಗೆ ಸಬ್ಸಿಡಿ ಮೊತ್ತ ಬಿಡುಗಡೆಯಾಗದಿರುವುದು ಸರ್ಕಾರ ಗಮನಿಸಿದೆಯೇ ; ದಕಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಮೊತ್ತ ಬಿಡುಗಡೆಯಾಗಬೇಕಿದೆ ; ಅದನ್ನು ಯಾವಾಗ ಬಿಡುಗಡೆ ಮಾಡಲಾಗುತ್ತದೆ ;

(ಈ) ಕರ್ನಾಟಕ ಕೈಗಾರಿಕಾ ನೀತಿ ೨೦೨೦–೨೦೨೫ ಜಾರಿಗೆ ಬಂದ ನಂತರ ಸಬ್ಸಿಡಿ ವಿತರಣೆಯ ವಿಧಾನದಲ್ಲಿ ಏನೆಲ್ಲ ಬದಲಾವಣೆ ಮಾಡಲಾಗಿದೆ ; ಹೊಸ ನೀತಿಯ ಅನ್ವಯ ವಾರ್ಷಿಕ ವಹಿವಾಟು ಆಧಾರಿತ ಸಬ್ಸಿಡಿ ವಿತರಣೆಯಿಂದ ಉಂಟಾದ ವಿಳಂಬಕ್ಕೆ ಕಾರಣವೇನು ;

(ಉ) ಹೊಸ ಘಟಕ ಸ್ಥಾಪನೆ, ಹಳೆಯ ಘಟಕ ವಿಸ್ತರಣೆ, ಯಂತ್ರೋಪಕರಣ ಖರೀದಿ ಹಾಗೂ ಉತ್ಪಾದನಾ ಸಾಮರ್ಥ್ಯ ವೃದ್ಧಿಗೆ ಹೂಡಿಕೆ ಮಾಡಿದ ಸಣ್ಣ ಕೈಗಾರಿಕೆಗಳಿಗೆ ಸಬ್ಸಿಡಿ

ವಿಳಂಬದಿಂದ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ; ಹಿಂದುಳಿದ ತಾಲ್ಲೂಕುಗಳು, ಮಹಿಳಾ ಉದ್ಯಮಿಗಳು ಹಾಗೂ ಯುವ ಉದ್ಯಮಿಗಳಿಗೆ ನೀಡಬೇಕಾದ ವಿಶೇಷ ಪ್ರೋತ್ಸಾಹಧನಗಳನ್ನು ಯುಕ್ತ ಸಮಯದಲ್ಲಿ ನೀಡಲು ಸರ್ಕಾರದ ಕ್ರಮಗಳೇನು ;

(ಊ) ಜಿಲ್ಲಾ ಜಂಟಿ ನಿರ್ದೇಶಕರ ಅಧ್ಯಕ್ಷತೆಯ ಸಮಿತಿ ಮೂಲಕ ಪರಿಶೀಲನೆ ಪೂರ್ಣಗೊಂಡಿದ್ದರೂ ಹೂಡಿಕೆ ಮೊತ್ತದ ಶೇ.೧೫ರಿಂದ ಶೇ.೩೫ರವರೆಗೆ ಸಣ್ಣ ಕೈಗಾರಿಕೆಗೆ ಐದು ವರ್ಷಗಳ ಅವಧಿಯಲ್ಲಿ ನೀಡಬೇಕಾದ ಸಬ್ಸಿಡಿ ಕೇಂದ್ರ ಕಚೇರಿಯಲ್ಲಿ ಅನುದಾನ ಬಿಡುಗಡೆ ವಿಳಂಬವಾಗುತ್ತಿರುವ ಬಗ್ಗೆ ಬಂದಿರುವ ದೂರುಗಳ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಬಗ್ಗೆ ಸರ್ಕಾರದ ಕಾಲಮಿತಿಯ ಕ್ರಮಗಳೇನು ?

## ರಾಜ್ಯದಲ್ಲಿ ಹೂವಿನ ಬೆಳೆಗಳಿಗೆ ವಿಶೇಷ ಪ್ಯಾಕೇಜ್ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೫ (೧೮೯೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪುಷ್ಪೋದ್ಯಮ ನೀತಿಯಡಿ ಯಾವ್ಯಾವ ಹೂವಿನ ಬೆಳೆಗಳಿಗೆ ವಿಶೇಷ ಪ್ಯಾಕೇಜ್ ನೀಡಲಾಗುತ್ತಿದೆ ; ಕಳೆದ ೩ ವರ್ಷಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎಷ್ಟು ವಿಶೇಷ ಪ್ಯಾಕೇಜ್ ನೀಡಲಾಗಿದೆ ;

(ಆ) ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಈಗಾಗಲೇ ಬೆಳೆಯಲಾಗುತ್ತಿರುವ ಹಾಗೂ ವಿಸ್ತರಿಸಬಹುದಾದ ಹೂವಿನ ಬೆಳೆಗಳಾವುವು ; ಈ ಕುರಿತು ಸರ್ಕಾರದ ಪ್ರೋತ್ಸಾಹಕ ಕ್ರಮಗಳೇನು ;

(ಇ) ಜಿಐ ಟ್ಯಾಗ್ ಹೊಂದಿರುವ ಶಂಕರಪುರ ಮಲ್ಲಿಗೆ ಬೆಳೆ ಮಲ್ಲಿಗೆ ಬೆಳೆಗಾರರು ೨೦೧೮ರಲ್ಲಿ ಸುಮಾರು ೪೫೦೦ರಷ್ಟಿದ್ದ ಸಂಖ್ಯೆ ಪ್ರಸ್ತುತ ೧೦೦೦ಕ್ಕೆ ಕುಸಿಯಲು ಹಾಗೂ ಮಲ್ಲಿಗೆ ಬೆಳೆ ಪ್ರದೇಶ ಮತ್ತು ಉತ್ಪಾದನೆಯಲ್ಲಿ ಶೇ.೯೦ಕ್ಕಿಂತ ಹೆಚ್ಚು ಇಳಿಕೆಯಾಗಲು ಕಾರಣವೇನು ;

(ಈ) ಮಲ್ಲಿಗೆ ಬೆಳೆಗಾರರ ಸಂಖ್ಯೆ, ವಿಸ್ತೀರ್ಣ, ಖರ್ಚು ಮತ್ತು ವೆಚ್ಚ, ಎದುರಿಸುತ್ತಿರುವ ಸಮಸ್ಯೆಗಳು ಇತ್ಯಾದಿಗಳ ಮಾಹಿತಿ ಲಭ್ಯವಿದೆಯೇ ; ಮಲ್ಲಿಗೆ ಬೆಳೆಗಾರರಿಗೆ ಸಾಲ ಪ್ರೋತ್ಸಾಹಧನ, ಬೆಳೆ ವಿಮೆ ಮತ್ತು ಇತರ ಸೌಲಭ್ಯಗಳು ಹಾಗೂ ಸೂಕ್ತ ನಷ್ಟ ಪರಿಹಾರ ನೀಡುವ ಮೂಲಕ ಯುವಜನರನ್ನು ಪುಷ್ಪೋದ್ಯಮದ ಕಡೆಗೆ ಸೆಳೆದ ಉದ್ಯೋಗ ಸೃಜನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಮಲ್ಲಿಗೆ ಬೆಳೆಯುವ ಪ್ರದೇಶಗಳಿಗೆ ಕೇಂದ್ರಿತವಾಗಿ ಮಲ್ಲಿಗೆ ಅಧ್ಯಯನ/ಸಂಶೋಧನೆ, ಉಪ ಉತ್ಪನ್ನಗಳ ತಯಾರಿಕೆ (ಸುಗಂಧ ದ್ರವ್ಯ), ಶೀತಲೀಕರಣ ವ್ಯವಸ್ಥೆ ಹಾಗೂ ಹಾಗೂ ಮಾರುಕಟ್ಟೆ ವಿಸ್ತರಣೆಗಾಗಿ ಸಮಗ್ರ ಕೇಂದ್ರ ಸ್ಥಾಪನೆಗೆ ಸರ್ಕಾರವು ಯಾವ ಕಾಲಮಿತಿಯ ಕ್ರಮಗಳನ್ನು ಕೈಗೊಳ್ಳಲಿದೆ ;

(ಊ) ಸಾಕಷ್ಟು ಬೇಡಿಕೆಯಿರುವ ಪರಂಪರೆಯ ಜಿಐ ಟ್ಯಾಗ್ ಹೊಂದಿರುವ ಮಲ್ಲಿಗೆ ಬೆಳೆಯನ್ನು ಉಳಿಸಲು ಮತ್ತು ಅಭಿವೃದ್ಧಿಪಡಿಸಲು ವಿಶೇಷ ಪ್ಯಾಕೇಜ್ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ಘೋಷಿಸಲಾಗುವುದು ?

# ಬೀದರ್ ಜಿಲ್ಲೆಯ ಕೈಗಾರಿಕಾ ಫ್ಲಾಟ್‌ಗಳ ಹಂಚಿಕೆ, ಉತ್ಪಾದನೆ ಮತ್ತು ಸ್ಥಳೀಯರ ಉದ್ಯೋಗ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೯೬ (೧೯೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಅಡಿಯಲ್ಲಿ ಗುರುತಿಸಲಾದ ವಿವಿಧ ಕೈಗಾರಿಕಾ ಪ್ರದೇಶಗಳಲ್ಲಿ ಪ್ರಸ್ತುತ ಹಂಚಿಕೆಗಾಗಿ ಸಿದ್ದವಾಗಿರುವ (Allotment-ready) ಖಾಲಿ ಫ್ಲಾಟ್‌ಗಳ ಒಟ್ಟು ಸಂಖ್ಯೆ ಎಷ್ಟು ; (ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯ ಕೈಗಾರಿಕಾ ಪ್ರದೇಶಗಳಲ್ಲಿ ಹೊಸ ಹೂಡಿಕೆದಾರರಿಗೆ ಒಟ್ಟು ಎಷ್ಟು ಎಕರೆ ಜಾಗ ಅಥವಾ ಫ್ಲಾಟ್‌ಗಳನ್ನು ಹಂಚಿಕೆ ಮಾಡಲಾಗಿದೆ ; ಇದರ ಮೂಲಕ ಜಿಲ್ಲೆಗೆ ಹರಿದು ಬಂದಿರುವ ಒಟ್ಟು ಹೂಡಿಕೆಯ ಮೊತ್ತ ಎಷ್ಟು ; (ವರ್ಷವಾರು ಹಾಗೂ ಪ್ರದೇಶವಾರು ಮಾಹಿತಿ ನೀಡುವುದು)

(ಇ) ಕೈಗಾರಿಕಾ ಫ್ಲಾಟ್‌ಗಳನ್ನು ಹಂಚಿಕೆ ಮಾಡಿಕೊಂಡಿದ್ದರೂ ನಿಗದಿತ ಅವಧಿಯೊಳಗೆ ಉತ್ಪಾದನೆ ಪ್ರಾರಂಭಿಸದ ಘಟಕಗಳ ಸಂಖ್ಯೆ ಎಷ್ಟು; ಅಂತಹ ಘಟಕಗಳ ವಿರುದ್ಧ ಜಾಗದ ಹಂಚಿಕೆಯನ್ನು ರದ್ದುಗೊಳಿಸಿ ಹೊಸ ಹೂಡಿಕೆದಾರರಿಗೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಗಡಿ ಜಿಲ್ಲೆಯಾದ ಬೀದರ್‌ನಲ್ಲಿ ಖಾಲಿ ಇರುವ ಕೈಗಾರಿಕಾ ಫ್ಲಾಟ್‌ಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜನ ನೀಡಲು ಮತ್ತು ಹೂಡಿಕೆದಾರರನ್ನು ಆಕರ್ಷಿಸಲು ಸರ್ಕಾರ ಯಾವುದೇ ವಿಶೇಷ ಪ್ರೋತ್ಸಾಹಕ ಯೋಜನೆ (Special Incentive Package) ಅಥವಾ ರಿಯಾಯಿತಿಗಳನ್ನು ಜಾರಿಗೆ ತಂದಿದೆಯೇ ಇದ್ದರೆ ಅದರ ವಿವರವೇನು ;

(ಉ) ಜಿಲ್ಲೆಯ ಕೈಗಾರಿಕೆಗಳಲ್ಲಿ ಸ್ಥಳೀಯ ಯುವಕರಿಗೆ ಶೇ.೭೦-೮೦ ರಷ್ಟು ಉದ್ಯೋಗ ನೀಡಬೇಕೆಂಬ ಸರೋಜಿನಿ ಮಹಿಷಿ ವರದಿ ಅನ್ವಯದ ಷರತ್ತನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಸರ್ಕಾರ ಹೊಸ ನಿಯಮಾವಳಿ ರೂಪಿಸುವ ಯೋಚನೆ ಹೊಂದಿದೆಯೇ ?

## ಬೀದರ್ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಬೆಳೆಗಾರರಿಗೆ ಬರಬೇಕಾದ ಬಾಕಿ ಪಾವತಿ ಮತ್ತು ಕಾರ್ಖಾನೆಗಳ ಪುನಶ್ಚೇತನ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೯೭ (೧೯೦೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಪಾವತಿಸಬೇಕಾದ ಕಬ್ಬಿನ ಬಾಕಿ ಮೊತ್ತ (Arrears) ಒಟ್ಟು ಎಷ್ಟು; ಕಳೆದ ಹಂಗಾಮಿನಲ್ಲಿ ಪೂರೈಕೆಯಾದ ಕಬ್ಬಿಗೆ ಕೇಂದ್ರ ಸರ್ಕಾರ

ನಿಗದಿಪಡಿಸಿರುವ Fair and Remunerative Price (FRP) ದರದಂತೆ ಸಂಪೂರ್ಣ ಪಾವತಿ ಮಾಡಲಾಗಿದೆಯೇ ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಕಬ್ಬು ಸರಬರಾಜು ಮಾಡಿದ ೧೪ ದಿನಗಳೊಳಗೆ ಪಾವತಿ ಮಾಡಬೇಕೆಂಬ ನಿಯಮವಿದ್ದರೂ, ಬೀದರ್ ಜಿಲ್ಲೆಯಲ್ಲಿ ಪಾವತಿ ವಿಳಂಬವಾಗುತ್ತಿರುವ ಪ್ರಮುಖ ಕಾರಣಗಳೇನು ; ಕಾರ್ಖಾನೆಗಳ ಆರ್ಥಿಕ ಸಂಕಷ್ಟ, ಬ್ಯಾಂಕ್ ಸಾಲಭಾರ, ಅಥವಾ ಸಕ್ಕರೆ ದಾಸ್ತಾನು ಮಾರಾಟವಾಗದಿರುವುದಕ್ಕೆ ಕಾರಣವೇ ;

(ಇ) ನಿಯಮಿತವಾಗಿ ರೈತರಿಗೆ ಹಣ ಪಾವತಿಸದ ಅಥವಾ ವಿಳಂಬ ಮಾಡುತ್ತಿರುವ ಸಕ್ಕರೆ ಕಾರ್ಖಾನೆಗಳ ವಿರುದ್ಧ ಸರ್ಕಾರವು ದಂಡಾತ್ಮಕ ಕ್ರಮ (Penalty) ಅಥವಾ Revenue Recovery Certificate (RRC) ನೋಟಿಸ್ ಜಾರಿಗೊಳಿಸಿರುವುದೇ ಇದ್ದಲ್ಲಿ, ಅಂತಹ ಕಾರ್ಖಾನೆಗಳ ವಿರುದ್ಧ ಕೈಗೊಂಡಿರುವ ಶಿಸ್ತು ಕ್ರಮಗಳೇನು ;

(ಈ) ರೈತರು ತಾವು ಪೂರೈಸಿದ ಕಬ್ಬಿನ ತೂಕ. ನಿಗದಿತ ದರ ಮತ್ತು ಪಾವತಿಯ ಸ್ಥಿತಿಗತಿಯನ್ನು ಪಾರದರ್ಶಕವಾಗಿ ತಿಳಿದುಕೊಳ್ಳಲು ಆನಲೈನ್ ಪಾವತಿ ಟ್ರ್ಯಾಕಿಂಗ್ ವ್ಯವಸ್ಥೆ Online Payment Tracking System) ಅಥವಾ ಮೊಬೈಲ್ ಆಪ್ ಜಾರಿಗೆ ತರುವ ಕುರಿತು ಸರ್ಕಾರದ ಮುಂದಿನ ಯೋಜನೆಗಳೇನು ;

(ಉ) ಜಿಲ್ಲೆಯ ನಷ್ಟದಲ್ಲಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳ ಆರ್ಥಿಕ ಸ್ಥಿತಿ ಸುಧಾರಿಸಲು ಆಧುನೀಕರಣಗೊಳಿಸಲು ಅಥವಾ Ethanol ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಸರ್ಕಾರದಿಂದ

ಯಾವುದಾದರೂ ವಿಶೇಷ ಪುನಶ್ಚೇತನ ಪ್ಯಾಕೇಜ್ (Special Revival Package) ಘೋಷಿಸಲಾಗಿದೆಯೇ ; ಇದ್ದಲ್ಲಿ ಅದರ ವಿವರವೇನು ?

## ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆಸ್ತಿ ತೆರಿಗೆ ಸಂಗ್ರಹಣೆ ಮತ್ತು ನಾಗರಿಕ ಸೇವಾ ಕೇಂದ್ರಗಳ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೮ (೧೯೦೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಆರ್ಥಿಕ ವರ್ಷದಲ್ಲಿ ಬೀದರ್ ಜಿಲ್ಲೆಯ ನಗರಸಭೆಗಳು ಹಾಗೂ ಪುರಸಭೆಗಳಲ್ಲಿನ ನಿಗದಿಪಡಿಸಲಾದ ಆಸ್ತಿ ತೆರಿಗೆ ಗುರಿ (Target) ಎಷ್ಟು ; ವಾಸ್ತವವಾಗಿ ಸಂಗ್ರಹವಾದ ಮೊತ್ತ ಎಷ್ಟು; ತೆರಿಗೆ ಸಂಗ್ರಹಣೆಯಲ್ಲಿ ಉಂಟಾದ ಅಂತರಕ್ಕೆ (Gap) ಕಾರಣವಾದ ಅಂಶಗಳೇನು ; (ನಗರಸಭೆವಾರು ವಿವರ ನೀಡುವುದು)

(ಆ) ವರ್ಷಾನುಗಟ್ಟಲೆ ಬಾಕಿ ಇರುವ ಆಸ್ತಿ ತೆರಿಗೆಯನ್ನು ವಸೂಲಿ ಮಾಡಲು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳು ಯಾವುದೇ 'ವಿಶೇಷ ತೆರಿಗೆ ಸಂಗ್ರಹ ಅಭಿಯಾನ' (Tax Collection Drive) ಅಥವಾ ತೆರಿಗೆ ಅದಾಲತ್‌ಗಳನ್ನು ಆಯೋಜಿಸಿರುವುದೇ ; ಅತಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ವಾಣಿಜ್ಯ ಮಳಿಗೆಗಳು/ ಸಂಸ್ಥೆಗಳ ವಿರುದ್ಧ ಜಾರಿಗೊಳಿಸಿದ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರದ Self Assessment Scheme (SAS) ಅಡಿಯಲ್ಲಿ ಆನ್ ಲೈನ್ ಆಸ್ತಿ ತೆರಿಗೆ ಪಾವತಿ ವ್ಯವಸ್ಥೆಯನ್ನು ಜಿಲ್ಲೆಯ ಎಲ್ಲಾ ನಗರಸಭೆಗಳ ವ್ಯಾಪ್ತಿಯ ವಾರ್ಡ್‌ಗಳಲ್ಲಿ ಸಂಪೂರ್ಣವಾಗಿ ಜಾರಿಗೆ ತರಲಾಗಿದೆಯೇ ; ಇದ್ದಲ್ಲಿ, ಅದರ ಬಳಕೆ ಪ್ರಮಾಣ ಮತ್ತು ಆನ್ ಲೈನ್ ಮೂಲಕ ಸಂಗ್ರಹವಾಗಿರುವ ತೆರಿಗೆ ಮೊತ್ತ ಎಷ್ಟು ;

(ಈ) ನಗರ ಪ್ರದೇಶದ ನಾಗರಿಕರಿಗೆ ಜನನ–ಮರಣ ಪ್ರಮಾಣಪತ್ರ, ಆಸ್ತಿ ತೆರಿಗೆ ಪಾವತಿ, ದೂರು ಸಲ್ಲಿಕೆ ಮುಂತಾದ ಸೇವಗಳನ್ನು ಒಂದೇ ಸೂರಿನಡಿ ಒದಗಿಸುವ 'ಸಿಟಿಜನ್ ಸರ್ವಿಸ್ ಜಿಲ್ಲೆಯ ನಗರಸಭೆಗಳಲ್ಲಿ ಸೆಂಟರ್' (One-Stop Help Center)ಗಳನ್ನು ಜಿಲ್ಲೆಯ ನಗರಸಭೆಗಳಲ್ಲಿ ಸ್ಥಾಪಿಸಲಾಗಿದೆಯೇ : ಇದ್ದಲ್ಲಿ, ಅವುಗಳ ಸಂಖ್ಯೆ ಹಾಗೂ ಸೇವಾ ವ್ಯಾಪ್ತಿ ಎಷ್ಟು ;

(ಉ) ನಗರ ಸಭೆಗಳು ಸಂಗ್ರಹಿಸಿದ ತೆರಿಗೆ ಮೊತ್ತವನ್ನು ಆಯಾ ವಾರ್ಡ್‌ಗಳ ಅಭಿವೃದ್ಧಿ ಕಾಮಗಾರಿಗಳಿಗೆ (ರಸ್ತೆ, ಬೀದಿ ದೀಪ, ಚರಂಡಿ ಇತ್ಯಾದಿ) ಎಷ್ಟು ಪ್ರಮಾಣದಲ್ಲಿ ಬಳಸಲಾಗಿದೆ ಎಂಬುದರ ಕುರಿತು ಸಾರ್ವಜನಿಕರಿಗೆ ಪಾರದರ್ಶಕವಾಗಿ ಮಾಹಿತಿ ನೀಡಲು ವಾರ್ಷಿಕ ಕಾರ್ಯಕ್ಷಮತಾ ವರದಿ (Annual Performance Report) ಪ್ರಕಟಿಸಲಾಗುತ್ತಿದೆಯೇ ಅಥವಾ ಅಧಿಕೃತ ವೆಬ್ ಸೈಟ್ ನಲ್ಲಿ ಅಂಕಿಅಂಶಗಳನ್ನು ಅಪ್‌ಲೋಡ್ ಮಾಡಲಾಗುತ್ತಿದೆಯೇ ?

# ಮೈಸೂರು ಜಿಲ್ಲೆಯ ಮಹಿಳಾ ಸ್ವಯಂ ಉದ್ಯೋಗ ಮತ್ತು ಕೈಗಾರಿಕಾ ಘಟಕಗಳ ಉತ್ತೇಜನ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೯ (೧೯೦೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಪ್ರಸ್ತುತ ಮಹಿಳಾ ಉದ್ಯಮಿಗಳು ನಡೆಸುತ್ತಿರುವ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ನೋಂದಾಣಿಯಾದ ಮಹಿಳಾ ಉದ್ಯಮಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಮೈಸೂರಿನ ಪ್ರಮುಖ ಕೈಗಾರಿಕಾ ಪ್ರದೇಶಗಳಲ್ಲಿ (ಕಡಕೊಳ, ತಾಂಡ್ಯ, ಕೂರ್ಗಳ್ಳಿ) ಮಹಿಳಾ ಉದ್ಯಮಿಗಳಿಗಾಗಿಯೇ ಮೀಸಲಿಟ್ಟ ವಿಶೇಷ ಫ್ಲಾಟ್‌ಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ಎಷ್ಟು ಫ್ಲಾಟ್‌ಗಳನ್ನು ಹಂಚಿಕೆ ಮಾಡಲಾಗಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ 'ಉದ್ಯೋಗಿನಿ' ಮತ್ತು 'CMEGP' ಯೋಜನೆಗಳಡಿ ಮೈಸೂರು ಜಿಲ್ಲೆಯ ಎಷ್ಟು ಮಹಿಳಾ ಫಲಾನುಭವಿಗಳಿಗೆ ಸಬ್ಸಿಡಿ ಮಂಜೂರು ಮಾಡಲಾಗಿದೆ ; ಬ್ಯಾಂಕ್‌ಗಳು ಸಾಲ ನೀಡಲು ವಿಳಂಬ ಮಾಡುತ್ತಿರುವುದರಿಂದ ನೂರಾರು ಅರ್ಜಿಗಳು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮೈಸೂರು ರೇಷ್ಮೆ (Mysuru Silk) ಶ್ರೀಗಂಧದ ಕಲೆ ಮತ್ತು ಕರಕುಶಲ ವಸ್ತುಗಳ ತಯಾರಿಕೆಯಲ್ಲಿ ತೊಡಗಿರುವ ಮಹಿಳಾ ಸ್ವಸಹಾಯ ಗುಂಪುಗಳ ಉತ್ಪನ್ನಗಳಿಗೆ ಅಂತರಾಷ್ಟ್ರೀಯ ಮಟ್ಟದಲ್ಲಿ ಮಾರುಕಟ್ಟೆ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಊ) ಮೈಸೂರು ಪ್ರವಾಸೋದ್ಯಮ ಕೇಂದ್ರವಾಗಿರುವುದರಿಂದ, ಪ್ರವಾಸಿ ತಾಣಗಳ ಬಳಿ ಮಹಿಳಾ ಉದ್ಯಮಿಗಳ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ 'ಮಹಿಳಾ ಕೈಗಾರಿಕಾ ಸಂಕೀರ್ಣ' ಅಥವಾ 'ಶಾಶ್ವತ ಮಾರಾಟ ಮಳಿಗೆ'ಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಮೈಸೂರು ಜಿಲ್ಲೆಯ ಕೈಗಾರಿಕಾ ವಲಯಗಳ ಅಭಿವೃದ್ಧಿ ಮತ್ತು ಫ್ಲಾಟ್‌ಗಳ ಹಂಚಿಕೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೦ (೧೯೦೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ಪ್ರಮುಖ ಕೈಗಾರಿಕಾ ವಲಯಗಳಾದ ಕಡಕೊಳ, ತಾಂಡ್ಯ, ನಂಜನಗೂಡು ಮತ್ತು ಕೂರ್ಗಳ್ಳಿ ವಲಯಗಳಲ್ಲಿ ಪುಸ್ತುತ ಕೆ.ಐ.ಎ.ಡಿ.ಬಿ (KIADB) ವತಿಯಿಂದ ಅಭಿವೃದ್ಧಿಪಡಿಸಲಾದ ಫ್ಲಾಟ್‌ಗಳಲ್ಲಿ ಖಾಲಿ ಇರುವ ಫ್ಲಾಟ್‌ಗಳ ಸಂಖ್ಯೆ ಎಷ್ಟು ; (ವಲಯವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ಎಷ್ಟು ಹೊಸ ಕೈಗಾರಿಕಾ ಘಟಕಗಳಿಗೆ ಜಾಗ ಹಂಚಿಕೆ ಮಾಡಲಾಗಿದೆ ಮತ್ತು ಇದರಿಂದ ಹರಿದು ಬಂದ ಒಟ್ಟು ಹೂಡಿಕೆಯ ಮೊತ್ತ ಎಷ್ಟು ;

(ಇ) ಜಾಗ ಹಂಚಿಕೆಯಾಗಿ ೨ ವರ್ಷ ಕಳೆದರೂ ಉತ್ಪಾದನೆ ಆರಂಭಿಸದ ಘಟಕಗಳ ಸಂಖ್ಯೆ ಎಷ್ಟು; ಅಂತಹ ಉದ್ದಿಮೆದಾರರ ವಿರುದ್ಧ ಜಾಗದ ಹಂಚಿಕೆ ರದ್ದುಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ಮೈಸೂರು–ಬೆಂಗಳೂರು ದಶಪಥ ರಸ್ತೆಯ ಹಿನ್ನಲೆಯಲ್ಲಿ, ಮೈಸೂರಿನ ಖಾಲಿ ಫ್ಲಾಟ್ ಗಳಲ್ಲಿ ಕೈಗಾರಿಕೆಗಳನ್ನು ಶೀಘ್ರವಾಗಿ ಸ್ಥಾಪಿಸಲು ಸರ್ಕಾರ ಯಾವುದಾದರು ವಿಶೇಷ "ಇನ್ಸೆಂಟಿವ್ ಪ್ಯಾಕೇಜ್" (Incentive Package) ಘೋಷಿಸಿದೆಯೇ ;

(ಉ) ಮೈಸೂರು ಜಿಲ್ಲೆಯ ಸ್ಥಳೀಯ ಯುವಕರಿಗೆ ಮತ್ತು ತಾಂತ್ರಿಕ ಪದವೀಧರರಿಗೆ ಇಲ್ಲಿನ ಕೈಗಾರಿಕೆಗಳಲ್ಲಿ ಕನಿಷ್ಠ ಶೇ.೮೦ ರಷ್ಟು ಉದ್ಯೋಗ ನೀಡುವ ಷರತ್ತನ್ನು ಕಡ್ಡಾಯವಾಗಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಮೈಸೂರು ಜಿಲ್ಲೆಯ ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೧ (೧೯೦೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿರುವ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಮೈಸೂರು ಜಿಲ್ಲೆಯ ಜನಸಂಖ್ಯೆಗನುಗುಣವಾಗಿ ಅರ್ಹವಿರುವ ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಮೈಸೂರು ಜಿಲ್ಲೆಯ ಯಾವ ಯಾವ ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಮತ್ತು ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ; ಈ ಪ್ರಕ್ರಿಯೆಯು ಪ್ರಸ್ತುತ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## ನಗರಾಭಿವೃದ್ಧಿ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೨ (೧೯೦೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ೨೦೧೯–೨೦ನೇ ಸಾಲಿನಿಂದ ಇಲ್ಲಿಯುವರೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ವರ್ಷವಾರು ಹಾಗೂ ಯೋಜನೆವಾರು ಸಂಪೂರ್ಣ ವಿವರ ನೀಡುವುದು ;

(ಆ) ಈ ಜಿಲ್ಲೆಯಲ್ಲಿ ಸದರಿ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ; ಇದರಲ್ಲಿ ಪೂರ್ಣಗೊಂಡಿರುವ

ಕಾಮಗಾರಿಗಳು ಯಾವುವು ಹಾಗೂ ಪೂರ್ಣಗೊಂಡ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ; (ಕಾಮಗಾರಿವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಅಪೂರ್ಣಗೊಂಡಿರುವ ಅಥವಾ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳು ವಿಳಂಬವಾಗಲು ಕಾರಣವೇನು ಮತ್ತು ಇವುಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಈ) ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ಉಳಿದಿರುವ (Unspent Balance) ಅನುದಾನವೆಷ್ಟು ; ಈ ಅನುದಾನವನ್ನು ಬಳಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವರ್ಷವಾರು ವಿವರ ನೀಡುವುದು)

## ಕಟ್ಟಡ ತ್ಯಾಜ್ಯದ ಸಮಸ್ಯೆ ಹೆಚ್ಚುತ್ತಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೭೦೩ (೧೯೧೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಹಾಸನ ಸೇರಿದಂತೆ ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ಮಹಾನಗರಗಳಲ್ಲಿ ಘನ ತ್ಯಾಜ್ಯದ ಸಮಸ್ಯೆಯ ಜೊತೆಗೆ ಕಟ್ಟಡ ತ್ಯಾಜ್ಯವು ನಗರಗಳ ಘನತೆ, ಸೌಂದರ್ಯಕ್ಕೆ ದೊಡ್ಡ ಸಮಸ್ಯೆ ಆಗಿದ್ದು ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ವಿವಿಧ ಮಹಾನಗರಗಳಲ್ಲಿ ನಿತ್ಯ ಉತ್ಪತ್ತಿಯಾಗುತ್ತಿರುವ ಕಟ್ಟಡ ನಿರ್ಮಾಣ ಮತ್ತು ಭಗ್ನಾವಶೇಷ [ಸಿ ಅಂಡ್ ಡಿ] ತ್ಯಾಜ್ಯದ ಪ್ರಮಾಣ ಎಷ್ಟು :

(ಇ) ಈ ಸಮಸ್ಯೆಯ ನಿವಾರಣೆಗಾಗಿ ಎಷ್ಟು ಸ್ಥಳಗಳಲ್ಲಿ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ/ಸ್ಥಾಪಿಸಲಾಗುತ್ತಿದೆ ; ಒದಗಿಸಲಾಗುತ್ತಿರುವ ಅನುದಾನ ಎಷ್ಟು ; ಈ ಘಟಕಗಳ ಸಂಸ್ಕರಣಾ ಸಾಮರ್ಥ್ಯ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಟ್ಟಡ ತ್ಯಾಜ್ಯ ವಿಲೇವಾರಿ ಸಂಬಂಧ ಪಾಲಿಸಬೇಕಾದ ಅನುಪಾಲನಾ ಕ್ರಮಗಳೇನು ; (ಇದ್ದಲ್ಲಿ, ಆದೇಶ ಪ್ರತಿಯನ್ನು ನೀಡುವುದು)

(ಉ) ಕಟ್ಟಡ ತ್ಯಾಜ್ಯದ ಅನಧಿಕೃತ ವಿಲೇವಾರಿಗೆ ವಿಧಿಸಬಹುದಾದ ದಂಡ ಹಾಗೂ ಕೈಗೊಳ್ಳಬಹುದಾದ ಕಾನೂನು ಕ್ರಮಗಳೇನು ? (ವಿವರವಾದ ಮಾಹಿತಿಯನ್ನು ನೀಡುವುದು)

## ರಾಜ್ಯದ ಇತರ ಸ್ಥಳಗಳಲ್ಲಿ ಡಿಜಿಟಲ್ ವೇಬ್ರಿಡ್ಜ್ ಸ್ಥಾಪಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೭೦೪ (೧೯೧೫) ಮಾನ್ಯ ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಹಿತಕಾಯಲು ಮತ್ತು ತೂಕದಲ್ಲಾಗುವ ಮೋಸವನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದ ೧೧ ಸ್ಥಳಗಳಲ್ಲಿ ಸ್ಥಾಪಿಸಲು

ಉದ್ದೇಶಿಸಿದ್ದ 'ಡಿಜಿಟಲ್ ವೇಬ್ರಿಡ್ಜ್' (Digital Weighbridge) ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಎಷ್ಟು ಮೊತ್ತದಲ್ಲಿ ಪ್ರತಿ ಸ್ಥಳದಲ್ಲಿ 'ಡಿಜಿಟಲ್ ವೇಬ್ರಿಡ್ಜ್' ಸ್ಥಾಪಿಸಲಾಗುತ್ತಿದೆ ; ಇವುಗಳ ಸಾಮರ್ಥ್ಯ (ತೂಕ ಅಳೆಯುವ ಪ್ರಮಾಣ) ಎಷ್ಟು ; ಇದಕ್ಕಾಗಿ ಒಟ್ಟು ಎಷ್ಟು ಅನುದಾನವನ್ನು ಒದಗಿಸಲಾಗಿದೆ ;

(ಇ) 'ಡಿಜಿಟಲ್ ವೇಬ್ರಿಡ್ಜ್'ಗಳ ಸ್ಥಾಪನೆ ಕಾರ್ಯ ಮಂದಗತಿಯಲ್ಲಿ ಸಾಗಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರದ ಕ್ರಮಗಳೇನು ;

(ಈ) ರೈತರಿಗೆ ಅನುಕೂಲ ಕಲ್ಪಿಸುವ ಸಂಬಂಧ ರಾಜ್ಯದಾದ್ಯಂತ ಇನ್ನಿತರೆ ಸ್ಥಳಗಳಲ್ಲೂ 'ಡಿಜಿಟಲ್ ವೇಬ್ರಿಡ್ಜ್' ಸ್ಥಾಪಿಸುವ ಕುರಿತು ಸರ್ಕಾರದ ನಿಲುವೇನು ?

## ಪೌರಕಾರ್ಮಿಕರ ಗೃಹ ಭಾಗ್ಯ ಯೋಜನೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೭೦೫ (೧೯೧೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ರಹಿತ ಖಾಯಂ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಈ ಪೈಕಿ 'ಪೌರಕಾರ್ಮಿಕ ಗೃಹಭಾಗ್ಯ ಯೋಜನೆ'ಯಡಿ ಅನುಮೋದನೆಗೊಂಡ ಹಾಗೂ ಅನುಮೋದನೆಗೊಳ್ಳಲು ಬಾಕಿ ಇರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಫಲಾನುಭವಿಗಳ ಸಂಖ್ಯೆ, ಬಿಡುಗಡೆಗೊಂಡ ಅನುದಾನ, ವೆಚ್ಚ ಭರಿಸಿದ ಅನುದಾನ ಹಾಗೂ ಯೋಜನೆಯಡಿ ಅನುಮೋದನೆಗೊಳ್ಳಲು ಬಾಕಿ ಇರುವ ಪೌರಕಾರ್ಮಿಕರ ಸಂಖ್ಯೆ – ಸ್ಥಳೀಯ ಸಂಸ್ಥೆಗಳವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ಆಯ್ಕೆಯಾಗಿರುವ ಅರ್ಹ ಫಲಾನುಭವಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ನೀಡುವ ವಂತಿಕೆ ಅನುದಾನ ಎಷ್ಟು ; ವಂತಿಕೆ ಹಣವನ್ನು ಸಕಾಲದಲ್ಲಿ ಫಲಾನುಭವಿಗಳಿಗೆ ಬಿಡುಗಡೆ ಮಾಡಲಾಗುತ್ತಿದೆಯೇ ;

(ಈ) ಬಾಕಿ ಉಳಿದಿರುವವರ ಪೈಕಿ ಎಷ್ಟು ಮಂದಿ ಅರ್ಹ ಫಲಾಪೇಕ್ಷಿಗಳನ್ನು ಹೊಸದಾಗಿ 'ಪೌರಕಾರ್ಮಿಕರ ಗೃಹ ಭಾಗ್ಯ ಯೋಜನೆ'ಯ ಲಾಭ ದೊರಕಿಸಿಕೊಡಲು ಯೋಜಿಸಲಾಗಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಉ) ಯೋಜನೆಯ ಲಾಭ ಪಡೆದಿರುವ ಎಷ್ಟು ಮಂದಿ ಪೌರಕಾರ್ಮಿಕರು ಮನೆ ನಿರ್ಮಾಣವನ್ನು ಪೂರ್ಣಗೊಳಿಸಿದ್ದಾರೆ ; ಅಥವಾ ಮನೆಗಳ ನಿರ್ಮಾಣ ವಿವಿಧ ಹಂತದಲ್ಲಿದೆ ; (ಜಿಲ್ಲಾವಾರು, ಮನೆ ನಿರ್ಮಾಣದ ಹಂತವಾರು ಪ್ರಗತಿ ವಿವರವನ್ನು ನೀಡುವುದು)

(ಊ) ಮೇಲ್ಕಾಣಿಸಿದ ಯಾವುದಾದರೂ ಜಿಲ್ಲೆಗಳಲ್ಲಿ ಫಲಾನುಭವಿಗಳಿಗೆ ಗುಂಪು ಮನೆಗಳನ್ನು ನಿರ್ಮಿಸಿಕೊಡಲಾಗಿದೆಯೇ ? ಇದ್ದಲ್ಲಿ, (ವಿವರ ನೀಡುವುದು)

# ‘ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆ’ ಪರಿಹಾರ ಮೊತ್ತ ಹೆಚ್ಚಿಸಲು ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೭೦೬ (೧೯೧೭) ಮಾನ್ಯ ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ರೈತ ಸಂಜೀವಿನಿ ಅಪಘಾತ ವಿಮಾ ಯೋಜನೆ" ಎಂದಿನಿಂದ ಜಾರಿಗೆ ಬಂದಿದೆ ; ಈ ಯೋಜನೆಯ ಲಾಭ ಪಡೆಯಲು ಇರುವ ಅರ್ಹತೆ, ಮಾನದಂಡಗಳೇನು ಹಾಗೂ ದೊರೆಯುವ ಪ್ರಯೋಜನಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಈ ಯೋಜನೆಯಡಿ ನೋಂದಾಯಿಸಿರುವ ರೈತರ ಸಂಖ್ಯೆ ಎಷ್ಟು :

(ಇ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಯಡಿ ವಿಮಾ ನೆರವು ಪಡೆದ ಕುಟುಂಬಗಳ ಸಂಖ್ಯೆ ಮತ್ತು ಮೊತ್ತ ಎಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ವಿಮಾ ಪರಿಹಾರ ಮೊತ್ತವನ್ನು ಹೆಚ್ಚಿಸುವ ಕುರಿತು ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

# ಶಾಸನಬದ್ಧ ಉಪಕರಗಳನ್ನು ಸರ್ಕಾರಕ್ಕೆ ಜಮೆ ಮಾಡದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೭೦೭ (೧೯೧೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳು (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ವಸೂಲಿಸುತ್ತಿರುವ ಶಾಸನಬದ್ಧ ಉಪಕರಗಳಾವುವು ; (ಶೇಕಡವಾರು ಪ್ರಮಾಣದೊಂದಿಗೆ ಮಾಹಿತಿ ನೀಡುವುದು)

(ಆ) ಶಾಸನ ಬದ್ಧ ಕಟಾವಣೆಗಳನ್ನು ಸಂಬಂಧಿಸಿದ ಸರ್ಕಾರದ ಲೆಕ್ಕ ಶೀರ್ಷಿಕೆಗಳಿಗೆ ಜಮಾ ಮಾಡದೇ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬಾಕಿ ಉಳಿಸಿಕೊಂಡಿರುವ; ಜಿಲ್ಲಾವಾರು – ಶಾಸನ ಬದ್ಧ ಕಟಾವಣೆಗಳು, ಪ್ರಾರಂಭಿಕ ಶಿಲ್ಕು, ವಾರ್ಷಿಕ ವಸೂಲಿ, ಒಟ್ಟು ಮೊತ್ತ, ಜಮೆ ಮಾಡಿದ ಮೊತ್ತ ಹಾಗೂ ಸರ್ಕಾರಕ್ಕೆ ಜಮೆ ಮಾಡದೆ ಇರುವುದು ಮೊತ್ತ ಎಷ್ಟು : (ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಜಮೆ ಮಾಡದೆ ಬಾಕಿ ಉಳಿಸಿಕೊಂಡಿರುವ ಶಾಸನ ಬದ್ಧ ಕಟಾವಣೆಗಳನ್ನು ಸಂಬಂಧಿಸಿದ ಲೆಕ್ಕ ಶೀರ್ಷಿಕೆಗಳಿಗೆ ಜಮೆ ಮಾಡಲು ಸರ್ಕಾರದ ಕ್ರಮಗಳೇನು ? (ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

## ತೋಟಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೦೮ (೧೯೬೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಚಿಕ್ಕಮಗಳೂರು, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡದಾದ್ಯಂತ ಅಡಿಕೆಯಲ್ಲಿ ಹಳದಿ ಎಲೆ ಮತ್ತು ಎಲೆ ಚುಕ್ಕೆ ರೋಗಗಳ ಹರಡುವಿಕೆಯನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ PMFBY / RWBCIS ಯೋಜನೆಯಡಿ ಎಷ್ಟು ತೋಟಗಾರಿಕೆ ರೈತರು ವಿಮಾ ಕ್ಲೇಮ್‌ಗಳನ್ನು ಪಡೆಯಲು ಅರ್ಜಿ ಸಲ್ಲಿಸಿರುತ್ತಾರೆ ; ಈ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ವಿಲೇ ಮಾಡಲಾಗಿದೆ ಮತ್ತು ಎಷ್ಟು ಅರ್ಜಿಗಳು ಬಾಕಿ ಇವೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ಶೀಘ್ರವಾಗಿ ಹಾಳಾಗುವ ವಸ್ತುಗಳಿಗೆ (ಹಣ್ಣುಗಳು/ತರಕಾರಿಗಳು) ಎಷ್ಟು ಹೊಸ ಕೋಲ್ಡ್ ಸ್ಟೋರೇಜ್. ಕೋಲ್ಡ್ ಚೈನ್ ಮತ್ತು ಪ್ರಾಥಮಿಕ ಸಂಸ್ಕರಣಾ ಘಟಕಗಳನ್ನು ಮಂಜೂರು ಮಾಡಲಾಗಿದೆ ಮತ್ತು ಅವುಗಳಲ್ಲಿ ಎಷ್ಟು ಕಾರ್ಯ ನಿರ್ವಹಿಸುತ್ತಿದೆ ? (ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕಾ ಕ್ಷೇತ್ರದಲ್ಲಿ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೦೯ (೧೯೬೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬ್ಯಾಂಕ್‌ಗಳು Collateral-Free Loansಗಳಿಗಾಗಿ, ವಿಶೇಷವಾಗಿ ಸೂಕ್ಷ್ಮ

ಘಟಕಗಳಲ್ಲಿ (Micro Units) CGTMSE (Credit Guarantee Fund Trust for Micro and Small Enterprises) ಯೋಜನೆಯನ್ನು ವಾಸ್ತವಿಕವಾಗಿ ಜಾರಿಗೆ ತರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ;

(ಆ) ರಾಜ್ಯದಲ್ಲಿ ಸೂಕ್ಷ್ಮ ಮತ್ತು ಸಣ್ಣ ಉದ್ಯಮಗಳ ಮೇಲಿನ ಹೆಚ್ಚಿನ ಆರ್ಥಿಕ ಒತ್ತಡವನ್ನು ಕಡಿಮೆ ಮಾಡಲು ೨೦೨೬–೨೭ನೇ ಸಾಲಿನ ಆಯ–ವ್ಯಯದಲ್ಲಿ ಯಾವ ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ;

(ಇ) ಸಣ್ಣ ಕೈಗಾರಿಕೆ ಕ್ಷೇತ್ರದಲ್ಲಿ ನುರಿತ ಕಾರ್ಮಿಕರ ಅಭಾವವನ್ನು ನೀಗಿಸಲು ಸರ್ಕಾರ ೨೦೨೬–೨೭ನೇ ಸಾಲಿನ ಆಯ–ವ್ಯಯದಲ್ಲಿ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು:)

## Industrial Corridor ಸ್ಥಾಪಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೦ (೧೯೬೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) Bengaluru-Mumbai Industrial Corridor & Chennai-Bengaluru Industrial Corridor ಈ ಯೋಜನೆಗಳ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಗೆ ಇಲ್ಲಿಯವರೆಗೆ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಇನ್ನೂ ಎಷ್ಟು ಭೂಮಿ ಸ್ವಾಧೀನಪಡಿಸಿಕೊಳ್ಳಬೇಕಾಗಿದೆ ;

(ಇ) ಈ ಯೋಜನೆಯ ಅನುಷ್ಠಾನದಲ್ಲಿ ಎದುರಿಸಲಾಗುತ್ತಿರುವ ಸವಾಲುಗಳೇನು ; ಸರ್ಕಾರ ಈ ಅಡಚಣೆಗಳನ್ನು ಪರಿಹರಿಸಲು ಯಾವ ರೀತಿ ಕ್ರಮ ಕೈಗೊಂಡಿದೆ ;

(ಈ) ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ (ಬೆಳಗಾವಿ, ಕಲಬುರಗಿ, ಕೊಪ್ಪಳ, ರಾಯಚೂರು) ಹೊಸ ಕೈಗಾರಿಕಾ ಪಾರ್ಕ್ ನಿರ್ಮಿಸುವ ಸ್ಥಿತಿ ಯಾವ ಹಂತದಲ್ಲಿದೆ ?

## ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೧ (೧೯೬೫) ಮಾನ್ಯ ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಆ ಪೈಕಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಮುಚ್ಚಲ್ಪಟ್ಟಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಈ ಕಾರ್ಖಾನೆಗಳು ಉತ್ಪಾದಿಸಿದ ಒಟ್ಟು ಸಕ್ಕರೆ ಎಷ್ಟು ; (ಮೆಟ್ರಿಕ್ ಟನ್‌ಗಳಲ್ಲಿ)

(ಆ) ಭಾರತದ ಒಟ್ಟು ಉತ್ಪಾದನೆಗೆ ಸಂಬಂಧಿಸಿದಂತೆ ಎಥೆನಾಲ್ ಮಿಶ್ರಣ ಯೋಜನೆಯಲ್ಲಿ ಕರ್ನಾಟಕ ರಾಜ್ಯದ ಪಾಲು ಎಷ್ಟು ; ರಾಜ್ಯದಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳು ಎಥೆನಾಲ್ ಉತ್ಪಾದಿಸುತ್ತಿವೆ ;

(ಇ) ೨೦೨೫-೨೦೨೬ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ರೈತರಿಗೆ ಪಾವತಿಸಬೇಕಾದ ಬಾಕಿ ಮೊತ್ತ ಎಷ್ಟು ?

## ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೧೭೧೨ (೧೯೯೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ:೦೮.೧೧.೨೦೨೫ ರಂದು ವಿಧಾನ ಸೌಧದಲ್ಲಿ ಸಭೆ ಸೇರಿ ಸಮಾಲೋಚನೆ ಮಾಡಿ ಕಬ್ಬಿಗೆ ಒಂದು ಬೆಲೆ ನಿಗದಿ ಪಡಿಸಲಾಗಿದೆಯೇ ; ಹಾಗಿದ್ದರೆ, ಕಬ್ಬಿಗೆ ಪ್ರತಿ ಟನ್‌ಗೆ ಯಾವ ಬೆಲೆಯುನ್ನು ನೀಡಲಾಗುತ್ತಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಸಂದರ್ಭದಲ್ಲಿ ಸಕ್ಕರೆ ಕಾರ್ಖಾನೆಯ ಮಾಲೀಕರು ಸರ್ಕಾರ ನಿಗದಿ ಪಡಿಸಿದ ಬೆಲೆ ನೀಡಲು ಕಷ್ಟವಾಗುತ್ತದೆ ಹಾಗೂ ಈಗಾಗಲೇ ಸಕ್ಕರೆ ಉದ್ಯಮಿಗಳು ಹಾನಿಯನ್ನು ಅನುಭವಿಸುತ್ತಿದೆಯೆಂದು ಸರ್ಕಾರದ ಗಮನಕ್ಕೆ ತಂದಿರುವುದು ನಿಜವೇ ;

(ಇ) ಆ ಸಂದರ್ಭದಲ್ಲಿ ರೈತರಿಗೆ ಮತ್ತು ಸಕ್ಕರೆ ಕಾರ್ಖಾನೆಯ ಮಾಲೀಕರಿಗೆ ಸರ್ಕಾರದಿಂದ ಕೆಲವೊಂದು ಸಹಾಯಧನ ರೂಪದಲ್ಲಿ ಅನುಕೂತೆಯನ್ನು ಕಲ್ಪಿಸಲು ಭರವಸೆಗಳನ್ನು ನೀಡಲಾಗಿದ್ದು, ಈಗ ಅದು ಪೂರ್ತಿಯಾಗಿದೆಯೆ ; (ತಿಳಿಸುವುದು)

(ಈ) ರಾಜ್ಯ ಸರ್ಕಾರ ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಂಡು ಕಾರ್ಖಾನೆಗಳಿಗೆ ಅನುಕೂಲ

ಒದಗಿಸುವುದಾಗಿ ಹೇಳಿದ್ದು, ಅದು ಕಾರ್ಯರೂಪಕ್ಕೆ ಬಂದಿದೆಯೇ ; ಇಲ್ಲವಾದಲ್ಲಿ ಕಬ್ಬು ಬೆಳೆಗಾರರಿಗೆ ಮತ್ತು ಕಾರ್ಖಾನೆಗಳಿಗೆ ಹಾನಿಯನ್ನು ಭರಿಸುವುದು ಹೇಗೆ ;

(ಉ) ಸರ್ಕಾರದಿಂದ ಕಾರ್ಖಾನೆಗಳಿಗೆ ನದಿಯಿಂದ ನೀರನ್ನು ಹೆಚ್ಚಿಸದೆ ಅದನ್ನೆ ಮುಂದುವರೆಸುವುದಾಗಿ ಹೇಳಿದ್ದು ಅದು ಈವರೆಗೂ ಕಾರ್ಯ ರೂಪಕ್ಕೆ ಬಂದಿಲ್ಲದಿರುವುದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಊ) ವಿದ್ಯುತ್ ಸರಬರಾಜು ಮೇಲಿನ ಹೆಚ್ಚಿಸಿದ ಕರಗಳನ್ನು ಕೈಬಿಡುವುದಾಗಿ ಹೇಳಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೈಗೊಂಡಿರುವ ಕ್ರಮಗಳೇನು ;

(ಋ) ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಕಬ್ಬಿನ ಬೆಲೆ ಎಮ್ ಎಸ್ ಪಿ ದರವನ್ನು ಈಗಿರುವ ರೂ. ೩೧/– ದಿಂದ ರೂ.೪೨/– ಗೆ ಹೆಚ್ಚಿಸುವ ಬಗ್ಗೆ ಸರ್ಕಾರ ಏನು ಕ್ರಮ ಜರುಗಿಸಿದೆ ? (ಮಾಹಿತಿ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಬೆಳೆ ವಿಸ್ತೀರ್ಣದ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೩ (೧೯೨೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಅಡಿಕೆ ಬೆಳೆಯ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಕಳೆದ ಮೂರು ವರ್ಷಗಳ ಬೆಳೆ ವಿಸ್ತೀರ್ಣ ಹಾಗೂ ವಾರ್ಷಿಕ ಉತ್ಪನ್ನದ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ವರ್ಷಗಳಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹಾಗೂ ಬೆಳೆ ಉತ್ಪನ್ನ ಸತತವಾಗಿ ಕಡಿಮೆಯಾಗುತ್ತಾ ಬಂದಿದ್ದು ಇದಕ್ಕೆ ಸರ್ಕಾರ ಗುರುತಿಸಿರುವ ಪ್ರಮುಖ ಕಾರಣಗಳೇನು ;

(ಈ) ಜಿಲ್ಲೆಯಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹಾಗೂ ಬೆಳೆ ಉತ್ಪನ್ನ ಕುಸಿತ ತಡೆಗಟ್ಟಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಜಿಲ್ಲೆಯಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣವನ್ನು ಹೆಚ್ಚಿಸಲು ಹಾಗೂ ಬೆಳೆ ಉತ್ಪನ್ನದ ಕುಸಿತವನ್ನು ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯ ತೆಂಗು ಬೆಳೆಗಾರರಿಗೆ ದೊರೆತಿರುವ ಸೌಲಭ್ಯಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೪ (೯೨೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಲವಾರು ವರ್ಷಗಳಿಂದ ನಾನಾ ಕಾರಣಗಳಿಂದಾಗಿ ತೆಂಗು ಉತ್ಪನ್ನದಲ್ಲಿ ಸತತವಾಗಿ ಗಣನೀಯ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ತೆಂಗು ಬೆಳೆಯುವ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಕಳೆದ ಮೂರು ವರ್ಷಗಳಲ್ಲಿ ಬೆಳೆ ವಿಸ್ತೀರ್ಣ ಹಾಗೂ ವಾರ್ಷಿಕ ಉತ್ಪನ್ನದ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ದಕ್ಷಿಣ ಕನ್ನಡ ಜಿಲ್ಲೆಯ ತೆಂಗು ಬೆಳೆಗಾರರಿಗೆ ದೊರೆತಿರುವ ನೆರವು, ಸೌಲಭ್ಯಗಳು ಹಾಗೂ ಸಹಾಯಧನಗಳು ಯಾವುವು ; (ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು)

(ಈ) ಪ್ರತಿ ಫಲಾನುಭವಿ ಪಡೆದಿರುವ ನೆರವು, ಸೌಲಭ್ಯಗಳು ಹಾಗೂ ಸಹಾಯಧನಗಳ ಸಂಪೂರ್ಣ ವಿವರಗಳನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ಒದಗಿಸುವುದು ;

(ಉ) 'ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ' ಯಿಂದ ದೊರೆಯುವ ನೆರವು, ಸೌಲಭ್ಯಗಳು ಹಾಗೂ ಸಹಾಯ ಧನಗಳನ್ನು ಬೆಳೆಗಾರರು ಸಂಪೂರ್ಣವಾಗಿ ಪಡೆಯುವಂತಾಗಲು ಅವುಗಳ ಕುರಿತು ತೆಂಗು ಬೆಳೆಗಾರರಿಗೆ ಯಾವ ವಿಧಾನದ ಮೂಲಕ ಅರಿವು ಮತ್ತು ಮಾಹಿತಿಯನ್ನು ನೀಡಲಾಗುತ್ತಿದೆ ?

## ಮಂಗಳೂರು ಮಹಾನಗರ ಪಾಲಿಕೆ ಚುನಾವಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೫ (೧೯೨೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ಮಹಾನಗರ ಪಾಲಿಕೆಯ ಐದು ವರ್ಷದ ಅಧಿಕಾರಾವಧಿ ಈಗಾಗಲೇ ಮುಕ್ತಾಯಗೊಂಡು, ಸಾಕಷ್ಟು ಸಮಯ ಕಳೆದಿದ್ದರೂ ಸಹ ಚುನಾವಣೆ ನಡೆಯದಿರುವುದರಿಂದ, ಪ್ರತೀ ವರ್ಷ ಕೇಂದ್ರ ಸರ್ಕಾರದಿಂದ ಬರುತ್ತಿದ್ದ ಕೋಟ್ಯಾಂತರ ರೂ. ಅನುದಾನವನ್ನು ಕಳೆದುಕೊಳ್ಳುವುದರ ಜೊತೆಗೆ ಸಂವಿಧಾನದ ಮೂಲ ಆಶಯಕ್ಕೆ ಧಕ್ಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಐದು ವರ್ಷದ ಅಧಿಕಾರಾವಾಧಿ ಈಗಾಗಲೇ ಪೂರ್ಣಗೊಳಿಸಿರುವ ಮಂಗಳೂರು ಮಹಾನಗರ ಪಾಲಿಕೆಗೆ ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದಿರಲು ಕಾರಣಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ಮಹಾನಗರ ಪಾಲಿಕೆಯ ಐದು ವರ್ಷದ ಅಧಿಕಾರಾವಧಿ ಮುಕ್ತಾಯಗೊಂಡಿದ್ದು ಯಾವಾಗ ಮತ್ತು ಆ ಸಂಸ್ಥೆಗೆ ಯಾವ ದಿನಾಂಕದಿಂದ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿದೆ ;

(ಈ) ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿರುವ ಕಾರಣದಿಂದಾಗಿ ಜನಪ್ರತಿನಿಧಿಗಳೇ ಇಲ್ಲದೆ ಆಡಳಿತಾಧಿಕಾರಿಗಳ ದರ್ಬಾರ್‌ಗೆ ಒಳಗಾಗಿರುವ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರ ಪಾಲಿಕೆಯ ಚುನಾವಣೆಯನ್ನು ಈ ಕೂಡಲೇ ನಡೆಸಲು ಸರ್ಕಾರ ಅಗತ್ಯ ಕ್ರಮ ವಹಿಸುವುದೇ ?

## ಕರಾವಳಿಯ ಹೆಂಚು ಉದ್ಯಮದ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೬ (೧೯೨೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕರಾವಳಿಯಲ್ಲಿ ವಿಶೇಷವಾಗಿ ಗುರುತಿಸಿಕೊಂಡಿರುವ ಹೆಂಚು ಉದ್ಯಮ ಪ್ರಸ್ತುತ ದಿನಮಾನದಲ್ಲಿ ಭಾರಿ ಕುಸಿತ ಕಂಡಿರುವುದರಿಂದ, ಮಾಲೀಕರು ತೀವ್ರ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಉಡುಪಿ ಹಾಗೂ ಮಂಗಳೂರು ಜಿಲ್ಲೆಯಲ್ಲಿ ವಿಶೇಷವಾಗಿ ಆವೆ ಮಣ್ಣಿನ ಹೆಂಚು ನಿರ್ಮಾಣಗೊಳ್ಳುತ್ತಿದ್ದು, ಸದರಿ ಹೆಂಚುಗಳ ಖರೀದಿ ಕ್ಷೀಣಿಸುವುದರ ಜೊತೆಗೆ ಕಚ್ಚಾ ವಸ್ತುಗಳ ಅಲಭ್ಯತೆ, ದರ ಏರಿಕೆ, ಕಚ್ಚಾ ವಸ್ತುಗಳಿಗೆ ಇನ್‌ಪುಟ್ ಕ್ಲೈಮ್ ಇಲ್ಲದಿರುವುದು, ಆವೆ ಮಣ್ಣು ದರ ಹೆಚ್ಚಳ ಹಾಗೂ ಇನ್ನೂ ಮುಂತಾದ ಸಮಸ್ಯೆಗಳಿಂದ ಈ ವ್ಯಾಪ್ತಿಯಲ್ಲಿನ ಹೆಂಚಿನ ಕಾರ್ಖಾನೆಗಳು ಮುಚ್ಚುವ ಹಂತ ತಲುಪಿದ್ದು ಇದನ್ನು ತಪ್ಪಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮವೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಹೆಂಚು ಉದ್ಯಮದ ಪುನಃಶ್ಚೇತನ, ಅಭಿವೃದ್ಧಿ ಹಾಗೂ ವಿಸ್ತರಣೆಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು ;

(ಈ) ಕರ್ನಾಟಕ ಕರಾವಳಿಯಲ್ಲಿ ವಿಶೇಷವಾಗಿ ಗುರುತಿಸಿಕೊಂಡಿರುವ ಹಾಗೂ ಪ್ರಸ್ತುತ ತೀವ್ರ ಸಂಕಷ್ಟದಲ್ಲಿರುವ ಹೆಂಚು ಉದ್ಯಮವನ್ನು ಉಳಿಸಿ, ಬೆಳೆಸಬೇಕಾದ ಅನಿವಾರ್ಯತೆ ಇದ್ದು, ಆ ನಿಟ್ಟಿನಲ್ಲಿ ಹೆಂಚಿನ ಕಾರ್ಖಾನೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹಾಗೂ ಹೆಂಚು ಉದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳ ಬೆಳೆ ವಿಸ್ತೀರ್ಣದ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೭ (೧೯೨೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಇರುವ ವಿವಿಧ ತೋಟಗಾರಿಕಾ ಬೆಳೆಗಳ ಒಟ್ಟು ವಿಸ್ತೀರ್ಣವೆಷ್ಟು ಹಾಗೂ ಪ್ರತಿ ತೋಟಗಾರಿಕಾ

ಬೆಳೆಯ ಒಟ್ಟು ವಾರ್ಷಿಕ ಉತ್ಪನ್ನದ ಪ್ರಮಾಣವೆಷ್ಟು ; (ತಾಲ್ಲೂಕುವಾರು ಹಾಗೂ ಬೆಳೆವಾರು ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಪ್ರಗತಿ ಕಂಡಿರುವ ಪ್ರತಿಯೊಂದು ತೋಟಗಾರಿಕಾ ಬೆಳೆಯ ಬೆಳೆ ವಿಸ್ತೀರ್ಣ ಎಷ್ಟು ಹೆಚ್ಚಾಗಿದೆ ; ವಾರ್ಷಿಕ ಉತ್ಪನ್ನದ ಪ್ರಮಾಣ ಎಷ್ಟು ಏರಿಕೆಯಾಗಿದೆ ; (ಪ್ರತಿಯೊಂದು ತೋಟಗಾರಿಕಾ ಬೆಳೆಯ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು)

(ಇ) ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಕುಸಿತ ಕಂಡಿರುವ ಪ್ರತಿಯೊಂದು ತೋಟಗಾರಿಕಾ ಬೆಳೆಯ ಬೆಳೆ ವಿಸ್ತೀರ್ಣ ಎಷ್ಟು ; ವಾರ್ಷಿಕ ಉತ್ಪನ್ನದ ಪ್ರಮಾಣ ಎಷ್ಟು ಕುಸಿತವಾಗಿದೆ ; (ಪ್ರತಿಯೊಂದು ತೋಟಗಾರಿಕಾ ಬೆಳೆಯ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು)

(ಈ) ಜಿಲ್ಲೆಯಲ್ಲಿ ಕುಸಿತ ಕಂಡಿರುವ ತೋಟಗಾರಿಕಾ ಬೆಳೆಗಳ ಬೆಳೆ ವಿಸ್ತೀರ್ಣವನ್ನು ಹೆಚ್ಚಿಸಲು ಹಾಗೂ ಕುಸಿತ ಕಂಡಿರುವ ತೋಟಗಾರಿಕಾ ಬೆಳೆಗಳ ಬೆಳೆ ಉತ್ಪನ್ನದ ಪ್ರಮಾಣವನ್ನು ಏರಿಕೆ ಮಾಡಲು ಸರ್ಕಾರ ರೂಪಿಸಿರುವ ಯೋಜನೆಗಳೇನು ಹಾಗೂ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿನ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೮ (೧೯೮೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರತ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ನಿಖರವಾದ ಅಂಕಿ–ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕವಾಗಿ ನೀಡುವುದು)

(ಆ) ರಾಜ್ಯದ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರು ಉತ್ಪಾದಿಸರುವ ಉತ್ಪನ್ನಗಳ ವಿವರ ಹಾಗೂ ಉತ್ಪನ್ನಗಳ ಮೌಲ್ಯ ಎಷ್ಟು; (ಮಾಹಿತಿಯನ್ನು ಜಿಲ್ಲಾವಾರು ಪ್ರತ್ಯೇಕವಾಗಿ ನೀಡುವುದು)

(ಇ) ಸದರಿ ನೇಕಾರರು ಉತ್ಪಾದಿಸಿದ ವಸ್ತುಗಳಿಗೆ ಮಾರುಕಟ್ಟೆ ಸೌಲಭ್ಯ ಕಲ್ಪಿಸಲು ಕೈಗೊಂಡ ಕ್ರಮಗಳು ಯಾವುವು ; (ಕ್ರಮ ಜರುಗಿಸಿದ್ದರೆ ಜಿಲ್ಲಾವಾರು ಕಾರ್ಯಕ್ರಮವಾರು ಮಾಹಿತಿ ಪ್ರತ್ಯೇಕವಾಗಿ ನೀಡುವುದು)

(ಈ) ಸದರಿ ನೇಕಾರರಿಗೆ ಜಿಲ್ಲಾವಾರು ಮಾರುಕಟ್ಟೆ ಸಂಕೀರ್ಣ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಾರುಕಟ್ಟೆ ಸಂಕೀರ್ಣ ನಿರ್ಮಾಣ ಮಾಡಲಾಗುವುದು ;

(ಉ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರಿಗೆ ವಿಶೇಷ ಘಟಕ (SCP) ಹಾಗೂ ಗಿರಿಜನ ಉಪ ಯೋಜನೆ (TSP) ಅಡಿಯಲ್ಲಿ ನೀಡಿದ ಸೌಲಭ್ಯಗಳು ಯಾವುವು ? (ಮಾಹಿತಿಯನ್ನು ಜಿಲ್ಲಾವಾರು ಪ್ರತ್ಯೇಕವಾಗಿ ನೀಡುವುದು)

## ಬಾಗಲಕೋಟೆ–ವಿಜಯಾಪುರ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಅನುದಾನ ಮಂಜೂರಾಗಿರುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೯ (೯೮೮೪) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ–ವಿಜಯಾಪುರ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲೆ ಮತ್ತು ತಾಲ್ಲೂಕುವಾರು ಅಂಕಿ–ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಉತ್ತಮ ಸ್ಥಿತಿಯಲ್ಲಿರುವ ಸಣ್ಣ ಕೈಗಾರಿಕೆಗಳು ಯಾವುವು ; (ಜಿಲ್ಲೆ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ರೋಗಗ್ರಸ್ತ ಸ್ಥಿತಿಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಹೆಸರುಗಳೊಂದಿಗೆ ತಾಲ್ಲೂಕುವಾರು ಅಂಕಿ–ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ರೋಗಗ್ರಸ್ತ ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸದರಿ ಕೈಗಾರಿಕೆಗಳ ಪುನಃಶ್ಚೇತನಕ್ಕೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ವಿಸ್ತಾರವಾಗಿ ತಿಳಿಸುವುದು)

(ಉ) ಸದರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಕೈಗಾರಿಕೆಗಳ ಅಭಿವೃದ್ಧಿಗೆ ಮಂಜೂರಾದ ಅನುದಾನವೆಷ್ಟು ; ಪ್ರತಿವರ್ಷ ಖರ್ಚು ಮಾಡಿದ ಹಣವೆಷ್ಟು ?

## ಹುಬ್ಬಳ್ಳಿ–ಧಾರವಾಡ ನಗರಗಳಿಗೆ ಕುಡಿಯುವ ನೀರಿನ ಪೂರೈಕೆಯ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೦ (೧೯೮೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳಿಗೆ ಕುಡಿಯುವ ನೀರಿನ ಪೂರೈಕೆ ಯಾವ ರೀತಿ ಮಾಡಲಾಗುತ್ತಿದೆ ;

(ಆ) ಸದರಿ ನಗರಗಳಿಗೆ ಒಂದು ವರ್ಷಕ್ಕೆ ಎಷ್ಟು ನೀರು ಬೇಕಾಗುತ್ತದೆ ;

(ಇ) ಅವಳಿ ನಗರಗಳ ಎಲ್ಲಾ ವಾರ್ಡ್‌ಗಳಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಲಾಗುತ್ತಿದೆಯೇ ;

(ಈ) ಅವಳಿ ನಗರಗಳಿಗೆ ಕುಡಿಯುವ ನೀರು ಪೂರೈಕೆ ಮಾಡಲು ಪೈಪ್‌ಲೈನ್ ಮಾಡುವಾಗ ಸರಿಯಾಗಿ ಮುಚ್ಚದೆ ರಸ್ತೆಗಳು ಹದಗೆಟ್ಟಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ?

## ಮಳೆಯಿಂದಾಗಿ ಹಾನಿಯಾಗಿರುವ ಬೆಳೆಗಳಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೨೧ (೧೮೮೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಸುರಿದ ಮುಂಗಾರು ಮತ್ತು ಇತ್ತೀಚೆಗೆ ಸುರಿದ ಮಳೆಯಿಂದಾಗಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆ ಹಾನಿಯಾಗಿದೆ ; ಯಾವ ಯಾವ ಬೆಳೆ ಹಾನಿಯಾಗಿದೆ ; ಆಗಿರುವ ಬೆಳೆ ಹಾನಿ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಬೆಳೆ ಹಾನಿಯಾದ ರೈತರಿಗೆ ಪರಿಹಾರ ನೀಡಲಾಗಿದೆಯೇ ; ಹಾಗಿದ್ದರೆ, ಯಾವ ಬೆಳೆಗೆ ಎಷ್ಟು ಪರಿಹಾರ ಘೋಷಣೆ ಮಾಡಲಾಗಿದೆ ; ಈವರೆಗೆ ಎಷ್ಟು ಪರಿಹಾರ ಹಣ ಬಿಡುಗಡೆಯಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಪರಿಹಾರ ಮೊತ್ತ ಬಿಡುಗಡೆಯಾಗದಿದ್ದಲ್ಲಿ, ರೈತರಿಗೆ ಯಾವ ಕಾಲಮಿತಿಯೊಳಗೆ ಪರಿಹಾರ ಮೊತ್ತ ಬಿಡುಗಡೆ ಮಾಡಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಈ) ಎನ್.ಡಿ.ಆರ್.ಎಫ್ ಮಾರ್ಗಸೂಚಿಯಿಂದಾಗಿ ರೈತರಿಗೆ ಯಾವ ರೀತಿ ತೊಂದರೆ ಆಗಿದೆ ; ಮಾರ್ಗಸೂಚಿ ಮಾನದಂಡ ಬದಲಾವಣೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಕಲ್ಲು ಗಣಿ ಗುತ್ತಿಗೆ ಪಡೆದಿರುವ ಕಂಪನಿಗಳು ಅಕ್ರಮ ಗಣಿಗಾರಿಕೆ ಮಾಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೨೨ (೧೮೮೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಲ್ಲು ಗಣಿ ಗುತ್ತಿಗೆ ನೀಡಿರುವ ಪ್ರದೇಶಗಳು ಯಾವುವು ; ಗುತ್ತಿಗೆ ಪಡೆದಿರುವ ಕಂಪನಿಗಳ ಹೆಸರು ಸಹಿತ ಕಂಪನಿಗೆ ಗಣಿಗಾರಿಕೆಗೆ ಎಷ್ಟು ಎಕರೆ ಭೂಮಿ ನೀಡಲಾಗಿದೆ ಎಂಬ ವಿವರವನ್ನು ಜಿಲ್ಲಾವಾರು ನೀಡುವುದು ;

(ಆ) ಎಷ್ಟು ಕಂಪನಿಗಳು ಅಕ್ರಮವಾಗಿ ಗಣಿಗಾರಿಕೆ ನಡೆಸಿವೆ ; ಇದರಿಂದ ಆಗಿರುವ ನಷ್ಟ ಎಷ್ಟು ; (ಸಮಗ್ರ ವಿವರ ನೀಡುವುದು)

(ಇ) ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ಯಾವ ಯಾವ ಕಂಪನಿಗಳ ಮೇಲೆ ಎಷ್ಟು ದಂಡ ವಿಧಿಸಲಾಗಿದೆ ; ಎಷ್ಟು ಕಂಪನಿಗಳು ದಂಡದ ಮೊತ್ತ ಪಾವತಿಸಿವೆ ; (ಕಂಪನಿವಾರು ವಿವರ ನೀಡುವುದು)

(ಈ) ಯಾವ ಯಾವ ಕಂಪನಿಗಳು ದಂಡದ ಮೊತ್ತವನ್ನು ಪಾವತಿ ಮಾಡಿಲ್ಲ ; ಈ ಕಂಪನಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಉ) ದಂಡದ ಮೊತ್ತವನ್ನು ವಸೂಲಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

# ಪ್ರತಿ ನಿತ್ಯ ಉತ್ಪಾದನೆ ಆಗುವ ಕಸವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೨೩ (೧೮೩೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ದಿನ ಎಷ್ಟು ಟನ್ ಕಸ ಸಂಗ್ರಹಣೆಯಾಗುತ್ತಿದೆ ; ಎಷ್ಟು ಟನ್ ಕಸ ವಿಲೇವಾರಿ ಮಾಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ವೈಜ್ಞಾನಿಕವಾಗಿ ಕಸ ವಿಲೇವಾರಿ ಮಾಡಲು ಅನುಸರಿಸುತ್ತಿರುವ ಕ್ರಮವೇನು ; ಕಸ ವಿಲೇವಾರಿಗೆ ಟೆಂಡರ್ ಕರೆಯಲಾಗಿದೆಯೇ ; ಯಾವ ಸಂಸ್ಥೆಗೆ ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ ; (ಜಿಲ್ಲಾವಾರು ಸಮಗ್ರ ವಿವರ ನೀಡುವುದು)

(ಇ) ಪರಿಸರಕ್ಕೆ ಹಾನಿ ಉಂಟು ಮಾಡುವ ಘನ ಹಾಗೂ ದ್ರವ್ಯ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡದ ಕಾರಣಕ್ಕೆ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ದಂಡ ವಿಧಿಸಿರುವುದು ನಿಜವೇ ; ಎಷ್ಟು ದಂಡ ವಿಧಿಸಿದೆ ;

(ಈ) ಎನ್.ಜಿ.ಟಿ ಆದೇಶದ ನಂತರ ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಕಸ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಸ್ಥಳೀಯ ಸಂಸ್ಥೆಗಳು ಕಸ ಸಂಸ್ಕರಣಾ ಘಟಕಗಳನ್ನು ನಿರ್ಮಿಸದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೨೪ (೧೮೩೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ದಿನ ಎಷ್ಟು ಟನ್ ಕಸ ಸಂಗ್ರಹಣೆಯಾಗುತ್ತಿದೆ ; ಎಷ್ಟು ಟನ್ ಕಸ ವಿಲೇವಾರಿ ಮಾಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಬಯಲು ಪ್ರದೇಶದಲ್ಲಿ ತ್ಯಾಜ್ಯ ಸುರಿಯುವುದು ಮತ್ತು ಬೆಂಕಿ ಹಾಕಿ ಸುಡುವುದನ್ನು ನಿಷೇಧಿಸಿ ಆದೇಶ ಹೊರಡಿಸಲಾಗಿದೆಯೇ ; ಹಾಗಿದ್ದರೂ, ಎಲ್ಲಾ ಸ್ಥಳೀಯ ಸಂಸ್ಥೆಗಳು ಕಸ ಸಂಸ್ಕರಣಾ ಘಟಕಗಳನ್ನು ನಿರ್ಮಿಸಿದೆಯೇ ; (ಸಮಗ್ರ ವಿವರ ನೀಡುವುದು)

(ಇ) ಸ್ಥಳೀಯ ಸಂಸ್ಥೆಗಳ ಕಸ ಸಂಸ್ಕರಣಾ ಘಟಕ ಸ್ಥಾಪನೆಗೆ ಸರ್ಕಾರ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು ; ಈ ಪೈಕಿ ಎಷ್ಟು ವೆಚ್ಚವಾಗಿದೆ ; ಕಸ ಸಂಸ್ಕರಣಾ ಘಟಕವನ್ನು ಈವರೆಗೆ ನಿರ್ಮಿಸದ ಸ್ಥಳೀಯ ಸಂಸ್ಥೆಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಈ) ಎಲ್ಲಾ ಸ್ಥಳೀಯ ಸಂಸ್ಥೆಗಳು ಕಸ ಸಂಸ್ಕರಣಾ ಘಟಕವನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೭೨೫ (೧೮೮೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಖಾಸಗಿ ಅವರಿಗೆ ಕರಾರು ಮೂಲಕ ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ ಕರಾರಿನ ಅವಧಿ ಎಷ್ಟು ; ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು ; (ಕಳೆದ ಮೂರು ವರ್ಷಗಳ ಅಂಕಿ–ಅಂಶಗಳನ್ನು ಒದಗಿಸುವುದು)

(ಆ) ಕರ್ನಾಟಕ ರಾಜ್ಯ ಸರ್ಕಾರವು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಂಸ್ಥೆ ಜೊತೆ ರಿಯಾಯಿತಿ ಒಪ್ಪಂದ ಮಾಡಿಕೊಂಡಿದೆಯೇ ; ಮಾಡಿಕೊಂಡಿದ್ದಲ್ಲಿ, ಅದರ ನಿಬಂಧನೆಗಳೇನು ; (ರಿಯಾಯಿತಿ ಒಪ್ಪಂದದ ಪ್ರತಿಯನ್ನು ಒದಗಿಸುವುದು)

(ಇ) ರಾಜ್ಯ ಸರ್ಕಾರವು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಂಸ್ಥೆಯ ಜೊತೆಯಲ್ಲಿ ಜಮೀನಿನ ಲೀಸ್ ಕರಾರು ಪತ್ರವನ್ನು ಹೊಂದಿರುತ್ತದೆಯೇ ; ಹೊಂದಿದ್ದಲ್ಲಿ, ಇದರ ಕಾಲಮಿತಿ ಏನು ಮತ್ತು ಯಾವ ದರದಲ್ಲಿ ಜಮೀನನ್ನು ಒದಗಿಸಲಾಗಿದೆ ; (ಜಮೀನು ಲೀಸ್ ಪತ್ರದ ಸಹಿತವಾಗಿ ವಿವರಗಳನ್ನು ಒದಗಿಸುವುದು)

(ಈ) ರಾಜ್ಯ ಸರ್ಕಾರವು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಂಸ್ಥೆಯ ಜೊತೆಯಲ್ಲಿ ಹೋಲ್ಡರ್ ಒಪ್ಪಂದ ಮತ್ತು ಬೆಂಬಲದ ಒಪ್ಪಂದ ಹೊಂದಿರುತ್ತದೆಯೇ ; (ಹೊಂದಿದ್ದಲ್ಲಿ, ಇದರ ಪ್ರತಿಯನ್ನು ಒದಗಿಸುವುದು)

(ಉ) ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿ ಜಾಹೀರಾತು ಫಲಕಗಳನ್ನು ಪ್ರದರ್ಶಿಸಲು ಕರ್ನಾಟಕ ರಾಜ್ಯ ಸರ್ಕಾರ ಅನುಮತಿ ನೀಡಿರುತ್ತದೆಯೇ ; ನೀಡಿದ್ದಲ್ಲಿ, ಇದರ ನಿಬಂಧನೆಗಳು ಏನು ; ರಾಜ್ಯ ಸರ್ಕಾರ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಂಸ್ಥೆಯ ಜೊತೆಯಲ್ಲಿ ಜಾಹೀರಾತು ನೀತಿಯನ್ನು ಹೊಂದಿದೆಯೇ ; ಹೊಂದಿದ್ದಲ್ಲಿ, ಜಾಹೀರಾತು ಫಲಕಗಳಿಗೆ ನಿಗದಿಗೊಳಿಸುವ ದರಗಳೇನು ;

(ಊ) ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ವ್ಯಾಪ್ತಿಯಲ್ಲಿ ಕಾನೂನುಬಾಹಿರವಾಗಿ ಅಕ್ರಮ ಜಾಹೀರಾತು ಫಲಕಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; ಬಂದಿದ್ದಲ್ಲಿ, ಇವುಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ?

## ಜವಳಿ ಇಲಾಖೆಗೆ ಸಂಬಂಧಪಟ್ಟಂತೆ ಕೈಮಗ್ಗಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೭೨೬ (೧೮೮೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೂತನ ಜವಳಿ ನೀತಿ ಜಾರಿಯಲ್ಲಿ ಇರುತ್ತದೆಯೇ ; (ಇದ್ದಲ್ಲಿ, ಜವಳಿ ನೀತಿಯ ಮಾಹಿತಿಯನ್ನು ಒದಗಿಸುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಇರುವ ಕೈಮಗ್ಗಗಳು ಎಷ್ಟು ; ಇಲ್ಲಿನ ಕೈಮಗ್ಗಗಳಿಗೆ ಮತ್ತು ನೇಕಾರರಿಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ನೀಡುತ್ತಿದೆ ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಅಡಿಯಲ್ಲಿ ಎಷ್ಟು ವಿದ್ಯುತ್ ಮಗ್ಗಗಳು ಕಾರ್ಯನಿರ್ವಹಿಸುತ್ತಿವೆ ; ಇದರಲ್ಲಿ ಉಣ್ಣೆ ವಲಯದ ಮಗ್ಗಗಳು ಮತ್ತು ಬಟ್ಟೆ ವಲಯದ ಮಗ್ಗಗಳು ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಇರುವ ನೇಕಾರರ ಸಂಖ್ಯೆ ಎಷ್ಟು; ಯಾವ ಯಾವ ಯೋಜನೆಯಲ್ಲಿ ಜಿಲ್ಲೆಯ ನೇಕಾರರಿಗೆ ಎಷ್ಟು ಅನುದಾನಗಳನ್ನು ನೀಡಲಾಗಿದೆ ; (ಕಳೆದ ಮೂರು ವರ್ಷಗಳಲ್ಲಿ ನೇಕಾರರಿಗೆ ನೀಡಿರುವ ಅನುದಾನಗಳ, ಸಹಾಯಧನಗಳ ವಿವರಗಳನ್ನು ತಾಲ್ಲೂಕುವಾರು ಒದಗಿಸುವುದು)

(ಉ) ತುಮಕೂರು ಜಿಲ್ಲೆಯಲ್ಲಿ ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆಯೇ ; ನೀಡಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ನೇಕಾರರ ಮಕ್ಕಳಿಗೆ ಯಾವ ಯಾವ ವಿದ್ಯಾರ್ಥಿ ವೇತನಗಳನ್ನು ನೀಡಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ಫಲಾನುಭವಿಗಳ ಸಹಿತವಾಗಿ ಒದಗಿಸುವುದು)

(ಊ) ತುಮಕೂರು ಜಿಲ್ಲೆಯಲ್ಲಿ ಇರುವ ಒಟ್ಟು ನೇಕಾರರ ಸಹಕಾರ ಸಂಘಗಳು ಎಷ್ಟು ; (ಇವುಗಳಲ್ಲಿ ಹತ್ತಿ ಕೈಮಗ್ಗ, ರೇಷ್ಮೆ ಕೈಮಗ್ಗ, ಉಣ್ಣೆ ಕೈಮಗ್ಗ, ವಿದ್ಯುತ್ ಮಗ್ಗದ ಮತ್ತು ಇತರ ಸಹಕಾರ ಸಂಘಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು)

(ಋ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಅತಿ ಹೆಚ್ಚು ಸಂಖ್ಯೆಯಲ್ಲಿ ನೇಕಾರರು ಮತ್ತು ಕೂಲಿಕಾರ್ಮಿಕರು ಇದ್ದು, ನೇಕಾರರ ಬದುಕಿಗೆ ಪೂರಕವಾಗಿ ಸಿದ್ದ ಉಡುಪುಗಳ ಘಟಕದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಯೋಜನೆಯನ್ನು ಚಿಕ್ಕನಾಯಕನಹಳ್ಳಿಯಲ್ಲಿ ಯಾವಾಗ ಜಾರಿ ಮಾಡುವುದು ?

## ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೭೨೭ (೧೮೮೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಅಡಿಯಲ್ಲಿ ಬರುವ ಸಾರ್ವಜನಿಕ ಉದ್ಯಮಗಳು ಯಾವುವು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಸಾರ್ವಜನಿಕ ಉದ್ಯಮಗಳ ಇಲಾಖೆಯ ಅಡಿಯಲ್ಲಿ ಬರುವ ಎಷ್ಟು ಸಾರ್ವಜನಿಕ ಉದ್ಯಮಗಳ ಲೆಕ್ಕಪರಿಶೋಧನೆ ೨೦೨೪–೨೫ನೇ ಸಾಲಿನವರೆಗೆ ಪೂರ್ಣಗೊಂಡಿರುತ್ತದೆ ; ಲೆಕ್ಕಪರಿಶೋಧನೆಗೆ ಬಾಕಿ ಇರುವ ಸಾರ್ವಜನಿಕ ಉದ್ಯಮಗಳು ಎಷ್ಟು ; ಬಾಕಿ ಇದ್ದಲ್ಲಿ ಇದಕ್ಕೆ ಕಾರಣವೇನು ;

(ಇ) ಸರ್ಕಾರವು ರಾಜ್ಯದಲ್ಲಿ ಸಾರ್ವಜನಿಕ ಉದ್ಯಮಗಳ ಮೇಲೆ ಎಷ್ಟು ಬಂಡವಾಳವನ್ನು ಹೂಡಿರುತ್ತದೆ ; ಖಾಸಗಿ ಸಹಭಾಗಿತ್ವದ ಜೊತೆಯಲ್ಲಿ ಎಷ್ಟು ಸಾರ್ವಜನಿಕ ಉದ್ದಿಮೆಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ; ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ

ಸಾರ್ವಜನಿಕ ಉದ್ಯಮಗಳು ವಾರ್ಷಿಕವಾಗಿ ಎಷ್ಟು ಲಾಭಗಳಿಸಿರುತ್ತವೆ ; ಸರ್ಕಾರದ ಸಾರ್ವಜನಿಕ ಉದ್ದಿಮೆಗಳ ಲಾಭ ಮತ್ತು ನಷ್ಟ ಎಷ್ಟು ; (ಕಳೆದ ಮೂರು ವರ್ಷಗಳ ಅಂಕಿ ಅಂಶಗಳನ್ನು ಒದಗಿಸುವುದು)

(ಈ) ಸಾರ್ವಜನಿಕ ಉದ್ಯಮಗಳಲ್ಲಿ ಹೆಚ್ಚು ಬಂಡವಾಳವನ್ನು ತೊಡಗಿಸಿ ಹೆಚ್ಚು ಜನರನ್ನು ಪಾಲ್ಗೊಳ್ಳುವಂತೆ ಮಾಡಲು ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳೇನು ; ಸಾರ್ವಜನಿಕ ಉದ್ಯಮಗಳಿಂದ ರಾಜ್ಯದ ಯುವಕರಿಗೆ ಹೆಚ್ಚು ಹೆಚ್ಚು ಉದ್ಯೋಗ ದೊರಕಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ಸರ್ಕಾರ ಇಂತಹ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಲ್ಲಿ, ಅವುಗಳ ವಿವರಗಳನ್ನು ಒದಗಿಸುವುದು)

(ಉ) ರಾಜ್ಯ ಸರ್ಕಾರದ ಎಷ್ಟು ಸಾರ್ವಜನಿಕ ಉದ್ಯಮಗಳಲ್ಲಿ ಕೇಂದ್ರ ಸರ್ಕಾರ ತನ್ನ ಬಂಡವಾಳವನ್ನು ಹೂಡಿರುತ್ತದೆ ; ಹೂಡಿದ್ದಲ್ಲಿ, ಅದರ ಶೇಕಡವಾರು ಪ್ರಮಾಣ ಎಷ್ಟು ; ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯದ ಸಾರ್ವಜನಿಕ ಉದ್ಯಮಗಳಿಗೆ ಯಾವ ಯಾವ ಅನುದಾನ ಮತ್ತು ಕಾರ್ಯಕ್ರಮಗಳನ್ನು ನೀಡುತ್ತಿದೆ ? (ನೀಡುತ್ತಿದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು)

## ತುಮಕೂರು ಜಿಲ್ಲೆ ಗಣಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೭೨೮ (೧೮೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಇರುವ ನಿಯಮಾವಳಿಗಳು ಏನು ; ಅನಧಿಕೃತ ಕಲ್ಲು ಗಣಿಗಾರಿಕೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಇರುವ ಕಲ್ಲುಗಣಿಗಾರಿಕೆಗಳು ಎಷ್ಟು; ಇವುಗಳಲ್ಲಿ ಅನುಮತಿ ಪಡೆದಿರುವ ಅಧಿಕೃತ ಕಲ್ಲು ಗಣಿಗಾರಿಕೆಗಳು ಮತ್ತು ಅನಧಿಕೃತ ಕಲ್ಲು ಗಣಿಗಾರಿಕೆಗಳು ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ತುಮಕೂರು ಜಿಲ್ಲೆಯಲ್ಲಿರುವ ಎಷ್ಟು ಕಲ್ಲು ಗಣಿಗಾರಿಕೆಗಳಿಗೆ ಪರಿಸರ ಇಲಾಖೆಯಿಂದ ಅನುಮತಿ ದೊರೆತಿರುತ್ತದೆ ; (ದೊರೆತಿದ್ದಲ್ಲಿ ಅದರ ವಿವರಗಳನ್ನು ಒದಗಿಸುವುದು)

(ಈ) ತುಮಕೂರು ಜಿಲ್ಲೆಯ ರಾಷ್ಟ್ರೀಯ ರಸ್ತೆ ಹೆದ್ದಾರಿಗಳಲ್ಲಿ ರಾಜ್ಯ ಹೆದ್ದಾರಿಗಳಲ್ಲಿ ಪ್ರಮುಖ ರಸ್ತೆಗಳ ಪಕ್ಕದಲ್ಲಿ ಖಾಸಗಿ ಜಮೀನಿನಲ್ಲಿ ಮತ್ತು ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಕಟ್ಟಡ ಕಲ್ಲು ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಇಂತಹ ಅನಧಿಕೃತ ಕಲ್ಲು ಗಣಿಗಾರಿಕೆಯನ್ನು ತಡೆಯಲು ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ;

(ಉ) ತುಮಕೂರು ಜಿಲ್ಲೆಯಲ್ಲಿ ಗಣಿ ಇಲಾಖೆಯಿಂದ ಅನುಮತಿ ಮೂಲಕ ನಡೆಯುತ್ತಿರುವ ಕಲ್ಲು ಗಣಿಗಾರಿಕೆಗಳಿಗೆ ಸರ್ಕಾರ ವಿಧಿಸಿರುವ ನಿಬಂಧನೆಗಳು ಯಾವುವು ; ಇವುಗಳ ಗುತ್ತಿಗೆಯ ಅವಧಿ ಎಷ್ಟು; ಎಷ್ಟು ಕಲ್ಲು ಗಣಿಗಾರಿಕೆಗಳು ನವೀಕರಣ ಹೊಂದಿರುತ್ತವೆ; ನವೀಕರಣಕ್ಕೆ ಬಾಕಿ ಇರುವ ಕಲ್ಲು ಗಣಿಗಾರಿಕೆಗಳು ಎಷ್ಟು? (ಕಲ್ಲು ಗಣಿಗಾರಿಕೆಗಳ ಹೆಸರು, ಅದರ ಅವಧಿ ಸಹಿತವಾಗಿ ಪೂರ್ಣ ವಿವರಗಳನ್ನು ಒದಗಿಸುವುದು)

## ಕನಕಪುರ ಯೋಜನಾ ಪ್ರಾಧಿಕಾರದ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೭೨೯ (೧೪೯೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನಕಪುರ ಯೋಜನಾ ಪ್ರಾಧಿಕಾರವನ್ನು ಯಾವಾಗ ರಚನೆ ಮಾಡಲಾಗಿರುತ್ತದೆ ಮತ್ತು ಇದರ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕು ಮತ್ತು ಗ್ರಾಮಗಳು ಎಷ್ಟು ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಕನಕಪುರ ಯೋಜನಾ ಪ್ರಾಧಿಕಾರದ ಮಹಾ ಯೋಜನೆ ಯಾವಾಗ ಅನುಮೋದನೆಗೊಂಡಿರುತ್ತದೆ ; ಅನುಮೋದನೆಗೊಂಡ ಮಾಹಿತಿಯೊಂದಿಗೆ ಪ್ರತಿಯನ್ನು ಒದಗಿಸುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಕನಕಪುರ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಎಷ್ಟು ವ್ಯವಸಾಯ ಭೂಮಿಯನ್ನು ವ್ಯವಸಾಯೇತರ ಉದ್ದೇಶಗಳಿಗೆ ಭೂ ಪರಿವರ್ತನೆ ಮಾಡಲು ತಾಂತ್ರಿಕ ಅಭಿಪ್ರಾಯ ನೀಡಲಾಗಿದೆ ; (ಸರ್ವೆ ನಂಬರ್ ಸಹಿತವಾಗಿ ಪೂರ್ಣ ವಿವರಗಳನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಕನಕಪುರ ಯೋಜನಾ ಪ್ರಾಧಿಕಾರವು ಎಷ್ಟು ಪ್ರದೇಶಕ್ಕೆ ವಸತಿ ವಾಣಿಜ್ಯ ಕೈಗಾರಿಕೆ ಮತ್ತು ಇತರೆ ಉದ್ದೇಶದ ವಿನ್ಯಾಸ ನಕ್ಷೆಗಳನ್ನು ಅನುಮೋದನೆ ನೀಡಿರುತ್ತದೆ ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಕನಕಪುರ ಯೋಜನಾ ಪ್ರಾಧಿಕಾರವು ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ ಉತ್ತರಿ

ಗ್ರಾಮದ ಎಷ್ಟು ಪ್ರದೇಶಕ್ಕೆ ಭೂ ಪರಿವರ್ತನೆ ಮಾಡಲು ಅನುಮತಿಯನ್ನು ನೀಡಿರುತ್ತದೆ ; (ಅರ್ಜಿದಾರರ ಹೆಸರು ಸಹಿತವಾಗಿ ಜಮೀನು ಸಹಿತವಾಗಿ ಪೂರ್ಣ ವಿವರಗಳನ್ನು ಒದಗಿಸುವುದು)

(ಊ) ಕಳೆದ ಎರಡು ವರ್ಷಗಳಲ್ಲಿ ಕನಕಪುರ ಯೋಜನಾ ಪ್ರಾಧಿಕಾರವು ಎಷ್ಟು ಏಕನಿವೇಶನ ನಕ್ಷೆಯನ್ನು ಅನುಮೋದನೆ ಮಾಡಿರುತ್ತದೆ ? (ಪೂರ್ಣ ವಿವರವನ್ನು ಒದಗಿಸುವುದು)

## ಕೃಷಿ ಉತ್ಪನ್ನಗಳನ್ನು ಕನಿಷ್ಟ ಬೆಂಬಲ ಯೋಜನೆಯಡಿ ಖರೀದಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೦ (೧೯೫೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯ ಸರ್ಕಾರವು ಕನಿಷ್ಟ ಬೆಂಬಲ ಯೋಜನೆಯಡಿ ರೈತರಿಂದ ಖರೀದಿಸುತ್ತಿರುವ ಕೃಷಿ ಉತ್ಪನ್ನಗಳು ಯಾವುವು ; ಯಾವ ಕೇಂದ್ರಗಳಲ್ಲಿ ಖರೀದಿ ಮಾಡಲಾಗುತ್ತಿದೆ ; ಈ ಉತ್ಪನ್ನಗಳನ್ನು ಪ್ರತಿ ವರ್ಷ ಯಾವ ಯಾವ ತಿಂಗಳುಗಳಲ್ಲಿ/ಅವಧಿಯಲ್ಲಿ ಸರ್ಕಾರವು ಖರೀದಿ ಮಾಡುತ್ತಿದೆ: ಉತ್ಪನ್ನವಾರು ಮಾಹಿತಿ ನೀಡುವುದು ; ಕೃಷಿ ಉತ್ಪನ್ನಗಳನ್ನು ಕನಿಷ್ಠ ಬೆಂಬಲ ಯೋಜನೆಯಡಿ ವರ್ಷವಿಡಿ ಖರೀದಿ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

# ಕರ್ನಾಟಕದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ನಿರುದ್ಯೋಗ ಸಮಸ್ಯೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೭೩೧ (೧೯೭೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಪ್ರಮುಖ ಕಾರಣಗಳೇನು ;

(ಆ) ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿನ ನಿರುದ್ಯೋಗವನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಗಳು ಮತ್ತು ದೊಡ್ಡ ಕೈಗಾರಿಕೆಗಳು ಹೇಗೆ ವಿಭಿನ್ನವಾಗಿ ಕೊಡುಗೆ ನೀಡುತ್ತಿವೆ ; (ಮಾಹಿತಿ ನೀಡುವುದು)

(ಈ) ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರವು ಸ್ಥಳೀಯ ಉದ್ಯೋಗದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಉ) ರಾಜ್ಯದಲ್ಲಿ ಹೆಚ್ಚಿನ ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮತ್ತು ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

# KIADB ಸ್ವಾಧೀನ ಪಡಿಸಿಕೊಂಡಿರುವ ಭೂಮಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೭೩೨ (೧೯೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೆಐಎಡಿಬಿ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂಮಿಯನ್ನು ಸ್ವಾಧೀನಪಡಿಸಿಕೊಂಡ ರೈತರಿಗೆ ಪರಿಹಾರ ಪಾವತಿಯಲ್ಲಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನ್ಯಾಯಾಲಯದ ಆದೇಶಗಳ ಪ್ರಕಾರ ಇನ್ನೂ ಎಷ್ಟು ಭೂಮಾಲೀಕರು ಹೆಚ್ಚಿನ ಪರಿಹಾರಕ್ಕಾಗಿ ಕಾಯುತ್ತಿದ್ದಾರೆ ; (ಮಾಹಿತಿ ನೀಡುವುದು)

(ಈ) ಸ್ವಾಧೀನಪಡಿಸಿಕೊಳ್ಳುವ ಮೊದಲು ರೈತರಿಗೆ ಸ್ಪಷ್ಟ ಮಾಹಿತಿ ಮತ್ತು ಒಪ್ಪಿಗೆಯನ್ನು ನೀಡಲಾಗುತ್ತಿದೆಯೇ ;

(ಉ) KIADB ಸ್ವಾಧೀನಪಡಿಸಿಕೊಂಡ ಎಷ್ಟು ಭೂಮಿಗಳು ಕಾನೂನು ವಿವಾದ ಅಥವಾ ನ್ಯಾಯಾಲಯದ ತಡೆಯಾಜ್ಞೆಯಲ್ಲಿವೆ ;

(ಊ) KIADB ಭೂ ವಿವರಗಳಿಗಾಗಿ ಒಂದೇ ಆನ್‌ಲೈನ್ ಪೋರ್ಟಲ್ ಅನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ನಗರಸಭೆ, ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಮಾಹಿತಿ ಕುರಿತು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೭೩೩ (೧೯೨೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಸಭೆ ಮತ್ತು ಪುರಸಭೆ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಬರುವ ಒಟ್ಟು ಆಸ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ಸ್ಥಳೀಯ ಸಂಸ್ಥೆವಾರು ನೀಡುವುದು)

(ಆ) ಈ ಸ್ಥಳೀಯ ಸಂಸ್ಥೆಗಳಲ್ಲಿ ಇರುವ ಬಿ ಖಾತೆಯ ಆಸ್ತಿಗಳನ್ನು 'ಎ' ಖಾತೆಗೆ ಮೇಲ್ದರ್ಜೆಗೇರಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) 'ಬಿ' ಖಾತೆಯಿಂದ 'ಎ' ಖಾತೆಗೆ ಮೇಲ್ದರ್ಜೆಗೇರಿಸಿರುವ ಆಸ್ತಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಶುಲ್ಕ ಎಷ್ಟು ; ಇದರಿಂದ ಸರ್ಕಾರಕ್ಕೆ ಬರುವ ಆದಾಯದ ಪ್ರಮಾಣ ಎಷ್ಟು ; ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು ;

(ಈ) ನಗರಸಭೆ, ಪುರಸಭೆ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿನ ಬಡಾವಣೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಒದಗಿಸದಿದ್ದಲ್ಲಿ, ಯಾವ ಕಾರಣದಿಂದ ಒದಗಿಸಿರುವುದಿಲ್ಲ ಮಾಹಿತಿ ಒದಗಿಸುವುದು ?

## ರಾಜ್ಯದಲ್ಲಿರುವ ಗಣಿಗಾರಿಕೆಗಳ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೭೩೪ (೧೯೨೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಅಧಿಕೃತವಾಗಿ ಕಲ್ಲುಗಣಿಗಾರಿಕೆಗಳು ಚಾಲ್ತಿಯಲ್ಲಿರುತ್ತದೆ ; ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿ ಅನಧಿಕೃತವಾಗಿ ಕಲ್ಲು ಗಣಿಗಾರಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು ಜರುಗಿಸಲಾಗಿದೆ ; (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅರಣ್ಯ ವ್ಯಾಪ್ತಿಯ ಪ್ರದೇಶಗಳಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯಲ್ಲಿ ಬಳಸುವ ಸ್ಫೋಟಕಗಳಿಂದ ವನ್ಯಪ್ರಾಣಿಗಳಿಗೆ ತೊಂದರೆಯಾಗಿರುವುದು ಹಾಗೂ ವನ್ಯ ಪ್ರಾಣಿಗಳು ನಾಗರೀಕ ಪ್ರದೇಶಗಳಿಗೆ ವಲಸೆ ಬರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ತೋಟಗಾರಿಕೆ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಮಾಹಿತಿ ಕುರಿತು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೭೩೫ (೧೯೧೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕಾ ಇಲಾಖೆಯಲ್ಲಿ ಸರ್ಕಾರದಿಂದ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ವೃಂದವಾರು ಮಾಹಿತಿ ನೀಡುವುದು ;

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು/ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಹೆಚ್ಚಿನ ಹುದ್ದೆಗಳು ಖಾಲಿಯಿರುವುದರಿಂದ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ತೊಂದರೆಯಾಗುವುದಿಲ್ಲವೇ ಹಾಗೂ ರೈತರಿಗೆ ಯೋಜನೆಗಳನ್ನು ನಿಗಧಿತ ಸಮಯದೊಳಗೆ ಅನುಷ್ಠಾನಗೊಳಿಸಲು ತೊಂದರೆಯಾಗುವುದಿಲ್ಲವೇ ?

## ಕಲ್ಲು ಮತ್ತು ಮರಳು ಗಣಿಗಾರಿಕೆಯ ಕುರಿತು

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩೬ (೧೯೪೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಡಿಯಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಕಲ್ಲುಗಣಿಗಾರಿಕೆ ಮತ್ತು ಮರಳು ಗಣಿಗಾರಿಕೆಯನ್ನು ನಡೆಸಲು ಪರವಾನಿಗೆ ನೀಡಲಾಗಿದೆ ; (ಜಿಲ್ಲಾವಾರು ಗಣಿಗಾರಿಕೆ ಪರವಾನಿಗೆ ಪ್ರತಿಯೊಂದಿಗೆ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ. ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಹಾಸನ ಜಿಲ್ಲೆಯಲ್ಲಿ ಎಷ್ಟು ಕಲ್ಲು ಮತ್ತು ಮರಳು ಗಣಿಗಾರಿಕೆಗಳು ನಡೆಯುತ್ತಿವೆ ; ಕಲ್ಲುಗಣಿಗಾರಿಕೆಯಲ್ಲಿ ಯಾವ ಕಲ್ಲು ದೊರಕಿದೆ ; ಪರವಾನಿಗೆ ಇಲ್ಲದೇ ಗಣಿಗಾರಿಕೆಯನ್ನು ನಡೆಸುತ್ತಿರುವವರ ಸಂಖ್ಯೆ ಎಷ್ಟು ; ಅಕ್ರಮ ಕಲ್ಲುಗಣಿಗಾರಿಕೆಯಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ: (ತಾಲ್ಲೂಕುವಾರು ದಾಖಲಾದ ಪ್ರಕರಣವಾರು, ಗಣಿಗಾರಿಕೆ ಮಾಡುತ್ತಿರುವ ಹೆಸರು ಮತ್ತು ಪರವಾನಿಗೆ ಪತ್ರದ ನಕಲು ದೂರವಾಣಿ ಸಂಖ್ಯೆ ಸಹಿತ ಮಾಹಿತಿ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಚಿನ್ನದ ನಿಕ್ಷೇಪ ಪತ್ತೆ ಹಚ್ಚಲಾಗಿದೆಯೇ ; ಪತ್ತೆ ಹಚ್ಚಿದ್ದಲ್ಲಿ, ಯಾವ ಸ್ಥಳದಲ್ಲಿ ಚಿನ್ನದ ನಿಕ್ಷೇಪ ದೊರಕಿದೆ ; ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಸರ್ವೆ ಮಾಡಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)

## ಗದಗ ಬೆಟಗೇರಿ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೭೩೭ (೧೯೮೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಬೆಟಗೇರಿ ನಗರದ ಎರಡನೇ ಹಂತದ ಕುಡಿಯುವ ನೀರಿನ ಯೋಜನೆ ಪೂರ್ಣಗೊಂಡಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಗದಗ ಬೆಟಗೇರಿ ನಗರದ ಪ್ರತಿ ವಾರ್ಡಿಗೆ ಪ್ರಸ್ತುತ ಎಷ್ಟು ದಿನಕ್ಕೊಮ್ಮೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಇ) ಸದರಿ ನಗರದ ಕುಡಿಯುವ ನೀರಿನ ಯೋಜನೆ ಅಡಿ ಪಾಪನಾಶ ಗ್ರಾಮದ ನೀರು ಶುದ್ಧೀಕರಣ ಘಟಕದಿಂದ ಗದಗ ನಗರಕ್ಕೆ ಬರುವ ಇಂಜಿನಿಯರ್ ಕಾಲೇಜು ಹತ್ತಿರ ಇರುವ 'ಎ' ಪಾಯಿಂಟ್‌ವರೆಗೆ ಇರುವ ಬಿಡಬ್ಲ್ಯೂಎಸ್ ಪೈಪ್ ಪದೆ ಪದೆ ಒಡೆಯುತ್ತಿರುವುದರಿಂದ ಮತ್ತು ಕಳಪೆ ಕಾಮಗಾರಿ ಆಗಿರುವುದರಿಂದ ನೀರಿನ ವಿತರಣೆಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರವಾದ ಮಾಹಿತಿ ಒದಗಿಸುವುದು)

# KIADB ಯಿಂದ ಮಂಜೂರಾದ ನಿವೇಶನಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೮ (೧೯೯೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಐಎಡಿಬಿ ವತಿಯಿಂದ ಸರ್ಕಾರ ಕೈಗಾರಿಕೆ ಉದ್ದೇಶಕ್ಕೆ ಮಂಜೂರು ಮಾಡಿದ ಜಮೀನನ್ನು ಕೈಗಾರಿಕೋದ್ಯಮಿಗಳು ದುರ್ಬಳಕೆ ಮಾಡಿಕೊಂಡಿರುವ ಪ್ರಕರಣಗಳು ಪತ್ತೆಯಾಗಿವೆಯೇ ; ಹಾಗಿದ್ದಲ್ಲಿ, ಈ ಪ್ರಕರಣಗಳಲ್ಲಿ ಸಂಬಂಧಿತ ಹೆಸರು, ಜಮೀನಿನ ವಿವರಗಳ ಬಗ್ಗೆ, ಸಂಪೂರ್ಣ ವಿವರಗಳನ್ನು ನೀಡುವುದು ; (ಪ್ರಕರಣವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ಕೈಗಾರಿಕೆ ಉದ್ದೇಶಕ್ಕೆ ಹಂಚಿಕೆ ಮಾಡಲಾಗಿದ್ದ ಭೂಮಿಯನ್ನು ನಿಗದಿತ ಉದ್ದೇಶಕ್ಕೆ ಬಳಸಿಕೊಳ್ಳದೆ ಅಥವಾ ಭಾಗಶಃ ಬಳಸಿಕೊಂಡು ಮಿಕ್ಕ ಜಮೀನನ್ನು ಬೇರೆಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ನಡೆದಿದೆಯೇ ; (ಇಂಥ ಪ್ರಕರಣಗಳಲ್ಲಿ ಶಾಮೀಲಾಗಿರುವ ಸಂಸ್ಥೆ ಮತ್ತು ಜಮೀನಿನ ಸಂಪೂರ್ಣ ವಿವರ ನೀಡುವುದು) ದುರುಪಯೋಗ ಮಾಡಿದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಇಂತಹ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಎಷ್ಟು ಜಮೀನನ್ನು ಸರ್ಕಾರದ ವಶಕ್ಕೆ ಪಡೆಯಲಾಗಿದೆ ; ಇನ್ನು ಎಷ್ಟು ಪ್ರಮಾಣದ ಭೂಮಿ ವಶಪಡಿಸಿಕೊಳ್ಳಲು ಬಾಕಿ ಇದೆ' (ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು) ಬಾಕಿ ಇರುವ ಭೂಮಿಯನ್ನು ಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

# ಕಲಬುರಗಿ ಜಿಲ್ಲೆಯಲ್ಲಿ ಮಹಿಳಾ ಸ್ವಯಂ ಉದ್ಯೋಗ ಘಟಕಗಳ ಸ್ಥಾಪನೆ ಮತ್ತು ಉತ್ತೇಜನ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೯ (೧೯೦೧) ಮಾನ್ಯ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಮಹಿಳಾ ಸ್ವಯಂ ಉದ್ಯೋಗ ಘಟಕಗಳು ನೋಂದಣಿಯಾಗಿವೆ ಮತ್ತು ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಲಬುರಗಿ ಜಿಲ್ಲೆಯ ಪ್ರಸಿದ್ಧ 'ತೊಗರಿ ಬೆಳೆ' ಸಂಸ್ಕರಣೆ ಮತ್ತು ಮೌಲ್ಯವರ್ಧನೆಯಲ್ಲಿ ತೊಡಗಿರುವ ಮಹಿಳಾ ಉದ್ಯಮಿಗಳಿಗೆ ಅಥವಾ ಮಹಿಳಾ ಸ್ವಸಹಾಯ ಗುಂಪುಗಳಿಗೆ (SHGS) ಸರ್ಕಾರದಿಂದ ನೀಡಲಾಗುತ್ತಿರುವ ವಿಶೇಷ ರಿಯಾಯಿತಿ ಮತ್ತು ಸಬ್ಸಿಡಿಗಳು ಯಾವುವು ;

(ಇ) ಕಲ್ಯಾಣ ಕರ್ನಾಟಕ ಭಾಗದ ಮಹಿಳಾ ಉದ್ಯಮಿಗಳಿಗಾಗಿ ಮೀಸಲಿಟ್ಟ ಸಬ್ಸಿಡಿ ಹಣ ಬಿಡುಗಡೆಯಾಗದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಗೆ ಮಂಜೂರಾದ ಮತ್ತು ಬಿಡುಗಡೆಯಾದ ಸಬ್ಸಿಡಿ ಮೊತ್ತ ಎಷ್ಟು ;

(ಈ) ಜಿಲ್ಲೆಯ ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳ (ಉದಾ: ಕೌದಿ ಕಲೆ, ಆಹಾರ ಪದಾರ್ಥಗಳು) ಮಾರಾಟಕ್ಕಾಗಿ ಕಲಬುರಗಿ ನಗರದಲ್ಲಿ ಸುಸಜ್ಜಿತ 'ಮಹಿಳಾ ಮಾರುಕಟ್ಟೆ ಸಂಕೀರ್ಣ'

(Exclusive Women's Market Complex) ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ರಾಷ್ಟ್ರೀಕೃತ ಮತ್ತು ಗ್ರಾಮೀಣ ಬ್ಯಾಂಕ್‌ಗಳು ಮಹಿಳಾ ಉದ್ಯಮಿಗಳಿಗೆ ಸಾಲ ನೀಡಲು ಅನಗತ್ಯ ವಿಳಂಬ ಮಾಡುತ್ತಿರುವುದು ಮತ್ತು ಶೇ. ೧೦೦ ರಷ್ಟು ಭದ್ರತೆ (Collateral) ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಳಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಕಾಮಗಾರಿಗಳು ಹಾಗೂ ಅನುದಾನದ ದುರ್ಬಳಕೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೦ (೧೯೦೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳ ಅವಧಿಯಿಂದ ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಜಿಲ್ಲೆಯ ಇತರ ನಗರಸಭೆಗಳಲ್ಲಿ ಇಲ್ಲಿಯವರೆಗೂ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ದೊರೆತಿದೆ ; ಅದರಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಳಿಸಲಾಗಿದೆ ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳು ಯಾವ ಯಾವ ಯೋಜನೆಗಳ ಅಡಿಯಲ್ಲಿ ಮಂಜೂರಾಗಿವೆ ; ಮಂಜೂರಾಗಿರುವ ಒಟ್ಟು ಅನುದಾನ ಎಷ್ಟು ಹಾಗೂ ಬಿಡುಗಡೆಯಾದ ಅನುದಾನವನ್ನು ಪ್ರತ್ಯೇಕವಾಗಿ ತಿಳಿಸುವುದು ;

(ಇ) ಗುತ್ತಿಗೆದಾರರಿಗೆ ಕಾಮಗಾರಿಗಳ ಹಣವನ್ನು ಬಿಡುಗಡೆ ಮಾಡುವ ಸಂದರ್ಭದಲ್ಲಿ ಸರ್ಕಾರ ಅಥವಾ ಪಾಲಿಕೆಯು ಅನುಸರಿಸುತ್ತಿರುವ ಮಾನದಂಡಗಳು ಯಾವುವು ?

## ರಾಜ್ಯದಲ್ಲಿ ನೇಕಾರರಿಗೆ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು ) :–**

೧೭೪೧ (೧೯೭೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುವ ರೇಷ್ಮೆ ಸೀರೆಗಳನ್ನು ಹೊರ ರಾಜ್ಯದವರು ಕಡಿಮೆ ಬೆಲೆಗೆ ಖರೀದಿಸಿ ಅವರದ್ದೇ ಬ್ರಾಂಡ್ ಸೃಷ್ಟಿ ಮಾಡಿ ಮತ್ತೆ ಕರ್ನಾಟಕ ರಾಜ್ಯದಲ್ಲೇ ಅಧಿಕ ಬೆಲೆಗೆ ಮಾರಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ;

(ಆ) ರಾಜ್ಯದಲ್ಲಿ ಅತೀ ಹೆಚ್ಚು ಕೈಮಗ್ಗ ಉತ್ಪನ್ನಗಳ ತಯಾರಿಕೆ ಪ್ರದೇಶ (ಇಳಕಲ್, ರಬಕವಿ–ಬನಹಟ್ಟಿ, ದೊಡ್ಡಬಳ್ಳಾಪುರ)ಗಳಲ್ಲಿ ನೇಕಾರರೇ ನೇರವಾಗಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಸರ್ಕಾರ ಸೂಕ್ತವಾದ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ?

## ರಾಜ್ಯದಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೭೪೨ (೧೯೭೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರಗಳಲ್ಲಿ ಕೈಗಾರಿಕಾ ಉದ್ದೇಶಗಳಿಗಾಗಿ ಭೂ ಬಳಕೆ ಬದಲಾವಣೆ ಪ್ರಕ್ರಿಯೆಯನ್ನು ಮತ್ತು ಕಾಲ ಮಿತಿಯನ್ನು ಕಡಿತಗೊಳಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಮಹಾನಗರಗಳಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಸ್ವೀಕೃತವಾಗಿವೆ; ಇದರಲ್ಲಿ, ಎಷ್ಟು ಪ್ರಸ್ತಾವನೆಗಳಿಗೆ ಸರ್ಕಾರ ಅನುಮೋದನೆ ನೀಡಿದೆ;

(ಇ) ರಾಜ್ಯದ ಮಹಾನಗರಗಳಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ರೂಪಿಸಿರುವ ಮಾನದಂಡಗಳೇನು?

## ಉಪ ಮಾರ್ಕೆಟ್ ಪ್ರಾಂಗಣ ಅಭಿವೃದ್ಧಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೩ (೧೯೮೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಹುಮನಾಬಾದ್ ತಾಲ್ಲೂಕಿನ ದುಬಲಗುಂಡಿ ಉಪ ಮಾರ್ಕೆಟ್ ಪ್ರಾಂಗಣದಲ್ಲಿ ಇಲ್ಲಿಯವರೆಗೆ ಯಾವುದೇ ರಸ್ತೆ/ಕಛೇರಿ, ಯಾರ್ಡ್ ಹಾಗೂ ಇನ್ನಿತರ ಯಾವುದೇ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಉಪ ಮಾರ್ಕೆಟ್ ಪ್ರಾಂಗಣ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು)

(ಇ) ಸರ್ಕಾರ ಯಾವಾಗ ಅಭಿವೃದ್ಧಿ ಪಡಿಸಿ ರೈತರಿಗೆ, ಜನರಿಗೆ ಅನುಕೂಲ ಮಾಡಿಕೊಡಲಾಗುವುದು? (ಮಾಹಿತಿ ನೀಡುವುದು)

## ಕಲಬುರಗಿಯ ಪಿಎಂ ಮಿತ್ರ ಪಾರ್ಕ್ ಯೋಜನಾ ಪ್ರದೇಶದಿಂದ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೪ (೯೪೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಪಿಎಂ ಮಿತ್ರ ಪಾರ್ಕ್ ಯೋಜನಾ ಪ್ರದೇಶದಿಂದ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣಕ್ಕಾಗಿ ಎಷ್ಟು ಕೋಟಿ ವೆಚ್ಚ ಮಾಡಲಾಗುತ್ತಿದೆ; ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ;

(ಆ) ಪಿಎಂ ಮಿತ್ರ ಪಾರ್ಕ್‌ಗೆ ನೀರು ಹರಿಸಲು ಜೇವರ್ಗಿ ತಾಲ್ಲೂಕಿನ ಮದ್ರಿ ಬಳಿ ಅಣೆಕಟ್ಟನ್ನು ಕಟ್ಟಲು ಎಷ್ಟು ಕೋಟಿ ವೆಚ್ಚ ಮಾಡಲಾಗುತ್ತಿದೆ; ಸದರಿ ಅಣೆಕಟ್ಟಿನ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗಿದೆ ಮತ್ತು ಯಾವಾಗ ಪೂರ್ಣಗೊಳಿಸಲಾಗುವುದು;

(ಇ) ಜವಳಿ ಪಾರ್ಕ್‌ಗೆ ಕೈಗಾರಿಕಾ ಉದ್ದೇಶಕ್ಕಾಗಿ ಬೇಕಾಗಿರುವ ನೀರನ್ನು ನಂದಿಕೂರು ಗ್ರಾಮದ ಎಸ್‌ಟಿಪಿ ಯಿಂದ ಸರಬರಾಜು ಮಾಡುವ ಪೈಪ್ ಲೈನ್ ಕಾಮಗಾರಿ ಹಾಗೂ ಜವಳಿ ಪಾರ್ಕ್‌ಗೆ ಬೇಕಾಗುವ ವಿದ್ಯುತ್ ಸರಬರಾಜು ಮಾಡಲು ಪವರ್ ಸ್ಟೇಷನ್ ನಿರ್ಮಾಣದ ಪ್ರಸ್ತುತ ಸ್ಥಿತಿಗತಿಗಳ ವಿವರ ನೀಡುವುದು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇರುವ ನಗರಸಭೆ ಮತ್ತು ಪುರಸಭೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೪೫ (೧೯೫೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ನಗರಸಭೆ ಮತ್ತು ಪುರಸಭೆಗಳಿಗೆ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಇದಕ್ಕೆ ಬಿಡುಗಡೆಯಾದ ಅನುದಾನ ಎಷ್ಟು;

(ಆ) ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿವೆಯೆ ; ಪ್ರಸ್ತುತ ಯಾವ ಹಂತದಲ್ಲಿವೆ ; ( ಸಂಪೂರ್ಣ ವಿವರ ನೀಡುವುದು)

(ಇ) ಈ ಮೇಲ್ಕಂಡ ಜಿಲ್ಲೆಗಳಲ್ಲಿರುವ ನಗರಸಭೆ ಮತ್ತು ಪುರಸಭೆಗಳಲ್ಲಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; ಗೃಹಭಾಗ್ಯ ಯೋಜನೆಯ ಅನ್ವಯ ಎಷ್ಟು ಪೌರ ಕಾರ್ಮಿಕರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ? (ವಿವರ ನೀಡುವುದು)

# ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪಾರ್ಕ್‌ಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೬ (೧೯೫೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪಾರ್ಕ್‌ಗಳ ಸಂಖ್ಯೆ ಎಷ್ಟು ಹಾಗೂ ಇವುಗಳ ವಿಸ್ತೀರ್ಣವೆಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ಸದರಿ ಪಾರ್ಕ್‌ಗಳ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಮತ್ತು ಅಭಿವೃದ್ಧಿ ಪಡಿಸಿದ ಪಾರ್ಕ್‌ಗಳ ವಿವರ ಹಾಗೂ ಕಾಮಗಾರಿಗಳ ಸಹಿತ ವಿವರ ನೀಡುವುದು ;

(ಇ) ಈ ಪಾರ್ಕ್‌ಗಳ ನಿರ್ವಹಣೆಗೆ ಇರುವ ಮಾನದಂಡಗಳೇನು: ನಿರ್ವಹಣೆಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ; ನಿರ್ವಹಣೆಗೆ ವಾರ್ಷಿಕ ಎಷ್ಟು ಹಣ ವ್ಯಯ ಮಾಡಲಾಗುತ್ತಿದೆ ; ನಿರ್ವಹಣೆಗೆ ಬೇಕಾಗುವ ಹಣವನ್ನು ಸರ್ಕಾರ ನೀಡುತ್ತದೆಯೇ ಅಥವಾ ಮಹಾನಗರ ಪಾಲಿಕೆಯಿಂದ ಭರಿಸಲಾಗುತ್ತದೆಯೇ ? (ವಿವರ ನೀಡುವುದು)

# ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೭ (೧೯೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರ ತಾಲ್ಲೂಕಿನಲ್ಲಿ ಕಳೆದ ಒಂದು ವರ್ಷದಲ್ಲಿ ಅಕ್ರಮ ಮರಳು/ಗಣಿಗಾರಿಕೆ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಆ) ಸದರಿ ಅಕ್ರಮ ಗಣಿಗಾರಿಕೆಯನ್ನು ಪರೋಕ್ಷವಾಗಿ ಬೆಂಬಲಿಸುವ ಅಧಿಕಾರಿಗಳ ವಿರುದ್ಧ ಯಾವ ಕ್ರಮವಹಿಸಲಾಗಿದೆ ;

(ಇ) ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ ;

(ಈ) ಜಿ.ಪಿ.ಎಸ್ ಟ್ರ್ಯಾಕಿಂಗ್ ಹಾಗೂ ಆನ್‌ಲೈನ್ ಪರವಾನಿಗೆ ವ್ಯವಸ್ಥೆ ಸಮರ್ಪಕವಾಗಿ ಜಾರಿಯಲ್ಲಿದೆಯೇ ?

## ಸಿಂಧನೂರು ತಾಲ್ಲೂಕಿನಲ್ಲಿ ಆಹಾರ ಸಂಸ್ಕರಣಾ ಪಾರ್ಕ್ ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೮ (೯೧೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕು ಪ್ರಮುಖ ಕೃಷಿ ಪ್ರಧಾನ ತಾಲ್ಲೂಕು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಪ್ರಮುಖ ಕೃಷಿ ಬೆಳೆ ಆಧಾರಿತ ಪ್ರೊಸೆಸಿಂಗ್ ಯುನಿಟ್‌ಗಳನ್ನು ಸ್ಥಾಪಿಸುವ ಕುರಿತು ಸರ್ಕಾರವು ಚಿಂತನೆ ನಡೆಸಿದೆಯೇ ;

(ಇ) "ಆಹಾರ ಸಂಸ್ಕರಣಾ ಪಾರ್ಕ್" ಸ್ಥಾಪಿಸುವ ಕುರಿತು ಸರ್ಕಾರದ ನಿಲುವೇನು ;

(ಈ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ "ಆಹಾರ ಸಂಸ್ಕರಣಾ ಪಾರ್ಕ್" ಅನ್ನು ಸ್ಥಾಪಿಸಲಾಗುವುದು ?

## ಸಿಂಧನೂರು ತಾಲ್ಲೂಕಿಗೆ ನಗರಾಭಿವೃದ್ಧಿ ಇಲಾಖೆಯಿಂದ ಒದಗಿಸಲಾದ ಅನುದಾನದ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೯ (೧೯೧೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಸಿಂಧನೂರು ನಗರದ ಸಮಗ್ರ ಅಭಿವೃದ್ಧಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ ;

(ಆ) ಸಿಂಧನೂರು ನಗರದ ಉದ್ಯಾನ ವನ ಹಾಗೂ ಸಾರ್ವಜನಿಕ ಮೈದಾನಗಳ ಅಭಿವೃದ್ಧಿಗೆ ನೀಡಲಾಗಿರುವ ಅನುದಾನವೆಷ್ಟು ;

(ಇ) ಕಳೆದ ವರ್ಷದಲ್ಲಿ ಸಿಂಧನೂರು ನಗರದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಕಾರ್ಯಗಳ ವಿವರ ನೀಡುವುದು ?

## ಸಾರ್ವಜನಿಕ ಉದ್ದಿಮೆಗಳ ಪುನಃಶ್ಚೇತನದ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೦ (೧೯೧೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಾರ್ವಜನಿಕ ಉದ್ದಿಮೆಗಳು ಸಿಂಧನೂರಿನಲ್ಲಿ ಯಾವುದೇ ಘಟಕ ಸ್ಥಾಪಿಸಲು ಸರ್ಕಾರದಿಂದ ಯೋಜನೆ ರೂಪಿಸಲಾಗಿದೆಯೇ ;

(ಆ) ಪ್ರಸ್ತುತ ನಷ್ಟದಲ್ಲಿರುವ ರಾಜ್ಯದ ಸಾರ್ವಜನಿಕ ಉದ್ದಿಮೆಗಳ ಪುನಃಶ್ಚೇತನಕ್ಕೆ ಸರ್ಕಾರದ ಕ್ರಮವೇನು ;

(ಇ) ಸ್ಥಳೀಯರಿಗೆ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗಾವಕಾಶಗಳನ್ನು ಒದಗಿಸಲು ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ ?

## ಕರ್ನಾಟಕದಲ್ಲಿ ನೋಂದಾಯಿಸಲ್ಪಟ್ಟಿರುವ ಹೊಸ ಕೈಗಾರಿಕೆಗಳು ಮತ್ತು ಕಂಪನಿಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೧ (೧೯೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೇ ೨೦೨೩ ರಿಂದ ಫೆಬ್ರವರಿ ೨೦೨೬ರ ಅಂತ್ಯದವರೆಗೆ ಎಷ್ಟು ಹೊಸ ಕೈಗಾರಿಕೆಗಳು ಮತ್ತು ಕಂಪನಿಗಳು ನೋಂದಾಯಿಸಲ್ಪಟ್ಟಿವೆ; ಈ ಅವಧಿಯಲ್ಲಿ ರಾಜ್ಯಕ್ಕೆ ಹರಿದುಬಂದ ಒಟ್ಟು ಹೂಡಿಕೆಯ ಮೊತ್ತವೆಷ್ಟು; ಈ ಹೂಡಿಕೆಗಳಲ್ಲಿ ಎಷ್ಟು ಮೊತ್ತವು ಕೇವಲ ಒಪ್ಪಂದದ (MOU) ಹಂತದಲ್ಲಿದೆ ; ಮತ್ತು ಎಷ್ಟು ಯೋಜನೆಗಳು ಈಗಾಗಲೇ ಕಾರ್ಯರೂಪಕ್ಕೆ ಬಂದು ಉತ್ಪಾದನೆ ಆರಂಭಿಸಿವೆ;

(ಆ) ಕಳೆದ ಎರಡು ವರ್ಷಗಳಲ್ಲಿ (ಮೇ ೨೦೨೩ ರಿಂದ) ಕರ್ನಾಟಕದ ಖಾಸಗಿ ವಲಯದಲ್ಲಿ ಎಷ್ಟು ಹೊಸ ಉದ್ಯೋಗಗಳು ಸೃಷ್ಟಿಯಾಗಿವೆ; ಈ ಅಂಕಿ–ಅಂಶಗಳನ್ನು ಸರ್ಕಾರ ಯಾವ ಆಧಾರದ ಮೇಲೆ (ಉದಾ:EPFO/ESIC ದತ್ತಾಂಶ) ದೃಢೀಕರಿಸುತ್ತದೆ; ಈ ಅವಧಿಯಲ್ಲಿ ಸೃಷ್ಟಿಯಾದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಸಿಕ್ಕಿರುವ ಪಾಲಿನ ಶೇಕಡಾವಾರು ಪ್ರಮಾಣವೆಷ್ಟು ;

(ಇ) ಕೈಗಾರಿಕಾ ವಿಕೇಂದ್ರೀಕರಣದ ದೃಷ್ಟಿಯಿಂದ ಬೆಂಗಳೂರಿನ ಹೊರತಾಗಿ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗಗಳಲ್ಲಿ ಈ ಅವಧಿಯಲ್ಲಿ ಸ್ಥಾಪನೆಯಾದ ಪ್ರಮುಖ ಕೈಗಾರಿಕೆಗಳು ಯಾವುವು; ಈ ಹಿಂದುಳಿದ ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸುವ ಕಂಪನಿಗಳಿಗೆ ಬಜೆಟ್‌ನಲ್ಲಿ ಘೋಷಿಸಿದ ವಿಶೇಷ ಸಬ್ಸಿಡಿಗಳು ಮತ್ತು ಪ್ರೋತ್ಸಾಹಕಗಳು ಫಲಾನುಭವಿಗಳಿಗೆ ತಲುಪಿವೆಯೇ ;

(ಈ) ರಾಜ್ಯದ ಜಿಎಸ್‌ಡಿಪಿಗೆ (GSDP) ದೊಡ್ಡ ಮಟ್ಟದಲ್ಲಿ ಕೊಡುಗೆ ನೀಡುತ್ತಿರುವ ಐ.ಟಿ (IT) ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳ (GCC) ಮೂಲಕ ಮೇ ೨೦೨೩ ರಿಂದ ಎಷ್ಟು ಹೊಸ ಕಛೇರಿಗಳು ರಾಜ್ಯದಲ್ಲಿ ಕಾರ್ಯಾರಂಭ ಮಾಡಿವೆ; ಹೊಸ ಐಟಿ ಪಾಲಿಸಿ ೨೦೨೫–೩೦ರ ಅಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ತಾಂತ್ರಿಕ ಹಬ್ ಸ್ಥಾಪಿಸುವ ಭರವಸೆ ಇದೆಯೇ ? (ವಿವರ ನೀಡುವುದು)

## ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ರಚನೆ ಮಾಡಿರುವ ಬಡಾವಣೆಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೨ (೧೯೫೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರನ್ನು ಹೊರತುಪಡಿಸಿ ರಾಜ್ಯ ರಾಜ್ಯದ ಯಾವ ಯಾವ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಅಲ್ಲಿನ ನಾಗರೀಕರಿಗಾಗಿ ಬಡಾವಣೆಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಈ ಬಡಾವಣೆಗಳನ್ನು ನಿರ್ಮಿಸಲು ಆಯಾ ಪ್ರಾಧಿಕಾರಗಳು ಎಷ್ಟು ಎಕರೆ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಂಡಿವೆ ; ಪ್ರತಿಯೊಂದು ಪ್ರಾಧಿಕಾರದ ವಿವರ ನೀಡುವುದು ;

(ಇ) ಯಾವ ಯಾವ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಹಳೆಯ ಬಡಾವಣೆಗಳಲ್ಲಿ ಲಭ್ಯವಿರುವ ನಿವೇಶನಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತಿದೆ ? (ವಿವರ ಒದಗಿಸುವುದು)

## ಕೈಗಾರಿಕೆ ಸ್ಥಾಪನೆಗಾಗಿ ಕೆ.ಐ.ಎ.ಡಿ.ಬಿ.ಯಿಂದ ಭೂಸ್ವಾಧೀನಪಡಿಸಿಕೊಂಡ ಜಮೀನಿನ ವಿವರದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೩ (೧೯೫೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೈಗಾರಿಕೆ ಸ್ಥಾಪನೆಗಾಗಿ ಕೆ.ಐ.ಎ.ಡಿ.ಬಿ.ಯಿಂದ ರೈತರ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ; ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು;

(ಆ) ಭೂಸ್ವಾಧೀನಪಡಿಸಿಕೊಂಡ ರೈತರ ಜಮೀನಿಗೆ ಸಂಪೂರ್ಣವಾಗಿ ಪರಿಹಾರ ನೀಡಲಾಗಿದೆಯೇ ; ನೀಡದಿದ್ದಲ್ಲಿ, ಬಾಕಿ ನೀಡಬೇಕಾಗಿರುವ ಮೊತ್ತವೆಷ್ಟು ; ವಿವರ ನೀಡುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಇನ್ವೆಸ್ಟ್ ಕರ್ನಾಟಕ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಕ್ಕಾಗಿ ಸರ್ಕಾರ ಖರ್ಚು ಮಾಡಿದ ಮೊತ್ತವೆಷ್ಟು; ವಿವರವಾದ ಮಾಹಿತಿ ನೀಡುವುದು ;

(ಈ) ಈ ಸಮಾವೇಶದಿಂದ ರಾಜ್ಯಕ್ಕೆ ಹರಿದು ಬಂದಿರುವ ವಿವಿಧ ಕಂಪನಿಗಳ ಬಂಡವಾಳವೆಷ್ಟು; ವರ್ಷಾವಾರು ಮಾಹಿತಿ ನೀಡುವುದು;

(ಉ) ಯಾವ ಯಾವ ಜಿಲ್ಲೆಯಗಳಲ್ಲಿ ಒಡಂಬಡಿಕೆ ಮಾಡಿಕೊಂಡ ಕಂಪನಿಗಳು ಕಾರ್ಯಾರಂಭ ಮಾಡಿವೆ ಹಾಗೂ ಸೃಷ್ಟಿಯಾಗಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೪ (೧೯೫೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವಲಯಗಳ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಆ) ಕಳೆದ ಎರಡು ವರ್ಷಗಳಲ್ಲಿ ಈ ಸಕ್ಕರೆ ಕಾರ್ಖಾನೆಗಳಿಂದ ಉತ್ಪಾದನೆಯಾಗಿರುವ ಸಕ್ಕರೆಯ ಪ್ರಮಾಣವೆಷ್ಟು; ಮಾಹಿತಿ ಒದಗಿಸುವುದು ;

(ಇ) ಉತ್ಪಾದನೆ ಮಾಡಿದ ಸಕ್ಕರೆಯನ್ನು ಸರ್ಕಾರಿ ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳು ವಿಲೇವಾರಿ ಮಾಡಿದ್ದರೂ ಸಹ ರೈತರು ಪೂರೈಕೆ ಮಾಡಿದ ಕಬ್ಬಿಗೆ ಇನ್ನು ಹಣವನ್ನು ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ರೈತರಿಗೆ ಪಾವತಿಸಬೇಕಾದ ಬಾಕಿ ಹಣವನ್ನು ಎಷ್ಟು ದಿನಗಳಲ್ಲಿ ಪಾವತಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆ ? (ಮಾಹಿತಿ ಒದಗಿಸುವುದು )

## ಗಣಿಗಾರಿಕೆಯಿಂದ ಬಂದ ಆದಾಯದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೫ (೧೯೪೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಗಣಿಗಾರಿಕೆಯಿಂದ ಬಂದ ಆದಾಯವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗಣಿ ಬಾಧಿತ ಪ್ರದೇಶಗಳ ಅಭಿವೃದ್ಧಿಗೆ ಮತ್ತು ಗಣಿ ಬಾಧಿತ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಯಾವ ಯೋಜನೆ ರೂಪಿಸಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಯಾವ ಯಾವ ಗಣಿ ಬಾಧಿತ ಪ್ರದೇಶಗಳ ಅಭಿವೃದ್ಧಿಗೆ ಮತ್ತು ಗಣಿ ಬಾಧಿತ ಪ್ರದೇಶಗಳ ರಸ್ತೆಗಳ ಅಭಿವೃದ್ಧಿ ಪಡಿಸಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳಿಗೆ ಬರುವ ಉದ್ದಿಮೆಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೬ (೧೯೪೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗೆ ಬರುವ ಉದ್ದಿಮೆಗಳಿಗೆ ಸರ್ಕಾರವು ನೀಡುವ ಸಹಾಯಧನ ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಸಣ್ಣ ಕೈಗಾರಿಕೆಗಳ ವ್ಯಾಪ್ತಿಯಲ್ಲಿ ಬರುವ ಉದ್ದಿಮೆಗಳಿಗೆ ಸರ್ಕಾರವು ನೀಡುವ ಸಹಾಯಧನ ಎಷ್ಟು ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಷ್ಟು ಉದ್ದಿಮೆದಾರರಿಗೆ ಸಹಾಯಧನ ಹಂಚಿಕೆ ಮಾಡಲಾಗಿದೆ ? (ವಿಧಾನಸಭಾವಾರು ಮಾಹಿತಿ ನೀಡುವುದು)

## ಹೊಸಕೋಟೆ ನಗರ ಸಭೆಗೆ ಮಂಜೂರಾಗಿರುವ ಅನುದಾನ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೭ (೧೯೪೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ನಗರಸಭೆಗೆ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಅನುದಾನವೆಷ್ಟು ; (ಯೋಜನಾವಾರು ವಿವರ ನೀಡುವುದು)

(ಆ) ವಿವಿಧ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವಾರ್ಡ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪೂರ್ಣಗೊಂಡಿರುವ ಕಾಮಗಾರಿಗಳು ಹಾಗೂ ಬಾಕಿ ಇರುವ ಕಾಮಗಾರಿಗಳೆಷ್ಟು ; (ವಾರ್ಡ್‌ವಾರು ಪಟ್ಟಿ ನೀಡುವುದು)

(ಈ) ಬಿಡುಗಡೆಯಾದ ಅನುದಾನವೆಷ್ಟು ? (ವಿವರ ನೀಡುವುದು)

## ರೈತರಿಗೆ ವಿವಿಧ ಯೋಜನೆಗಳ ಸಲಕರಣೆಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೮ (೧೯೪೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಸಲಕರಣೆ ಹಾಗೂ ಯೋಜನೆಗಳು ಯಾವುವು ; ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಯೋಜನೆಗಳಿಗೆ ಮತ್ತು ಸಲಕರಣೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು, ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಕಳೆದ ೨ ವರ್ಷಗಳಲ್ಲಿ ಎಷ್ಟು ರೈತರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆ ; ಅಂಕಿ ಸಮೇತ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು ?

## ತುಮಕೂರು-ರಾಯದುರ್ಗ ರೈಲ್ವೆ ಯೋಜನೆಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೧೭೫೯ (೧೯೨೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು-ರಾಯದುರ್ಗ ರೈಲ್ವೆ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಎಷ್ಟು ಎಕರೆ ಪ್ರದೇಶ ಬಾಕಿ ಭೂ ಸ್ವಾಧೀನ ಪಡಿಸಿಕೊಳ್ಳಬೇಕಿದೆ ; ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು ; ಬಳಕೆ ಮಾಡಿಕೊಂಡಿರುವ ಅನುದಾನದ ಮೊತ್ತ ಎಷ್ಟು ;

(ಆ) ತುಮಕೂರು-ರಾಯದುರ್ಗ ರೈಲ್ವೆ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಇ) ತುಮಕೂರು-ದಾವಣಗೆರೆ ರೈಲ್ವೆ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಬಾಕಿ ಎಷ್ಟು ಎಕರೆ ಪ್ರದೇಶದ ಭೂ ಸ್ವಾಧೀನ ಪಡಿಸಿಕೊಳ್ಳಬೇಕಿದೆ ; ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; ಬಳಕೆ ಮಾಡಿಕೊಂಡಿರುವ ಅನುದಾನದ ಮೊತ್ತ ಎಷ್ಟು ;

(ಈ) ತುಮಕೂರು–ದಾವಣಗೆರೆ ರೈಲ್ವೆ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ತುಮಕೂರು ಮಹಾನಗರ ಪಾಲಿಕೆಯ ಇ–ಆಸ್ತಿ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೬೦ (೧೯೨೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಮಹಾನಗರ ಪಾಲಿಕೆಯಲ್ಲಿ ಇ–ಆಸ್ತಿ ಗೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ತುಮಕೂರು ಮಹಾನಗರ ಪಾಲಿಕೆಯಲ್ಲಿ ಸಾರ್ವಜನಿಕರು ಇ–ಆಸ್ತಿಗೆ ಅರ್ಜಿ ಸಲ್ಲಿಸಿ ನಿಗಧಿತ ಅವಧಿಯೊಳಗೆ ಇ–ಆಸ್ತಿ ಪಡೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ತುಮಕೂರು ಮಹಾನಗರ ಪಾಲಿಕೆಯಲ್ಲಿ ಇ–ಆಸ್ತಿ ಅರ್ಜಿ ಸಲ್ಲಿಸಿದ ಸಾರ್ವಜನಿಕರಿಗೆ ನಿಗಧಿತ ಅವಧಿಯೊಳಗೆ ಇ–ಆಸ್ತಿ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದ ಮಹಾನಗರ ಪಾಲಿಕೆ/ನಗರಸಭೆ/ಪುರಸಭೆಗಳಲ್ಲಿ ಹೊರಗುತ್ತಿಗೆ ಕರ್ತವ್ಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೭೬೧ (೧೯೨೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆ/ ನಗರ ಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರ ಗುತ್ತಿಗೆ

ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಹೊರ ಗುತ್ತಿಗೆ ನೌಕರರಿಗೆ ವೇತನವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಇ) ಸದರಿ ಹೊರ ಗುತ್ತಿಗೆ ನೌಕರರಿಗೆ ವೇತನವನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸಕ್ಕರೆ ಕಾರ್ಖಾನೆಗಳ ಅಕ್ರಮಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೨ (೧೯೭೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕ್ಕರೆ ಕಾರ್ಖಾನೆಗಳು ಸಾಲ ಪಡೆಯುವಲ್ಲಿ ಅಕ್ರಮವೆಸಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಎಷ್ಟು ಸಕ್ಕರೆ ಕಾರ್ಖಾನೆಗಳು ಸಾಲ ಪಡೆದಿವೆ ; ಯಾವ ಯಾವ ಸಂಸ್ಥೆಗಳಿಂದ ಸಾಲ ಪಡೆದಿವೆ ; ಯಾವಾಗ ಸಾಲ ಪಡೆದಿವೆ ; ಎಷ್ಟು ಮೊತ್ತದ ಸಾಲ ಮರುಪಾವತಿಯಾಗಿದೆ ; ಯಾವ ಕಾರಣಕ್ಕಾಗಿ ಸಾಲ ಪಡೆಯಲಾಗಿತ್ತು ; ಸಕ್ಕರೆ ಕಾರ್ಖಾನೆಗಳ ಹೆಸರಿನೊಂದಿಗೆ ಪಡೆಯಲಾದ ಸಾಲದ ಮೊತ್ತದೊಂದಿಗೆ ವಿವರ ನೀಡುವುದು ;

(ಇ) ರಾಜ್ಯದ ಹಲವಾರು ಸಕ್ಕರೆ ಕಾರ್ಖಾನೆಗಳು ೨೦೦೦ ಕೋಟಿಗೂ ಹೆಚ್ಚಿನ ಸಾಲ ಪಡೆದು ಅವ್ಯವಹಾರ ನಡೆಸಿರುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕಲ್ಲು ಗಣಿಗಾರಿಕೆಗೆ ಒಟಿಎಸ್ ಸೌಲಭ್ಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೩ (೧೯೭೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಲು ಗಣಿ ಗುತ್ತಿಗೆದಾರರಿಗೆ ಒಟಿಎಸ್ ಸೌಲಭ್ಯ ನೀಡುವ ಕುರಿತು ಸರ್ಕಾರದ ನಿಲುವೇನು ; ಇದರಿಂದ ಸರ್ಕಾರಕ್ಕೆ ಎಷ್ಟು ಮೊತ್ತದ ಆದಾಯದ ನಿರೀಕ್ಷೆ ಇದೆ ; (ವಿವರ ನೀಡುವುದು)

(ಆ) ಒಟಿಎಸ್ ಸೌಲಭ್ಯದಿಂದ ಸರ್ಕಾರಕ್ಕೆ ೬೧೦೫ ಕೋಟಿ ನಷ್ಟವಾಗುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ; ಈ ನಷ್ಟಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಸಿದ ಸಂಬಂಧ ದಾಖಲಾದ ಪ್ರಕರಣಗಳೆಷ್ಟು ; ಈ ರೀತಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಸಿದವರಿಗೂ ಒಟಿಎಸ್ ಸೌಲಭ್ಯ ನೀಡುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ?

## ಅಮೃತ್–೨ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೪ (೧೯೭೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ ಅಮೃತ್–೨ ಯೋಜನೆಯ ಅನ್ವಯ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಅಮೃತ್–೨ ಯೋಜನೆಗೆ ಕೇಂದ್ರ ಸರ್ಕಾರ ಎಷ್ಟು ಮೊತ್ತ ನೀಡಿದೆ ; ಸದರಿ ಮೊತ್ತವನ್ನು ಯಾವ ರೀತಿ ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಅಮೃತ್–೨ ಯೋಜನೆಗೆ ರಾಜ್ಯ ಸರ್ಕಾರದ ಪಾಲು ಎಷ್ಟು ; ಎಷ್ಟು ಮೊತ್ತ ಬಿಡುಗಡೆಗೊಂಡಿದೆ ; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ಅಮೃತ್–೨ ಯೋಜನೆಯ ಅನ್ವಯ ಕೈಗೊಂಡ ಕಾಮಗಾರಿಗಳು ಯಾವುವು ? (ಜಿಲ್ಲಾವಾರು, ಕಾಮಗಾರಿವಾರು ವಿವರ ನೀಡುವುದು)

## ಕೊಳಗೇರಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೫ (೨೦೩೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕೊಳಗೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಸರ್ಕಾರ ಕಲ್ಪಿಸಿರುವ ಸೌಲಭ್ಯಗಳಾವುವು ;

(ಇ) ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಯುವಕರಿಗೆ ಉದ್ಯೋಗ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕೊಳಗೇರಿಗಳಲ್ಲಿ ವಾಸಿಸುತ್ತಿರುವವರಿಗೆ ವಸತಿ ವ್ಯವಸ್ಥೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಇದುವರೆಗೆ ಎಷ್ಟು ಮನೆಗಳನ್ನು ನಿರ್ಮಿಸಿ ಕೊಳಗೇರಿ ನಿವಾಸಿಗಳಿಗೆ ಹಂಚಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಕೈಮಗ್ಗಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೬ (೧೯೫೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಕೈ ಮಗ್ಗಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಕೈ ಮಗ್ಗಗಳಿಗೆ ಸರ್ಕಾರದಿಂದ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; (ಕಾರ್ಮಿಕರಿಗೆ ಮತ್ತು ಮಾಲೀಕರಿಗೆ)

(ಇ) ಮಗ್ಗದವರಿಂದ ಸರ್ಕಾರ ನೇರವಾಗಿ ಸೀರೆಯನ್ನು ಖರೀದಿಸುವ ಬಗ್ಗೆ ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಕ್ರಮಕೈಗೊಳ್ಳಲಾಗುವುದು ;

(ಈ) ನೇಕಾರರ ತೊಂದರೆಗಳನ್ನು ದೂರ ಮಾಡಲು ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಹೊರಗುತ್ತಿಗೆ ವಾಹನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೭ (೧೯೫೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಕಸ ವಿಲೇವಾರಿ ವಾಹನಗಳ ಸಂಖ್ಯೆ ಎಷ್ಟು; ಅವುಗಳ ಕಾರ್ಯನಿರ್ವಹಣೆಗೆ ತಗಲುತ್ತಿರುವ ವೆಚ್ಚ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಲಬುರಗಿ ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ ಆಧಾರದ ಮೇಲೆ ವಾಹನವನ್ನು ಪಡೆಯಲಾಗಿದೆಯೇ; ಪಡೆದಿದ್ದಲ್ಲಿ, ಎಷ್ಟು ವಾಹನಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ; ಅದರ ಟೆಂಡರ್ ಪ್ರಕ್ರಿಯೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ನಗರಕ್ಕೆ ಸರ್ಕಾರ ಒದಗಿಸಿಕೊಟ್ಟ ಮೂಲ ಸೌಕರ್ಯ ವ್ಯವಸ್ಥೆಗಳ ಯೋಜನೆಯ ಗುರಿ ಮತ್ತು ಸಾಧನೆಯ ವಿವರ ನೀಡುವುದು;

(ಈ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ನಗರಕ್ಕೆ ಕೇಂದ್ರ ಸರ್ಕಾರ ಒದಗಿಸಿಕೊಟ್ಟ ನಗರ ಅಭಿವೃದ್ಧಿ ಯೋಜನೆಗಳು ಯಾವುವು; ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

# ಪರಿಶಿಷ್ಟ ಜಾತಿ/ಪಂಗಡದ ಉದ್ಯಮಿಗಳಿಗೆ ನೀಡಿರುವ ಸಹಾಯಧನ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೮ (೧೯೫೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿರುವ ಕೈಗಾರಿಕ ಪ್ರದೇಶಗಳಲ್ಲಿ ಎಷ್ಟು ಕೈಗಾರಿಕಾ ನಿವೇಶನಗಳನ್ನು ಪರಿಶಿಷ್ಟ ಜಾತಿ/ಪಂಗಡದ ಉದ್ಯಮಿಗಳಿಗೆ ಹಂಚಿಕೆ ಮಾಡಲಾಗಿದೆ ; ವಿವರವಾಗಿ ಉದ್ಯಮಿಯ ಹೆಸರು ವಿಳಾಸ ನಿವೇಶನದ ವಿಸ್ತೀರ್ಣ, ತಯಾರಿಸುವ ಉತ್ಪನ್ನ/ವಸ್ತು ಹೂಡಿಕೆಯ ಬಂಡವಾಳ ಹಾಗೂ ಸರ್ಕಾರದಿಂದ ಬಿಡುಗಡೆ ಮಾಡಿರುವ ಸಹಾಯ ಧನದ ಮೊತ್ತದ ವಿವರದೊಂದಿಗೆ ವರ್ಷವಾರು ಮಾಹಿತಿ ನೀಡುವುದು ;

(ಆ) ಸದರಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಉದ್ಯಮಿಗಳಿಗೆ ನಿವೇಶನ ರಿಯಾಯಿತಿ ಅಲ್ಲದೇ ದೊರೆಯಬಹುದಾದ ಇತರೆ ಸವಲತ್ತುಗಳು ಯಾವುವು ; (ವಿವರವಾಗಿ ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದ ಉದ್ಯಮಿಗಳಿಗೆ ಕೈಗಾರಿಕೆ ಸ್ಥಾಪನೆ ಮಾಡುವ ಸಂಬಂಧ

ದೊರೆಯುವ ಸೌಲಭ್ಯ/ರಿಯಾಯಿತಿ ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ೨೦೦೨ನೇ ಸಾಲಿನಿಂದ ಇಲ್ಲಿಯವರೆಗೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಕೆಪಿಎಸ್‌ಸಿ ಮತ್ತು ಕೆಇಎ ಹಾಗೂ ಇತರೆಗಳಿಂದ ಯಾವ ಯಾವ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ; ವರ್ಷವಾರು, ಹುದ್ದೆವಾರು ವಿವರವಾದ ಮಾಹಿತಿ ನೀಡುವುದು ?

## ಸಾರ್ವಜನಿಕ ನಿಗಮಗಳಲ್ಲಿನ ಅನುಕಂಪ ಆಧಾರಿತ ನೇಮಕಾತಿ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೯ (೧೯೬೦) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ಯಮ ಎಂದರೇನು; ಯಾವ ರೀತಿ ವರ್ಗೀಕರಿಸಲಾಗಿದೆ ; ಸಾರ್ವಜನಿಕ ವಲಯ ಉದ್ಯಮದಡಿ ಎಷ್ಟು ಉದ್ಯಮಗಳು ಬರುತ್ತವೆ ; ವಿವರವಾಗಿ ಆಡಳಿತ ಇಲಾಖಾವಾರು ಉದ್ಯಮದ ಪಟ್ಟಿಯನ್ನು ನೀಡುವುದು ;

(ಆ) ಸಾರ್ವಜನಿಕ ಉದ್ಯಮಗಳಲ್ಲಿ ಅನುಕಂಪ ಆಧಾರಿತ ಹುದ್ದೆಗಳನ್ನು ತುಂಬುವ ಸಂಬಂಧ ಸರ್ಕಾರದಿಂದ ಯಾವಾಗ ಆದೇಶ ಹೊರಡಿಸಲಾಗಿದೆ ; (ಪ್ರತಿಯನ್ನು ನೀಡುವುದು)

(ಇ) ಸದರಿ ಆದೇಶದ ಅನುಸಾರ ಸಾರ್ವಜನಿಕ ನಿಗಮಗಳಲ್ಲಿ ಎಷ್ಟು ಅನುಕಂಪ ಆಧಾರಿತ ಹುದ್ದೆಗಳನ್ನು ತುಂಬಲಾಗಿದೆ ; ಅನುಕಂಪದ ಆಧಾರದ ಮೇಲೆ ನೇಮಕಗೊಂಡ ನೌಕರನ ಹೆಸರು, ವಿಳಾಸ, ಹುದ್ದೆ ನೇಮಕಗೊಂಡ ವರ್ಷ ಒಳಗೊಂಡಂತೆ ನಿಗಮವಾರು ವಿವರವಾದ ಮಾಹಿತಿ ನೀಡುವುದು ;

(ಈ) ಇನ್ನು ಬಾಕಿ ಇರುವ ಅರ್ಜಿಗಳು ಎಷ್ಟು ; ಇವುಗಳನ್ನು ಯಾವ ಕಾಲಮಿತಿಯಲ್ಲಿ ಕೆಲಸ ನೀಡಿ ಅನುಕೂಲ ಕಲ್ಪಿಸಲಾಗುವುದು ; ಬಾಕಿ ಇರುವ ಅನುಕಂಪ ಆಧಾರದ ಅರ್ಜಿಗಳ ವಿವರವನ್ನು ನಿಗಮವಾರು ಮಾಹಿತಿ ನೀಡುವುದು ?

## ಹಟ್ಟಿ ಪಟ್ಟಣದಲ್ಲಿ ಇಂದಿರಾ ಕ್ಯಾಂಟೀನ್ ಪ್ರಾರಂಭಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭೦ (೧೯೯೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಲಿಂಗಸಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹಟ್ಟಿ ಚಿನ್ನದಗಣಿ ಕಂಪನಿಯ ಕಾರ್ಮಿಕರ ಹಾಗೂ ಸಾರ್ವಜನಿಕರ ಹಿತಾಸಕ್ತಿಗೆ ಅನುಗುಣವಾಗಿ ಹಟ್ಟಿ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಕ್ಯಾಂಪ್ ಪ್ರದೇಶದಲ್ಲಿ ಇಂದಿರಾ ಕ್ಯಾಂಟೀನ್ ಪ್ರಾರಂಭಿಸುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೆ ?

## ಕೊಪ್ಪಳ ಜಿಲ್ಲೆಯಲ್ಲಿನ ೨೦೨೪–೨೫ನೇ ಸಾಲಿನಲ್ಲಿ ನಡೆದ ಅಕ್ರಮ ಮರಳು ಸಾಗಾಣಿಕೆ ಪ್ರಕರಣಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭೧ (೧೯೭೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ೨೦೨೪–೨೫ನೇ ಸಾಲಿನಿಂದ ಇಲ್ಲಿಯವರೆಗೆ ಅಕ್ರಮ ಮರಳು ಸಾಗಾಣಿಕೆ ಪ್ರಕರಣಗಳು, ಅನಧಿಕೃತ ಗಣಿಕಾರಿಕೆ ಮತ್ತು ಖನಿಜ ಸಾಗಣೆ ಕುರಿತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ ಎಷ್ಟು ದಂಡ ಸಂಗ್ರಹಿಸಲಾಗಿದೆ ;

(ಆ) ಅಕ್ರಮ ಮರಳು ಸಾಗಾಣಿಕೆ ಹಾಗೂ ಅಕ್ರಮ ಗಣಿಗಾರಿಕೆಯಲ್ಲಿ ಪಾಲ್ಗೊಂಡವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಅಕ್ರಮ ಮರಳು ಸಾಗಾಣಿಕೆಯಿಂದ ಸರ್ಕಾರಕ್ಕೆ ಎಷ್ಟು ರಾಜಧನ ನಷ್ಟವಾಗಿದೆ ? (೨೦೨೩–೨೪ನೇ ಸಾಲಿನಿಂದ ಇಲ್ಲಿಯವರೆಗಿನ ಮಾಹಿತಿ ಒದಗಿಸುವುದು)

## ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಡಿಯಲ್ಲಿ ೨೦೨೩–೨೪ನೇ ಸಾಲಿನಲ್ಲಿ ಸಂಗ್ರಹವಾದ ಅನುದಾನ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭೨ (೧೯೮೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಡಿಯಲ್ಲಿ ೨೦೨೩–೨೪ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ಅನುದಾನ ಸಂಗ್ರಹವಾಗಿದೆ ; (ಕಲ್ಯಾಣ ಕರ್ನಾಟಕ ಜಿಲ್ಲೆಗಳ ಮಾಹಿತಿಯನ್ನು ಒದಗಿಸುವುದು)

(ಆ) ಈ ಅನುದಾನದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಅದಕ್ಕೆ ನಿಗಧಿಪಡಿಸಿದ ಅನುದಾನ ಎಷ್ಟು ;

(ಇ) ಈ ನಿಧಿಯಡಿಯಲ್ಲಿ ೨೦೨೩-೨೪ ರಿಂದ ಇಲ್ಲಿಯವರೆಗೆ ಪೂರ್ಣಗೊಂಡ ಪ್ರಗತಿ ಹಾಗೂ ಪ್ರಾರಂಭವಾಗದೇ ಇರುವ ಕಾಮಗಾರಿಗಳು ಎಷ್ಟು ; (ವಿವರ ಒದಗಿಸುವುದು)

(ಈ) ಅನುದಾನವನ್ನು ಶೀಘ್ರವಾಗಿ ಬಳಕೆ ಮಾಡಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-208/500 ಪ್ರತಿಗಳು/05–03–2026